ಮಂಗಳವಾರ
09 ಜೂನ್, 2026
ಸಂಪುಟ 02 । ಸಂಚಿಕೆ 4
04 ಪುಟಗಳು । ಬೆಲೆ 5.00 ರೂ
Mob: 9538786812
Office: 9480847498
PRGI/RNI: KNKAN/25/A1348

# ಡಿಜಿಟಲ್ ವಾರ್ತೆ

ಕನ್ನಡ ದಿನಪತ್ರಿಕೆ
ಕನ್ನಡಿಗರ ಶಕ್ತಿ



ಸಂಪಾದಕರು
ಅಭಿಷೇಕ್ ಡಿ.ಆರ್

## ಎಲ್ಲರೂ ಒಟ್ಟಿಗೇ ಹೋಗೋಣ, 2028ರಲ್ಲಿ ಪಕ್ಷವನ್ನು ಅಧಿಕಾರಕ್ಕೆ ತರೋಣ: ಸಿಎಂ ಡಿಕೆಶಿ

### ಗ್ರಾಮ ಮಟ್ಟದಿಂದಲೇ ಪಕ್ಷ ಕಟ್ಟೋಣ, ಮುಂದಿನ ಚುನಾವಣೆಯಲ್ಲಿ ದೊಡ್ಡ ಗೆಲುವು ಸಾಧಿಸೋಣ: ಡಿಕೆಶಿ



**ಬೆಂಗಳೂರು:** ಪಕ್ಷದ ಸಂಘಟನೆ ಬಲವಾಗಿದ್ದರೆ ಮಾತ್ರ ಚುನಾವಣಾ ಗೆಲುವು ಸಾಧ್ಯ. ಹೀಗಾಗಿ ಕಾಂಗ್ರೆಸ್‌ನ ಪ್ರತಿಯೊಬ್ಬ ಮುಖಂಡ ಮತ್ತು ಕಾರ್ಯಕರ್ತರು ವೈಯಕ್ತಿಕ ಭಿನ್ನಾಭಿಪ್ರಾಯಗಳನ್ನು ಮರೆತು ಒಗ್ಗಟ್ಟಿನಿಂದ ಕೆಲಸ ಮಾಡಬೇಕು. 2028ರ ವಿಧಾನಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಪಕ್ಷವನ್ನು ಮತ್ತೊಮ್ಮೆ ಅಧಿಕಾರಕ್ಕೆ ತರುವ ಗುರಿಯೊಂದಿಗೆ ಈಗಿನಿಂದಲೇ ಸಿದ್ಧತೆ ಆರಂಭಿಸಬೇಕು ಎಂದು ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಕರೆ ನೀಡಿದರು.

ಮೈಸೂರು ಜಿಲ್ಲೆಯ ಹುಣಸೂರು ಕ್ಷೇತ್ರದ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಮಾಜಿ ಶಾಸಕ ಎಚ್.ಪಿ. ಮಂಜುನಾಥ್ ಹಾಗೂ ಎಐಸಿಸಿ ವಕ್ತಾರ ಎಂ. ಲಕ್ಷ್ಮಣ್ ಅವರ ನೇತೃತ್ವದಲ್ಲಿ ಬೆಂಗಳೂರಿನ ಕುಮಾರಪಾರ್ಕ್ ಸರ್ಕಾರಿ ಅತಿಥಿ ಗೃಹದಲ್ಲಿ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿ ಮಾಡಿ ಅಭಿನಂದಿಸಿದರು. ಈ ವೇಳೆ ಮಾತನಾಡಿದ ಅವರು, ಪಕ್ಷದ ಬೆಳವಣಿಗೆ, ಸಂಘಟನೆ, ಕಾರ್ಯಕರ್ತರ ಪಾತ್ರ ಹಾಗೂ ಮುಂಬರುವ ರಾಜಕೀಯ ಸವಾಲುಗಳ ಕುರಿತು ವಿಸ್ತೃತವಾಗಿ ತಮ್ಮ ಅಭಿಪ್ರಾಯ ಹಂಚಿಕೊಂಡರು.

"ರಾಜಕೀಯ ಜೀವನದಲ್ಲಿ ಅನೇಕ ಏಳುಬೀಳುಗಳು ಬರುತ್ತವೆ. ಕೆಲವೊಮ್ಮೆ ನಮ್ಮ ನಡುವೆ ಭಿನ್ನಾಭಿಪ್ರಾಯಗಳು ಮೂಡಬಹುದು. ತಪ್ಪು ಮಾಹಿತಿ, ಅಪಪ್ರಚಾರ ಅಥವಾ ಸಂದರ್ಭಗಳ ಕಾರಣದಿಂದ ಒಬ್ಬರ ಬಗ್ಗೆ ಮತ್ತೊಬ್ಬರಿಗೆ ತಪ್ಪು ಕಲ್ಪನೆ ಉಂಟಾಗಬಹುದು. ಆದರೆ ಅವುಗಳನ್ನು ಮನಸ್ಸಿನಲ್ಲಿ ಇಟ್ಟುಕೊಂಡು ಮುಂದುವರಿದರೆ ಪಕ್ಷಕ್ಕೆ ಹಾನಿಯಾಗುತ್ತದೆ. ಆದ್ದರಿಂದ ಹಿಂದೆ ನಡೆದ ಕಹಿ ಘಟನೆಗಳು, ದ್ವೇಷ, ಅಸೂಯೆ, ಪ್ರತೀಕಾರದ ಮನೋಭಾವ ಇವೆಲ್ಲವನ್ನೂ ಮರೆತು ಪಕ್ಷದ ಹಿತಾಸಕ್ತಿಯನ್ನು ಮೊದಲ ಆದ್ಯತೆಯಾಗಿ ಪರಿಗಣಿಸಬೇಕು" ಎಂದು ಹೇಳಿದರು.

"ಇಂದು ಕಾಂಗ್ರೆಸ್ ಸರ್ಕಾರ ಅಧಿಕಾರದಲ್ಲಿದೆ. ಜನರು ನಮ್ಮ ಮೇಲೆ ಅಪಾರ ನಂಬಿಕೆ ಇಟ್ಟು ಅಧಿಕಾರ ನೀಡಿದ್ದಾರೆ. ಈ ನಂಬಿಕೆಯನ್ನು ಉಳಿಸಿಕೊಳ್ಳುವುದು ನಮ್ಮೆಲ್ಲರ ಜವಾಬ್ದಾರಿ. ಸರ್ಕಾರದ ಯೋಜನೆಗಳು, ಅಭಿವೃದ್ಧಿ ಕಾರ್ಯಕ್ರಮಗಳು ಮತ್ತು ಜನಪರ ನಿರ್ಧಾರಗಳನ್ನು ಪ್ರತಿಯೊಂದು ಮನೆಗೂ ತಲುಪಿಸುವ ಕೆಲಸ ಕಾರ್ಯಕರ್ತರು ಮಾಡಬೇಕು. ಸರ್ಕಾರ ಮಾಡುತ್ತಿರುವ ಕೆಲಸವನ್ನು ಜನರಿಗೆ ಮನವರಿಕೆ ಮಾಡಿಕೊಡುವ ಮೂಲಕ ಪಕ್ಷದ ನೆಲೆಯನ್ನು ಮತ್ತಷ್ಟು ಗಟ್ಟಿಗೊಳಿಸಬೇಕು" ಎಂದು ಸಲಹೆ ನೀಡಿದರು.

ಮುಖ್ಯಮಂತ್ರಿ ಹುದ್ದೆ ಕುರಿತು ಭಾವುಕರಾಗಿ ಮಾತನಾಡಿದ ಅವರು, "ಇಂದು ನಾನು ಮುಖ್ಯಮಂತ್ರಿ ಹುದ್ದೆಯಲ್ಲಿದ್ದರೆ ಅದು ನನ್ನ ವೈಯಕ್ತಿಕ ಸಾಧನೆಯಲ್ಲ. ಈ ಹುದ್ದೆ ನಿಮ್ಮೆಲ್ಲರದು. ರಾಜ್ಯದ ಜನರದು. ನೀವು ಇಲ್ಲದೆ ನಾನು ಇಲ್ಲ. ನಿಮ್ಮ ಪರಿಶ್ರಮ, ವಿಶ್ವಾಸ, ಪ್ರೀತಿ, ಹೋರಾಟ ಮತ್ತು ಪಕ್ಷದ ಮೇಲಿನ ನಿಷ್ಠೆಯೇ ನನ್ನನ್ನು ಈ ಸ್ಥಾನಕ್ಕೆ ತಂದಿದೆ. ಹೀಗಾಗಿ ನಿಮ್ಮ ಋಣವನ್ನು ನಾನು ಎಂದಿಗೂ ಮರೆಯುವುದಿಲ್ಲ" ಎಂದು ಹೇಳಿದರು.

"ಕಾಂಗ್ರೆಸ್ ಪಕ್ಷವನ್ನು ಬಲಪಡಿಸಲು ಸಾವಿರಾರು ಕಾರ್ಯಕರ್ತರು ವರ್ಷಗಳ ಕಾಲ ಹೋರಾಟ ಮಾಡಿದ್ದಾರೆ. ಕೆಲವರು ಸಂಕಷ್ಟ ಎದುರಿಸಿದ್ದಾರೆ. ಕೆಲವರು ಜೈಲಿಗೂ ಹೋಗಿದ್ದಾರೆ. ಕೆಲವರು ತಮ್ಮ ವೈಯಕ್ತಿಕ ಜೀವನಕ್ಕಿಂತ ಪಕ್ಷದ ಕೆಲಸಕ್ಕೆ ಹೆಚ್ಚಿನ ಆದ್ಯತೆ ನೀಡಿದ್ದಾರೆ. ಇಂತಹ ಕಾರ್ಯಕರ್ತರ ಶ್ರಮವೇ ಕಾಂಗ್ರೆಸ್ ಪಕ್ಷದ ನಿಜವಾದ ಬಲವಾಗಿದೆ. ಅವರ ಕೊಡುಗೆಯನ್ನು ಎಂದಿಗೂ ಮರೆತಿಲ್ಲ, ಮರೆಯುವುದಿಲ್ಲ" ಎಂದು ತಿಳಿಸಿದರು.

ಮುಂಬರುವ 2028ರ ವಿಧಾನಸಭೆ ಚುನಾವಣೆ ಕುರಿತು ಮಾತನಾಡಿದ ಅವರು, "ನಮ್ಮ ಮುಂದಿನ ಗುರಿ ಸ್ಪಷ್ಟವಾಗಿರಬೇಕು. 2028ರಲ್ಲಿ ಮತ್ತೆ ಕಾಂಗ್ರೆಸ್ ಸರ್ಕಾರ ಅಧಿಕಾರಕ್ಕೆ ಬರಬೇಕು. ಅದಕ್ಕಾಗಿ ಈಗಿನಿಂದಲೇ ಕ್ಷೇತ್ರ ಮಟ್ಟದಲ್ಲಿ ಸಂಘಟನೆ ಬಲಪಡಿಸುವ ಕೆಲಸ ಆರಂಭಿಸಬೇಕು. ಪ್ರತಿಯೊಂದು ಬೂತ್, ಪ್ರತಿಯೊಂದು ಗ್ರಾಮ, ಪ್ರತಿಯೊಂದು ವಾರ್ಡ್‌ನಲ್ಲಿ ಪಕ್ಷವನ್ನು ಇನ್ನಷ್ಟು ಗಟ್ಟಿಗೊಳಿಸಬೇಕು. ಕಾರ್ಯಕರ್ತರು ಮನೆಮನೆಗೆ ತೆರಳಿ ಜನರ ಸಮಸ್ಯೆಗಳನ್ನು ಆಲಿಸಿ ಅವರಿಗೆ ಸರ್ಕಾರದ ಯೋಜನೆಗಳ ಮಾಹಿತಿ ನೀಡಬೇಕು" ಎಂದರು.

"ಯಾವುದೇ ಕಾರಣಕ್ಕೂ ಮೈಮರೆಯಬಾರದು. ಚುನಾವಣೆ ಇನ್ನೂ ದೂರ ಇದೆ ಎಂದು ಸುಮ್ಮನಿರಬಾರದು. ಪ್ರತಿದಿನವೂ ಚುನಾವಣೆಯ ಸಿದ್ಧತೆಯ ಭಾಗವಾಗಿರಬೇಕು. ಜನರೊಂದಿಗೆ ನಿರಂತರ ಸಂಪರ್ಕದಲ್ಲಿರಬೇಕು. ಅವರ ವಿಶ್ವಾಸ ಗಳಿಸಬೇಕು. ಆಗ ಮಾತ್ರ ಮುಂದಿನ ಚುನಾವಣೆಯಲ್ಲಿ ದೊಡ್ಡ ಗೆಲುವು ಸಾಧಿಸಲು ಸಾಧ್ಯ" ಎಂದು ಹೇಳಿದರು.


ಮತದಾರರ ಹಕ್ಕಿನ ರಕ್ಷಣೆಯ ಕುರಿತು ಎಚ್ಚರಿಕೆ ನೀಡಿದ ಸಿಎಂ, "ಪ್ರಜಾಪ್ರಭುತ್ವದಲ್ಲಿ ಮತವೇ ಅತ್ಯಂತ ದೊಡ್ಡ ಶಕ್ತಿ. ನಿಮ್ಮ ಮತವನ್ನು ಕಾಪಾಡಿಕೊಳ್ಳಬೇಕು. ಎಸ್‌ಐಆರ್ ಸೇರಿದಂತೆ ಯಾವುದೇ ರೀತಿಯ ಸಂಚು, ಗೊಂದಲ ಅಥವಾ ತಪ್ಪು ಮಾಹಿತಿಗೆ ಬಲಿಯಾಗಬಾರದು. ಮತದಾರರ ಪಟ್ಟಿಗಳ ಬಗ್ಗೆ ಎಚ್ಚರಿಕೆಯಿಂದ ಇರಬೇಕು. ಪ್ರತಿಯೊಬ್ಬ ಕಾರ್ಯಕರ್ತರೂ ತಮ್ಮ ವ್ಯಾಪ್ತಿಯ ಮತದಾರರ ಹಕ್ಕುಗಳನ್ನು ರಕ್ಷಿಸುವ ಹೊಣೆಗಾರಿಕೆ ವಹಿಸಬೇಕು" ಎಂದು ಕರೆ ನೀಡಿದರು.

"ನಮ್ಮ ನಡುವೆ ಇರುವ ಸಣ್ಣಪುಟ್ಟ ಭಿನ್ನಾಭಿಪ್ರಾಯಗಳನ್ನು ಮರೆತು ಎಲ್ಲರನ್ನು ಒಟ್ಟಿಗೆ ಕರೆದುಕೊಂಡು ಹೋಗಬೇಕು. ಪಕ್ಷದಲ್ಲಿ ಯಾರೂ ಶತ್ರುಗಳಲ್ಲ. ಕಾಂಗ್ರೆಸ್ ಕುಟುಂಬದಲ್ಲಿ ಪ್ರತಿಯೊಬ್ಬರೂ ನಮ್ಮವರೇ. ಎಲ್ಲರಿಗೂ ಗೌರವ ನೀಡಿ, ಎಲ್ಲರ ಅಭಿಪ್ರಾಯಕ್ಕೆ ಬೆಲೆ ನೀಡಿ, ಒಗ್ಗಟ್ಟಿನಿಂದ ಕೆಲಸ ಮಾಡಿದರೆ ಯಾವ ಶಕ್ತಿಯೂ ಕಾಂಗ್ರೆಸ್ ಪಕ್ಷವನ್ನು ತಡೆಯಲು ಸಾಧ್ಯವಿಲ್ಲ" ಎಂದು ಹೇಳಿದರು.

ಕೊನೆಯಲ್ಲಿ ಕಾರ್ಯಕರ್ತರಿಗೆ ಧೈರ್ಯ ತುಂಬಿದ ಸಿಎಂ, "ನಿಮ್ಮೆಲ್ಲರ ಶ್ರಮ ಮತ್ತು ಆಶೀರ್ವಾದವೇ ನಮ್ಮ ಸರ್ಕಾರದ ಶಕ್ತಿ. ಇದೇ ಉತ್ಸಾಹ, ಇದೇ ಒಗ್ಗಟ್ಟು ಮತ್ತು ಇದೇ ಬದ್ಧತೆಯೊಂದಿಗೆ ಕೆಲಸ ಮಾಡಿದರೆ 2028ರಲ್ಲಿ ಕಾಂಗ್ರೆಸ್ ಪಕ್ಷ ಇನ್ನಷ್ಟು ದೊಡ್ಡ ಗೆಲುವು ಸಾಧಿಸಿ ರಾಜ್ಯದ ಜನರಿಗೆ ಮತ್ತಷ್ಟು ಉತ್ತಮ ಆಡಳಿತ ನೀಡಲಿದೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ಸಂದರ್ಭದಲ್ಲಿ ಮಾಜಿ ಶಾಸಕ ಎಚ್.ಪಿ. ಮಂಜುನಾಥ್, ಎಐಸಿಸಿ ವಕ್ತಾರ ಎಂ. ಲಕ್ಷ್ಮಣ್ ಸೇರಿದಂತೆ ಹುಣಸೂರು ಕ್ಷೇತ್ರದ ಹಲವು ಮುಖಂಡರು, ಪದಾಧಿಕಾರಿಗಳು ಹಾಗೂ ಕಾರ್ಯಕರ್ತರು ಉಪಸ್ಥಿತರಿದ್ದರು.

## ದೇವೇಗೌಡರಿಗೆ ರಾಜ್ಯಸಭೆ ಟಿಕೆಟ್ ಮಿಸ್; ಮೈತ್ರಿಗೆ ಯಾವುದೇ ಸಮಸ್ಯೆ ಇಲ್ಲ: ಸುರೇಶ್ ಬಾಬು



ಬೆಂಗಳೂರು: ರಾಜ್ಯಸಭೆ ಚುನಾವಣೆಯಲ್ಲಿ ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡ ಅವರಿಗೆ ಬಿಜೆಪಿ ಟಿಕೆಟ್ ನೀಡದಿರುವ ವಿಚಾರದಿಂದ ಬಿಜೆಪಿ–ಜೆಡಿಎಸ್ ಮೈತ್ರಿಯಲ್ಲಿ ಯಾವುದೇ ಭಿನ್ನಾಭಿಪ್ರಾಯ ಉಂಟಾಗಿಲ್ಲ ಎಂದು ಜೆಡಿಎಸ್ ಶಾಸಕಾಂಗ ಪಕ್ಷದ ನಾಯಕ ಸಿ.ಬಿ. ಸುರೇಶ್ ಬಾಬು ಸ್ಪಷ್ಟಪಡಿಸಿದ್ದಾರೆ.

ವಿಧಾನಸೌಧದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದೇವೇಗೌಡರಿಗೆ ರಾಜ್ಯಸಭೆ ಟಿಕೆಟ್ ನೀಡುವಂತೆ ಜೆಡಿಎಸ್ ಪಕ್ಷವು ಬಿಜೆಪಿಯನ್ನು ಕೇಳಿರಲಿಲ್ಲ. ಜನರ ಆಶಯದಂತೆ ದೇವೇಗೌಡರು ಮತ್ತೊಮ್ಮೆ ರಾಜ್ಯಸಭೆಗೆ ತೆರಳಿ ಜನರ ಪರವಾಗಿ ಧ್ವನಿಯಾಗಬೇಕು ಎಂಬ ಅಭಿಪ್ರಾಯ ಇತ್ತೇ ಹೊರತು, ಟಿಕೆಟ್‌ಗಾಗಿ ಯಾವುದೇ ಅಧಿಕೃತ ಬೇಡಿಕೆ ಇಟ್ಟಿರಲಿಲ್ಲ ಎಂದು ಹೇಳಿದರು.

"ನಾವು ಟಿಕೆಟ್ ಕೇಳಿಯೇ ಇಲ್ಲ. ಹೀಗಿರುವಾಗ ಅಸಮಾಧಾನದ ಪ್ರಶ್ನೆಯೇ ಉದ್ಭವಿಸುವುದಿಲ್ಲ. ಬಿಜೆಪಿ ಟಿಕೆಟ್ ನೀಡದಿದ್ದರೂ ಮೈತ್ರಿಗೆ ಯಾವುದೇ ತೊಂದರೆ ಇಲ್ಲ" ಎಂದು ಅವರು ತಿಳಿಸಿದರು.

ಇದೇ ವೇಳೆ 2028ರ ವಿಧಾನಸಭೆ ಚುನಾವಣೆಯಲ್ಲೂ ಬಿಜೆಪಿ ಮತ್ತು ಜೆಡಿಎಸ್ ಒಟ್ಟಾಗಿ ಸ್ಪರ್ಧಿಸಲಿವೆ ಎಂದು ವಿಶ್ವಾಸ ವ್ಯಕ್ತಪಡಿಸಿದ ಅವರು, "ನಾವು ಟಿಕೆಟ್ ಕೇಳಿ, ಅವರು ನಿರಾಕರಿಸಿದ್ದರೆ ಅಸಮಾಧಾನ ಇರುತ್ತಿತ್ತು. ಆದರೆ ಅಂತಹ ಪರಿಸ್ಥಿತಿ ಇಲ್ಲ. ಮೈತ್ರಿ ಗಟ್ಟಿಯಾಗಿದ್ದು, ಎರಡೂ ಪಕ್ಷಗಳು ಒಗ್ಗಟ್ಟಿನಿಂದ ಮುಂದುವರಿಯಲಿವೆ" ಎಂದು ಹೇಳಿದರು.

## ನನಗೆ ಕೊಟ್ಟಿರೋ ಖಾತೆ ಬಗ್ಗೆ ಅಸಮಾಧಾನ ಇಲ್ಲ: ಬೈರತಿ ಸುರೇಶ್




**ಬೆಂಗಳೂರು:** ಖಾತೆ ಬಗ್ಗೆ ನನಗೆ ಯಾವುದೇ ಅಸಮಾಧಾನ ಇಲ್ಲ. ನಾನು ಸಂತೋಷದಿಂದ ಕೆಲಸ ಮಾಡುತ್ತೇನೆ ಎಂದು ಸಚಿವ ಬೈರತಿ ಸುರೇಶ್ ತಿಳಿಸಿದ್ದಾರೆ.

ವಿಧಾನಸೌಧದಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಹೈಕಮಾಂಡ್, ಸಿಎಂ ಡಿಕೆಶಿ, ಸಿದ್ದರಾಮಯ್ಯ ಆಶೀರ್ವಾದ ಮಾಡಿ ನನಗೆ ಮಂತ್ರಿ ಸ್ಥಾನ ಕೊಟ್ಟಿದ್ದಾರೆ. ಸಮರ್ಥವಾಗಿ ನಿಭಾಯಿಸುವ ಶಕ್ತಿ ದೇವರು ಕೊಡುವ ವಿಶ್ವಾಸ ಇದೆ. ಹಿಂದೆ ನಗರಾಭಿವೃದ್ಧಿ ಇಲಾಖೆಯಲ್ಲಿ ಹೊಸ ಕಾರ್ಯಕ್ರಮ ಮಾಡಿ ಉತ್ತಮವಾಗಿ ಇಲಾಖೆ ನಡೆಸಿದ್ದೆ. ಇದೇ ರೀತಿ ಕೆಲಸ ಸಾರಿಗೆ ಇಲಾಖೆಯಲ್ಲಿ ಮಾಡುತ್ತೇನೆ. ಹೈಕಮಾಂಡ್, ಕಾಂಗ್ರೆಸ್‌ಗೆ ಒಳ್ಳೆಯ ಹೆಸರು ತರುವ ಕೆಲಸ ಮಾಡುತ್ತೇನೆ ಎಂದರು.

ಸಾರಿಗೆ ಇಲಾಖೆಯಲ್ಲಿ ಕೆಲಸ ಮಾಡೋರು ನಮ್ಮ ಕರ್ನಾಟಕದವರೇ. ಸಾರಿಗೆ ಇಲಾಖೆಯಲ್ಲಿ ರಾಮಲಿಂಗಾ ರೆಡ್ಡಿ ಉತ್ತಮವಾಗಿ ಕೆಲಸ ಮಾಡಿದ್ದಾರೆ. ಇಲಾಖೆ ಸಮಸ್ಯೆ ಪರಿಹಾರ ಮಾಡುವ ಕೆಲಸ ಮಾಡುತ್ತೇನೆ. ಖಾತೆ ಬಗ್ಗೆ ನನಗೇನು ಬೇಸರ ಇಲ್ಲ. ಯಾವುದೇ ಇಲಾಖೆ ಕೊಟ್ಟರೂ ಸಂತೋಷವಾಗಿ ಕೆಲಸ ಮಾಡುತ್ತೇನೆ. ನಮ್ಮ ನಾಯಕರು, ಹೈಕಮಾಂಡ್ ನಾಯಕರು ಎಲ್ಲರೂ ಯೋಚನೆ ಮಾಡಿ ಇಷ್ಟು ದೊಡ್ಡ ಖಾತೆ ಕೊಟ್ಟಿದ್ದಾರೆ. ಸಂತೋಷದಿಂದ ಕೆಲಸ ಮಾಡುತ್ತೇನೆ ಎಂದು ತಿಳಿಸಿದರು.

ಜಮೀರ್‌ಗೆ ಮಂತ್ರಿ ಸ್ಥಾನ ಕೊಡುವ ವಿಚಾರವಾಗಿ ಮಾತನಾಡಿ, ಯಾರಿಗೆ ಮಂತ್ರಿ ಮಾಡಬೇಕು ಅಂತ ಹೈಕಮಾಂಡ್, ಸಿಎಂ ತೀರ್ಮಾನ ಮಾಡುತ್ತಾರೆ. ಎಲ್ಲರು ಕೂತು ಯಾರಿಗೆ ಮಂತ್ರಿ ಮಾಡಬೇಕು ಅಂತ ತೀರ್ಮಾನ ಮಾಡುತ್ತಾರೆ. ಶಾಸಕರು, ಮಾಜಿ ಮಂತ್ರಿಗಳು ಸಚಿವ ಸ್ಥಾನ ಕೇಳೋದು ತಪ್ಪಲ್ಲ. ಯಾರಿಗೆ ಕೊಡಬೇಕು ಅಂತ ಹೈಕಮಾಂಡ್ ತೀರ್ಮಾನ ಮಾಡುತ್ತದೆ ಎಂದು ನುಡಿದರು.

## ಪೋಕ್ಸೋ ಕೇಸ್: ಬಿಎಸ್ ಯಡಿಯೂರಪ್ಪಗೆ ರಿಲೀಫ್ ನೀಡಿದ ಹೈಕೋರ್ಟ್



**ಬೆಂಗಳೂರು:** ಅಪ್ರಾಪ್ತ ಬಾಲಕಿಗೆ ಲೈಂಗಿಕ ಕಿರುಕುಳ ನೀಡಿದ ಆರೋಪದಡಿ ದಾಖಲಾಗಿರುವ ಪೋಕ್ಸೊ (ಕಔಅಖಔ) ಪ್ರಕರಣಕ್ಕೆ ಸಂಬಂಧಿಸಿದಂತೆ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರಿಗೆ ಕರ್ನಾಟಕ ಹೈಕೋರ್ಟ್ ಮಹತ್ವದ ರಿಲೀಫ್ ನೀಡಿದೆ. ಪ್ರಕರಣದಲ್ಲಿ ಈಗಾಗಲೇ ಜಾಮೀನು ಪಡೆದಿರುವ ಯಡಿಯೂರಪ್ಪ ಅವರ ಮೇಲೆ ವಿಧಿಸಲಾಗಿದ್ದ ಪ್ರಮುಖ ಷರತ್ತೊಂದನ್ನು ಹೈಕೋರ್ಟ್ ಸಡಿಲಗೊಳಿಸಿದ್ದು, ಈ ಮೂಲಕ ಅವರು ದೇಶದ ಯಾವುದೇ ಭಾಗಕ್ಕೆ ತೆರಳಲು ನ್ಯಾಯಾಲಯದ ಪೂರ್ವಾನುಮತಿ ಪಡೆಯುವ ಅಗತ್ಯದಿಂದ ಮುಕ್ತರಾಗಿದ್ದಾರೆ.

ಈ ಆದೇಶದಿಂದಾಗಿ ಯಡಿಯೂರಪ್ಪ ಅವರು ರಾಜಕೀಯ, ಸಾಮಾಜಿಕ ಹಾಗೂ ವೈಯಕ್ತಿಕ ಕಾರ್ಯಕ್ರಮಗಳಿಗಾಗಿ ರಾಜ್ಯ ಹಾಗೂ ದೇಶದ ವಿವಿಧ ಭಾಗಗಳಿಗೆ ಯಾವುದೇ ಕಾನೂನಾತ್ಮಕ ಅಡಚಣೆ ಇಲ್ಲದೆ ಪ್ರವಾಸ ಕೈಗೊಳ್ಳಬಹುದಾಗಿದೆ. ಹಿರಿಯ ರಾಜಕಾರಣಿಯಾಗಿರುವ ಯಡಿಯೂರಪ್ಪ ಅವರು ರಾಷ್ಟ್ರೀಯ ಮತ್ತು ರಾಜ್ಯ ಮಟ್ಟದ ವಿವಿಧ ಕಾರ್ಯಕ್ರಮಗಳಲ್ಲಿ ಭಾಗವಹಿಸುವ ಅಗತ್ಯವಿರುವ ಹಿನ್ನೆಲೆಯಲ್ಲಿ ಈ ಆದೇಶಕ್ಕೆ ಮಹತ್ವ ಸಿಕ್ಕಿದೆ.

**ಜಾಮೀನು ಷರತ್ತು ಸಡಿಲಿಕೆ ಕೋರಿ ಅರ್ಜಿ:** ಪೋಕ್ಸೊ ಪ್ರಕರಣದಲ್ಲಿ ಜಾಮೀನು ಮಂಜೂರು ಮಾಡುವ ಸಂದರ್ಭದಲ್ಲಿ ನ್ಯಾಯಾಲಯವು ಯಡಿಯೂರಪ್ಪ ಅವರಿಗೆ ಕೆಲವು ಷರತ್ತುಗಳನ್ನು ವಿಧಿಸಿತ್ತು. ಅದರಂತೆ, ನ್ಯಾಯಾಲಯದ ಅನುಮತಿ ಇಲ್ಲದೆ ತನ್ನ ವ್ಯಾಪ್ತಿಯನ್ನು ಬಿಟ್ಟು ತೆರಳಬಾರದು ಎಂಬ ನಿರ್ಬಂಧವನ್ನೂ ಹೇರಲಾಗಿತ್ತು. ಈ ಷರತ್ತು ತಮ್ಮ ಸಾರ್ವಜನಿಕ ಹಾಗೂ ರಾಜಕೀಯ ಚಟುವಟಿಕೆಗಳಿಗೆ ಅಡ್ಡಿಯಾಗುತ್ತಿದೆ ಎಂದು ವಾದಿಸಿ, ಅದನ್ನು ಸಡಿಲಗೊಳಿಸುವಂತೆ ಕೋರಿ ಯಡಿಯೂರಪ್ಪ ಅವರು ಕರ್ನಾಟಕ ಹೈಕೋರ್ಟ್‌ಗೆ ಅರ್ಜಿ ಸಲ್ಲಿಸಿದ್ದರು.

ಅರ್ಜಿಯ ವಿಚಾರಣೆ ನಡೆಸಿದ ನ್ಯಾಯಾಲಯ, ಅರ್ಜಿದಾರರ ವಾದವನ್ನು ಪರಿಗಣಿಸಿ ಜಾಮೀನು ಷರತ್ತನ್ನು ಸಡಿಲಗೊಳಿಸಲು ಒಪ್ಪಿಗೆ ಸೂಚಿಸಿದೆ. ಇದರೊಂದಿಗೆ ನ್ಯಾಯಾಲಯದ ವ್ಯಾಪ್ತಿಯನ್ನು ಬಿಟ್ಟು ತೆರಳಲು ಪ್ರತೀ ಬಾರಿ ಅನುಮತಿ ಪಡೆಯಬೇಕಿದ್ದ ಕಡ್ಡಾಯ ನಿಯಮದಿಂದ ಯಡಿಯೂರಪ್ಪ ಅವರಿಗೆ ವಿನಾಯಿತಿ ದೊರೆತಿದೆ.

**ಪ್ರಕರಣದ ಹಿನ್ನೆಲೆ:** ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ವಿರುದ್ಧ 2024ರ ಮಾರ್ಚ್ ತಿಂಗಳಲ್ಲಿ ಪೋಕ್ಸೊ ಕಾಯ್ದೆಯಡಿ ಪ್ರಕರಣ ದಾಖಲಾಗಿತ್ತು. ದೂರಿನ ಪ್ರಕಾರ, 2024ರ ಫೆಬ್ರವರಿ 2ರಂದು ಬೆಂಗಳೂರಿನ ಸದಾಶಿವನಗರದಲ್ಲಿರುವ ತಮ್ಮ ನಿವಾಸದಲ್ಲಿ ಅಪ್ರಾಪ್ತ ಬಾಲಕಿಂಒಬ್ಬಳಿಗೆ ಲೈಂಗಿಕ ಕಿರುಕುಳ ನೀಡಲಾಗಿದೆ ಎಂದು ಆರೋಪಿಸಲಾಗಿದೆ.

ಈ ಕುರಿತು ಬಾಲಕಿಯ ತಾಯಿ ಮಾರ್ಚ್ 14, 2024ರಂದು ಸದಾಶಿವನಗರ ಪೊಲೀಸ್ ಠಾಣೆಯಲ್ಲಿ ದೂರು ದಾಖಲಿಸಿದ್ದರು. ಹಳೆಯ ಲೈಂಗಿಕ ದೌರ್ಜನ್ಯ ಪ್ರಕರಣವೊಂದರಲ್ಲಿ ನ್ಯಾಯ ಒದಗಿಸುವಂತೆ ಮನವಿ ಮಾಡಲು ತಾವು ಮತ್ತು ತಮ್ಮ ಪುತ್ರಿ ಯಡಿಯೂರಪ್ಪ ಅವರನ್ನು ಭೇಟಿಯಾಗಲು ತೆರಳಿದ್ದ ವೇಳೆ ಈ ಘಟನೆ ನಡೆದಿದೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿತ್ತು.

ದೂರು ದಾಖಲಾದ ಬಳಿಕ ಪ್ರಕರಣವು ರಾಜ್ಯ ರಾಜಕೀಯ ವಲಯದಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸವಾಗಿತ್ತು. ಪ್ರಕರಣದ ಗಂಭೀರತೆಯನ್ನು ಪರಿಗಣಿಸಿ ತನಿಖೆಯನ್ನು ರಾಜ್ಯ ಸಿಐಡಿಗೆ ವಹಿಸಲಾಗಿತ್ತು. ಸಿಐಡಿ ಅಧಿಕಾರಿಗಳು ಹಲವು ಹಂತಗಳಲ್ಲಿ ತನಿಖೆ ನಡೆಸಿ ಸಾಕ್ಷ್ಯಾಧಾರಗಳನ್ನು ಸಂಗ್ರಹಿಸಿದ್ದರು.

**ಸಿಐಡಿ ಚಾರ್ಜ್‌ಶೀಟ್ ಸಲ್ಲಿಕೆ:** ಪ್ರಕರಣದ ತನಿಖೆ ಪೂರ್ಣಗೊಳಿಸಿದ ಸಿಐಡಿ, ಯಡಿಯೂರಪ್ಪ ಸೇರಿದಂತೆ ನಾಲ್ವರು ಆರೋಪಿಗಳ ವಿರುದ್ಧ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ (ಚಾರ್ಜ್‌ಶೀಟ್) ಸಲ್ಲಿಸಿತ್ತು. ಪ್ರಕರಣಕ್ಕೆ ಸಂಬಂಧಿಸಿದಂತೆ ಸಾಕ್ಷಿಗಳ ಹೇಳಿಕೆ, ದಾಖಲೆಗಳು ಹಾಗೂ ಇತರೆ ತನಿಖಾ ಮಾಹಿತಿಗಳನ್ನು ನ್ಯಾಯಾಲಯದ ಮುಂದೆ ಮಂಡಿಸಲಾಗಿತ್ತು.

ಈ ನಡುವೆ ಯಡಿಯೂರಪ್ಪ ಅವರು ನ್ಯಾಯಾಲಯದಿಂದ ಜಾಮೀನು ಪಡೆದುಕೊಂಡಿದ್ದರು. ಆದರೆ ಜಾಮೀನು ಷರತ್ತುಗಳ ಭಾಗವಾಗಿ ವಿಧಿಸಲಾಗಿದ್ದ ಸಂಚಾರ ನಿರ್ಬಂಧವನ್ನು ತೆಗೆದುಹಾಕುವಂತೆ ಅವರು ಮತ್ತೆ ನ್ಯಾಯಾಲಯದ ಮೊರೆ ಹೋಗಿದ್ದರು.

**ರಾಜಕೀಯ ವಲಯದಲ್ಲಿ ಚರ್ಚೆ:** ಹೈಕೋರ್ಟ್ ನೀಡಿರುವ ಈ ಆದೇಶ ರಾಜಕೀಯ ವಲಯದಲ್ಲೂ ಚರ್ಚೆಗೆ ಕಾರಣವಾಗಿದೆ. ಸಕ್ರಿಯ ರಾಜಕೀಯ ಜೀವನದಲ್ಲಿರುವ ಯಡಿಯೂರಪ್ಪ ಅವರು ಬಿಜೆಪಿ ಪಕ್ಷದ ಹಿರಿಯ ನಾಯಕರು ಹಾಗೂ ಮಾರ್ಗದರ್ಶಕರಲ್ಲಿ ಒಬ್ಬರಾಗಿದ್ದು, ರಾಜ್ಯ ಹಾಗೂ ರಾಷ್ಟ್ರೀಯ ಮಟ್ಟದ ವಿವಿಧ ಸಭೆಗಳು, ಪಕ್ಷದ ಕಾರ್ಯಕ್ರಮಗಳು ಮತ್ತು ಸಾರ್ವಜನಿಕ ಸಮಾರಂಭಗಳಲ್ಲಿ ಭಾಗವಹಿಸುತ್ತಿದ್ದಾರೆ.

ಈ ಹಿನ್ನೆಲೆಯಲ್ಲಿ ಪ್ರವಾಸಕ್ಕೆ ಸಂಬಂಧಿಸಿದ ನಿರ್ಬಂಧವನ್ನು ಸಡಿಲಿಸಿರುವುದು ಅವರ ರಾಜಕೀಯ ಚಟುವಟಿಕೆಗಳಿಗೆ ಅನುಕೂಲಕರವಾಗಲಿದೆ ಎಂದು ವಿಶ್ಲೇಷಿಸಲಾಗುತ್ತಿದೆ. ಆದರೆ ಪ್ರಕರಣದ ವಿಚಾರಣೆ ಮುಂದುವರಿಯಲಿದ್ದು, ಆರೋಪಗಳ ಸತ್ಯಾಸತ್ಯತೆ ಬಗ್ಗೆ ಅಂತಿಮ ತೀರ್ಮಾನ ನ್ಯಾಯಾಲಯದ ವಿಚಾರಣೆಯ ಬಳಿಕವೇ ಹೊರ ಬರಲಿದೆ.

ಸದ್ಯಕ್ಕೆ, ಜಾಮೀನು ಷರತ್ತು ಸಡಿಲಗೊಂಡಿರುವ ಹಿನ್ನೆಲೆಯಲ್ಲಿ ಬಿ.ಎಸ್. ಯಡಿಯೂರಪ್ಪ ಅವರು ದೇಶದ ಯಾವುದೇ ಭಾಗಕ್ಕೆ ತೆರಳಲು ಪ್ರತ್ಯೇಕ ಅನುಮತಿ ಪಡೆಯಬೇಕಾದ ಅಗತ್ಯವಿಲ್ಲದಂತಾಗಿದೆ. ಆದರೆ ಪ್ರಕರಣದ ವಿಚಾರಣೆ ಮತ್ತು ಕಾನೂನು ಪ್ರಕ್ರಿಯೆ ಎಂದಿನಂತೆ ಮುಂದುವರಿಯಲಿದೆ.




## 2013ರಲ್ಲಿ ನಾನು ಗೆದ್ದಿದ್ದರೆ ಸಿದ್ದು ಸಿಎಂ ಆಗುತ್ತಿರಲಿಲ್ಲ: ಪರಂ



**ತುಮಕೂರು:** ಮುಖ್ಯಮಂತ್ರಿ ಹುದ್ದೆ ಅಲಂಕರಿಸುವ ಕನಸು ತಮ್ಮ ರಾಜಕೀಯ ಜೀವನದಲ್ಲಿ ಮೂರು ಬಾರಿ ಕೈತಪ್ಪಿದೆ ಎಂದು ಉಪಮುಖ್ಯಮಂತ್ರಿ ಡಾ. ಜಿ. ಪರಮೇಶ್ವರ್ ಭಾವುಕರಾಗಿ ಹೇಳಿಕೊಂಡಿದ್ದಾರೆ. ತುಮಕೂರಿನಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ತಮ್ಮ ಸುದೀರ್ಘ ರಾಜಕೀಯ ಪಯಣ, ಮುಖ್ಯಮಂತ್ರಿ ಹುದ್ದೆಯ ನಿರೀಕ್ಷೆ ಮತ್ತು ಕೈತಪ್ಪಿದ ಅವಕಾಶಗಳ ಕುರಿತು ಮನದಾಳದ ಮಾತುಗಳನ್ನು ಹಂಚಿಕೊಂಡರು.

ರಾಜಕೀಯ ಜೀವನದಲ್ಲಿ ಹಲವು ಹುದ್ದೆಗಳನ್ನು ನಿರ್ವಹಿಸಿದ್ದರೂ ಮುಖ್ಯಮಂತ್ರಿ ಸ್ಥಾನ ಮಾತ್ರ ಕೈಗೆಟುಕಿಲ್ಲ ಎಂಬ ಬೇಸರವನ್ನು ವ್ಯಕ್ತಪಡಿಸಿದ ಪರಮೇಶ್ವರ್, "ನಾನು ರಾಜಕೀಯಕ್ಕೆ ಬಂದ ದಿನದಿಂದಲೂ ಜನಸೇವೆ ಮಾಡುವ ಉದ್ದೇಶ ಹೊಂದಿದ್ದೆ. ಪಕ್ಷ ಸಂಘಟನೆಗಾಗಿ ಹಗಲಿರುಳು ದುಡಿದಿದ್ದೇನೆ. ರಾಜ್ಯ ಕಾಂಗ್ರೆಸ್ ಅಧ್ಯಕ್ಷನಾಗಿ ಹಲವು ವರ್ಷಗಳ ಕಾಲ ಪಕ್ಷವನ್ನು ಕಟ್ಟಿದ್ದೇನೆ. ಆದರೆ ಮುಖ್ಯಮಂತ್ರಿ ಆಗುವ ಅವಕಾಶ ಮಾತ್ರ ಪ್ರತಿ ಬಾರಿ ಕೊನೆಯ ಕ್ಷಣದಲ್ಲಿ ಕೈತಪ್ಪಿದೆ" ಎಂದು ಹೇಳಿದರು.

2013ರ ವಿಧಾನಸಭೆ ಚುನಾವಣೆಯನ್ನು ನೆನಪಿಸಿಕೊಂಡ ಅವರು, "ಅಂದು ನಾನು ಚುನಾವಣೆಯಲ್ಲಿ ಸೋತಿದ್ದೆ. ನಾನು ಗೆದ್ದಿದ್ದರೆ ಪರಿಸ್ಥಿತಿ ಬೇರೆ ರೀತಿಯಲ್ಲಿರುತ್ತಿತ್ತು. ಆ ಸಮಯದಲ್ಲಿ ಮುಖ್ಯಮಂತ್ರಿ ಹುದ್ದೆಯ ಪ್ರಮುಖ ಆಕಾಂಕ್ಷಿಯಾಗಿದ್ದೆ. ಆದರೆ ಸೋಲಿನ ಪರಿಣಾಮವಾಗಿ ಆ ಅವಕಾಶ ಕಳೆದುಕೊಂಡೆ. ನಾನು ಗೆದ್ದಿದ್ದರೆ ಸಿದ್ದರಾಮಯ್ಯ ಅವರು ಮುಖ್ಯಮಂತ್ರಿ ಆಗುತ್ತಿರಲಿಲ್ಲ ಎಂಬ ಮಾತನ್ನು ಹೇಳುವುದರಲ್ಲಿ ಯಾವುದೇ ಹಿಂಜರಿಕೆ ಇಲ್ಲ" ಎಂದು ನೇರವಾಗಿ ಹೇಳಿದರು.

2018ರ ರಾಜಕೀಯ ಬೆಳವಣಿಗೆಗಳ ಬಗ್ಗೆಯೂ ಅವರು ಮುಕ್ತವಾಗಿ ಮಾತನಾಡಿದರು. "ಆ ಚುನಾವಣೆಯಲ್ಲಿ ಕಾಂಗ್ರೆಸ್ 80 ಸ್ಥಾನಗಳನ್ನು ಗೆದ್ದಿತ್ತು. ನಮ್ಮ ಪಕ್ಷ ಅಧಿಕಾರ ರಚನೆಗೆ ಅವಕಾಶ ಹೊಂದಿತ್ತು. ಆದರೆ ರಾಜಕೀಯ ಪರಿಸ್ಥಿತಿಯಿಂದ ಜೆಡಿಎಸ್ ಜೊತೆ ಮೈತ್ರಿ ಸರ್ಕಾರ ರಚನೆಯಾಯಿತು. ಆಗ ಎಚ್.ಡಿ. ಕುಮಾರಸ್ವಾಮಿ ಅವರು ಮುಖ್ಯಮಂತ್ರಿ ಆದರು. ಆ ಸಂದರ್ಭದಲ್ಲಿ ನನ್ನ ಹೆಸರೂ ಮುಖ್ಯಮಂತ್ರಿ ಹುದ್ದೆಗೆ ಕೇಳಿಬಂದಿತ್ತು. ಆದರೆ ಪಕ್ಷದ ನಿರ್ಧಾರಕ್ಕೆ ನಾನು ಬದ್ಧನಾಗಿ ಉಳಿದೆ" ಎಂದರು.

ಮುಖ್ಯಮಂತ್ರಿ ಹುದ್ದೆಗಾಗಿ ಎಂದಿಗೂ ಬಂಡಾಯ ಅಥವಾ ಒತ್ತಡದ ರಾಜಕಾರಣ ಮಾಡಿಲ್ಲ ಎಂದು ಹೇಳಿದ ಅವರು, "ನಾನು ಯಾವತ್ತೂ ಹುದ್ದೆಗಾಗಿ ಪಕ್ಷಕ್ಕೆ ತೊಂದರೆ ಕೊಟ್ಟಿಲ್ಲ. ಪಕ್ಷ ಏನು ತೀರ್ಮಾನ ಮಾಡಿದರೂ ಅದನ್ನು ಗೌರವಿಸಿದ್ದೇನೆ. ನನ್ನ ರಾಜಕೀಯ ಜೀವನದಲ್ಲಿ ಪಕ್ಷದ ನಿರ್ಧಾರವೇ ಅಂತಿಮ ಎಂದು ನಂಬಿಕೊಂಡು ಬಂದಿದ್ದೇನೆ" ಎಂದು ಹೇಳಿದರು.

ಇತ್ತೀಚಿನ ರಾಜಕೀಯ ಬೆಳವಣಿಗೆಗಳ ಬಗ್ಗೆ ಮಾತನಾಡಿದ ಪರಮೇಶ್ವರ್, "ಈ ಬಾರಿಯೂ ಮುಖ್ಯಮಂತ್ರಿ ಹುದ್ದೆಯ ನಿರೀಕ್ಷೆ ಇತ್ತು. ಹಲವು ಕಾರ್ಯಕರ್ತರು, ಮುಖಂಡರು ಮತ್ತು ಬೆಂಬಲಿಗರು ನನಗೆ ಅವಕಾಶ ಸಿಗಬಹುದು ಎಂದು ಭಾವಿಸಿದ್ದರು. ಆದರೆ ರಾಜಕೀಯ ಪರಿಸ್ಥಿತಿಗಳು, ಪಕ್ಷದ ಲೆಕ್ಕಾಚಾರಗಳು ಮತ್ತು ಇತರ ಕಾರಣಗಳಿಂದ ಅದು ಸಾಧ್ಯವಾಗಲಿಲ್ಲ" ಎಂದು ಹೇಳಿದರು.

ಹೈಕಮಾಂಡ್ ಜೊತೆಗಿನ ಮಾತುಕತೆಯನ್ನು ನೆನಪಿಸಿ ಕೊಂಡ ಅವರು, "ನನಗೆ ವೈಯ ಕ್ತಿಕವಾಗಿ ಹುದ್ದೆಗಿಂತ ಪಕ್ಷ ಮುಖ್ಯ. ಹೈಕಮಾಂಡ್‌ಗೆ ನಾನು ಸ್ಪಷ್ಟವಾಗಿ ಹೇಳಿದ್ದೆ. ಮುಖ್ಯಮಂತ್ರಿ ಸ್ಥಾನ ನೀಡಲು ಸಾಧ್ಯವಿಲ್ಲ ಎಂದರೆ ನೇರವಾಗಿ ಹೇಳಿ. ನನಗೆ ಇನ್ನೂ ಹಲವು ಜವಾಬ್ದಾರಿಗಳಿವೆ. ನಾನು ನನ್ನ ಕೆಲಸ ಮುಂದುವರಿಸುತ್ತೇನೆ ಎಂದು ಹೇಳಿದ್ದೆ. ಕೊನೆಗೆ ಪಕ್ಷ ನನ್ನ ಮೇಲೆ ವಿಶ್ವಾಸವಿಟ್ಟು ಉಪಮುಖ್ಯಮಂತ್ರಿ ಹುದ್ದೆಯ ಜವಾಬ್ದಾರಿ ನೀಡಿದೆ" ಎಂದು ತಿಳಿಸಿದರು.

ಉಪಮುಖ್ಯ ಮಂತ್ರಿಯಾಗಿ ಕಾರ್ಯನಿರ್ವಹಿಸು ತ್ತಿರುವ ಕುರಿತು ಮಾತನಾಡಿದ ಅವರು, "ನನಗೆ ಯಾವ ಹುದ್ದೆ ಕೊಟ್ಟರೂ ಪ್ರಾಮಾಣಿಕವಾಗಿ ಕೆಲಸ ಮಾಡುತ್ತೇನೆ. ಮುಖ್ಯಮಂತ್ರಿ ಆಗದಿದ್ದರೂ ಜನರ ಸೇವೆ ಮಾಡುವ ಅವಕಾಶ ಕಡಿಮೆಯಾಗುವುದಿಲ್ಲ. ಇಂದು ನನಗೆ ನೀಡಿರುವ ಜವಾಬ್ದಾರಿಯನ್ನು ಅತ್ಯಂತ ನಿಷ್ಠೆ ಮತ್ತು ಬದ್ಧತೆಯಿಂದ ನಿರ್ವಹಿಸುತ್ತಿದ್ದೇನೆ" ಎಂದು ಹೇಳಿದರು.

ತಮ್ಮ ರಾಜಕೀಯ ಜೀವನದ ಹೋರಾಟವನ್ನು ಸ್ಮರಿಸಿದ ಪರಮೇಶ್ವರ್, "ಗ್ರಾಮೀಣ ಹಿನ್ನೆಲೆಯಿಂದ ಬಂದ ನಾನು ಸಾಮಾನ್ಯ ಕಾರ್ಯಕರ್ತನಾಗಿ ರಾಜಕೀಯ ಪ್ರವೇಶಿಸಿದೆ. ಹಲವು ಏಳುಬೀಳುಗಳನ್ನು ಕಂಡಿದ್ದೇನೆ. ಸೋಲು–ಗೆಲುವು ಎರಡನ್ನೂ ಅನುಭವಿಸಿದ್ದೇನೆ. ಆದರೆ ಪಕ್ಷ ಮತ್ತು ಜನರ ಮೇಲಿನ ನಂಬಿಕೆಯನ್ನು ಎಂದಿಗೂ ಕಳೆದುಕೊಂಡಿಲ್ಲ. ಮುಖ್ಯಮಂತ್ರಿ ಹುದ್ದೆ ಸಿಗದಿದ್ದರೂ ಜನರ ಪ್ರೀತಿ ಮತ್ತು ವಿಶ್ವಾಸವೇ ನನಗೆ ದೊಡ್ಡ ಗೌರವ" ಎಂದು ಭಾವುಕರಾಗಿ ನುಡಿದರು.

ಸರ್ಕಾರದ ಕಾರ್ಯವೈಖರಿ ಕುರಿತು ಮಾತನಾಡಿದ ಅವರು, "ಜನರು ನಮ್ಮನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದಾರೆ. ಆದ್ದರಿಂದ ಸರ್ಕಾರದ ಪ್ರತಿಯೊಬ್ಬರೂ ಜವಾಬ್ದಾರಿಯಿಂದ ನಡೆದುಕೊಳ್ಳಬೇಕು. ಯಾವುದೇ ರೀತಿಯ ಕುಂದುಕೊರತೆ ಉಂಟಾಗದಂತೆ ಎಲ್ಲರನ್ನು ವಿಶ್ವಾಸಕ್ಕೆ ತೆಗೆದುಕೊಂಡು ಕೆಲಸ ಮಾಡುತ್ತೇವೆ. ರಾಜ್ಯದ ಅಭಿವೃದ್ಧಿ, ಜನರ ಸಮಸ್ಯೆಗಳ ಪರಿಹಾರ ಮತ್ತು ಸರ್ಕಾರದ ಯೋಜನೆಗಳ ಪರಿಣಾಮಕಾರಿ ಅನುಷ್ಠಾನಕ್ಕೆ ಆದ್ಯತೆ ನೀಡುತ್ತೇವೆ" ಎಂದರು.

"ಮುಖ್ಯಮಂತ್ರಿ ಹುದ್ದೆ ನನ್ನ ಕನಸಾಗಿತ್ತು, ಇಂದಿಗೂ ಆ ಹುದ್ದೆಯ ಬಗ್ಗೆ ಗೌರವವಿದೆ. ಆದರೆ ಯಾವ ಹುದ್ದೆಯಲ್ಲಿದ್ದರೂ ಜನರ ಸೇವೆಯೇ ನನ್ನ ಮುಖ್ಯ ಗುರಿ. ಜನರ ಆಶೀರ್ವಾದ ಮತ್ತು ಪಕ್ಷದ ವಿಶ್ವಾಸ ಇರುವವರೆಗೂ ರಾಜ್ಯದ ಅಭಿವೃದ್ಧಿಗಾಗಿ ದುಡಿಯುತ್ತೇನೆ" ಎಂದು ಪರಮೇಶ್ವರ್ ತಮ್ಮ ಭಾಷಣವನ್ನು ಮುಕ್ತಾಯಗೊಳಿಸಿದರು.

ಪರಮೇಶ್ವರ್ ಅವರ ಈ ಭಾವನಾತ್ಮಕ ಹೇಳಿಕೆಗಳು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದ ಕಾರ್ಯಕರ್ತರು ಮತ್ತು ಮುಖಂಡರ ಗಮನ ಸೆಳೆದಿದ್ದು, ರಾಜ್ಯ ರಾಜಕೀಯ ವಲಯದಲ್ಲೂ ವ್ಯಾಪಕ ಚರ್ಚೆಗೆ ಕಾರಣವಾಗಿವೆ.

## ಯತೀಂದ್ರಗೆ ಮೈಸೂರು ಜಿಲ್ಲಾ ಕಾಂಗ್ರೆಸ್ ಮುಖಂಡರಿಂದ ಸನ್ಮಾನ



**ತಾಂಡವಪುರ:** ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಸಂಪುಟದಲ್ಲಿ ನೂತನ ಸಚಿವರಾಗಿ ನೇಮಕಗೊಂಡ ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯನವರನ್ನು ಮೈಸೂರು ಜಿಲ್ಲಾ ಕಾಂಗ್ರೆಸ್ ಕಾಂಗ್ರೆಸ್ ಮುಖಂಡರು ಸನ್ಮಾನಿಸಿ ಗೌರವಿಸಿ ಅಭಿನಂದನೆ ಸಲ್ಲಿಸಿದರು

ಬಳಿಕ ನೂತನ ಸಚಿವ ಡಾಕ್ಟರ್ ಯತೀಂದ್ರ ಸಿದ್ರಾಮಯ್ಯನವರು ಮಾತನಾಡಿ ನಿಮ್ಮ ಪ್ರೀತಿಯ ಅಭಿಮಾನಕ್ಕೆ ನಾವು ಸದಾ ಚಿರಋಣಿ ಅದರಲ್ಲೂ ವರುಣ ವಿಧಾನಸಭಾ ಕ್ಷೇತ್ರದ ಜನತೆಗೆ ಹಾಗೂ ಮೈಸೂರು ಜಿಲ್ಲಾ ಜನತೆಗೆ ಕಾಂಗ್ರೆಸ್ ಮುಖಂಡರು ಹಾಗೂ ಕಾರ್ಯಕರ್ತರಿಗೆ ನಾವು ಆಭಾರಿಯಾಗಿದ್ದೇವೆ ಎಂದು ಹೇಳಿದ ಅವರು ನಾನು ಸಚಿವರಾಗಿ ನೇಮಕವಾಗಲು ವರುಣ ಕ್ಷೇತ್ರದ ಜನತೆಯ ಆಶೀರ್ವಾದ ಎಂದು ಹೇಳಿದರು

ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಅವರ ಸಚಿವ ಸಂಪುಟದಲ್ಲಿ ನಾನು ಸಚಿವನಾಗಿದ್ದು ಪ್ರಾಮಾಣಿಕವಾಗಿ ಜನಪರ ಕಾರ್ಯಗಳನ್ನು ಕೈಗೊಳ್ಳುವ ಮೂಲಕ ನನ್ನ ಸೇವೆಯನ್ನು ಪ್ರಮಾಣಿಕವಾಗಿ ನಿಭಾಯಿಸುತ್ತೇನೆ ಎಂದು ತಿಳಿಸಿದರು

ಬಳಿಕ ಜಿಲ್ಲಾ ಪಂಚಾಯತಿ ಮಾಜಿ ಸದಸ್ಯ ರಾಕೇಶ್ ಪಾಪಣ್ಣ ಹಾಗೂ ಹಿಂದುಳಿದ ವರ್ಗಗಳ ಇಲಾಖೆಯ ನಿವೃತ್ತ ಅಧಿಕಾರಿಯು ಹಾಗೂ ಸಿದ್ದರಾಮಯ್ಯನವರ ಆಪ್ತ ಸಹಾಯಕವಾದ ಎಂ ರಾಮಯ್ಯನವರು ಮಾತನಾಡಿ ಡಾಕ್ಟರ್ ಯತೀಂದ್ರ ಸಿದ್ರಾಮಯ್ಯನವರು ಬರಿ ಮೈಸೂರು ಜಿಲ್ಲೆಗೆ ಸೀಮಿತವಾಗಿದ್ದರು ಈಗ ನಗರ ಅಭಿವೃದ್ಧಿ ಸಚಿವರಾಗಿ ನೇಮಕಗೊಂಡು ಇಡೀ ರಾಜ್ಯದ ಯುವ ನಾಯಕರಾಗಿ ಹೊರಹೊಮ್ಮುತ್ತಿದ್ದಾರೆ ಅವರು ಹಿಂದುಳಿದ ವರ್ಗದವರ ಕಷ್ಟ ಸುಖಗಳಲ್ಲಿ ನಿರಂತರವಾಗಿ ಭಾಗಿಯಾಗುವ ಮೂಲಕ ಹಿಂದುಳಿದ ವರ್ಗಗಳ ಯುವ ನಾಯಕರಾಗಿ ವರವನ್ನು ಮಾಡುತ್ತಿದ್ದಾರೆ ಅವರಿಗೆ ಕೊಟ್ಟಿರುವ ಜವಾಬ್ದಾರಿಯನ್ನು ಪ್ರಮಾಣಿಕವಾಗಿ ನಿಭಾಯಿಸುವ ಮೂಲಕ ಜನರ ಕಷ್ಟ ಸುಖಗಳಿಗೆ ಸ್ಪಂದಿಸುವ ಉತ್ತಮ ಗುಣವುಳ್ಳ ಯುವ ನಾಯಕ ಡಾಕ್ಟರ್ ಯತೀಂದ್ರ ಸಿದ್ದರಾಮಯ್ಯನವರು ಎಂದರು

ಈ ಸಂದರ್ಭದಲ್ಲಿ ಕೆ ಆರ್ ನಗರ ವಿಧಾನಸಭಾ ಕ್ಷೇತ್ರದ ಶಾಸಕರಾದ ಡಿ ರವಿಶಂಕರ್ ಎಂ ರಾಮಯ್ಯ ರಾಕೇಶ್ ಪಾಪಣ್ಣ ಎಂ ಶಿವಣ್ಣ ಸೇರಿದಂತೆ ಮುಂತಾದವರು ಹಾಜರಿದ್ದರು

## ಪೀಣ್ಯ 2ನೇ ಹಂತದ ವಸತಿ ಪ್ರದೇಶದಲ್ಲಿ ಸ್ಕ್ರ್ಯಾಪ್ ಗೋದಾಮುಗಳಿಂದ ತೊಂದರೆ

### ಗೋಡಾನ್ ಮಾಲಿಕರ ವಿರುದ್ಧ ಸ್ಥಳೀಯ ನಿವಾಸಿಗಳ ಆಕ್ರೋಶ । ಶಾಸಕರಿಂದ ಪರಿಹಾರದ ಭರವಸೆ

ಡಿಜಿಟಲ್ ವಾರ್ತೆ ವಿಶೇಷ ವರದಿ

**ಪೀಣ್ಯ ದಾಸರಹಳ್ಳಿ:** ಎಲ್ಲೆಂದರಲ್ಲಿ ಬಿಸಾಡುತ್ತಿರುವ ಸ್ಕ್ರ್ಯಾಪ್, ಅದರಿಂದ ಪಂಚರ್ ಆಗುತ್ತಿರುವ ವಾಹನಗಳು, ಅಕ್ಕಪಕ್ಕದ ಮನೆಗಳಿಗೆ ನುಗ್ಗುತ್ತಿರುವ ಹೆಗ್ಗಣಗಳು, ವಿಷಕಾರಿಕ ಹುಳುಗಳು, ಶಬ್ದ ಮಾಲಿನ್ಯದಿಂದ ಬೇಸತ್ತ ನಿವಾಸಿಗಳು. ಇದು ಪೀಣ್ಯ 2ನೇ ಹಂತದ ಜಿಕೆಡಬ್ಲ್ಯೂ ಬಡಾವಣೆ, ರಾಜಗೋಪಾಲ್ ನಗರ ಮುಂತಾದ ವಸತಿ ಪ್ರದೇಶದ ನಿವಾಸಿಗಳ ಅಳಲು.

ಅನಧಿಕೃತವಾಗಿ ತಲೆ ಎತ್ತುತ್ತಿರುವ ಸ್ಕ್ರ್ಯಾಪ್ ಗೋಡನ್ ಗಳು ಅಕ್ಕ ಪಕ್ಕದ ನಿವಾಸಿಗಳಿಗೆ ದಿನನಿತ್ಯದ ಗೋಳಾಗಿದೆ. ವಸತಿ ಪ್ರದೇಶದಲ್ಲಿ ಸ್ಕ್ರ್ಯಾಪ್ ಗೋಡನ್ ಪ್ರಾರಂಭಿಸಿ ಫ್ಯಾಕ್ಟರಿಗಳಿಂದ ತಂದ ಸ್ಕ್ರ್ಯಾಪ್ ಳನ್ನು ಮೂಟೆಗಟ್ಟಲೆ ಶೇಖರಿಸಿ ಕೆಲವೊಂದು ದಪ್ಪನೆಯ ಕಬ್ಬಿಣದ ವಸ್ತುಗಳನ್ನು ಚೂರು ಮಾಡಲು ಬಡಿಯುತ್ತಾರೆ. ಇದರಿಂದ ಅಕ್ಕಪಕ್ಕದ ನಿವಾಸಿಗಳಿಗೆ ಶಬ್ದದ ತೊಂದರೆಯಾಗುತ್ತಿದೆ ಎಂದು ಸ್ಥಳೀಯರು ಆಕ್ರೋಶ ವ್ಯಕ್ತಪಡಿಸಿದ್ದಾರೆ.



ಶಾಸಕ ಎಸ್. ಮುನಿರಾಜು ಮಾತನಾಡಿ ಅನಧಿಕೃತವಾಗಿ ವಸತಿ ಪ್ರದೇಶದಲ್ಲಿ ಸ್ಕ್ರ್ಯಾಪ್ ಗೋಡಾನ್ಗಳ ಮಾಲೀಕರು ತಮಗಿಷ್ಟ ಬಂದಂತೆ ವಹಿವಾಟು ಮಾಡ ುತ್ತಿದ್ದಾರೆ. ಇದು ನನ್ನ ಗಮನಕ್ಕೆ ಬಂದು ಈಗಾಗಲೇ ಎರಡು ಕಡೆ ಮುಚ್ಚಿಸಿದ್ದೇವೆ.ಇನ್ನು ಉಳಿದ ಕಡೆಗಳಲ್ಲಿ ಇರುವ ಗೋಡೌನ್ ಗಳಿಗೆ ನೋಟಿಸ್ ನೀಡಿ ತೆರವುಗೊಳಿಸಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ ಎಂದರು.



ಸ್ಥಳೀಯ ನಿವಾಸಿ ಶಿಲ್ಪಾ ರಾಣಿ ಮಾತನಾಡಿ, ಈ ಸ್ಕ್ರ್ಯಾಪ್ ಗೋದಾಮುಗಳಿಂದ ಅಕ್ಕಪಕ್ಕದ ಮನೆಗಳಿಗೆ ಹೆಗ್ಗಣಗಳು ಹಾಗೂ ಹಾವುಗಳು ಬರುತ್ತಿವೆ. ಇದರಿಂದ ನಮಗೆ ಇಲ್ಲಿ ವಾಸ ಮಾಡಲು ತುಂಬಾ ಕಷ್ಟವಾಗುತ್ತಿದೆ. ಗೋದಾಮುಗಳನ್ನು ಬೇರೆಡೆಗೆ ಸ್ಥಳಾಂತರಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಮನವಿ ಮಾಡಿದ್ದೇವೆ" ಎಂದು ಹೇಳಿದರು.




ಸ್ಥಳೀಯ ಬಿಜೆಪಿ ಮುಖಂಡ ಗುರು ನಿಶ್ಚಲ್ ಮಾತನಾಡಿ,' ಸ್ಕ್ರ್ಯಾಪ್ ಮಾಲೀಕರ ನಡತೆಯಿಂದ ಅನೇಕ ದೂರುಗಳು ಬಂದಿದ್ದವು ಅದಕ್ಕಾಗಿ ಶಾಸಕರ ಆದೇಶದ ಮೇರೆಗೆ ಅಧಿಕಾರಿಗಳೊಂದಿಗೆ ತೆರಳಿ ಸ್ಕ್ರ್ಯಾಪ್ ಮಾಲೀಕರಿಗೆ ಸ್ಕ್ರ್ಯಾಪ್ ಗೋದಮು ಮುಚ್ಚಲು ನೋಟಿಸ್ ನೀಡಲಾಗಿದೆ' ಎಂದು ತಿಳಿಸಿದರು.



ನಾನಾ ಕಡೆಗಳಲ್ಲಿ ಈ ತರಹದ ಸ್ಕ್ರ್ಯಾಪ್ ಗೋಡೌನ್ ಗಳನ್ನು ಮಾಡಿ ಅಕ್ಕಪಕ್ಕದ ಮನೆಯವರಿಗೆ ತೊಂದರೆ ನೀಡುತ್ತಿದ್ದಾರೆ. ಆದಷ್ಟು ಬೇಗ ಎಲ್ಲಾ ಕಡೆ ತೆರವುಗೊಳಿಸಿ ಕೈಗಾರಿಕಾ ಪ್ರದೇಶದಲ್ಲಿ ಸ್ಥಾಪಿಸಲು ಸೂಚಿಸಬೇಕು ಎಂದು ಸ್ಥಳೀಯ ನಿವಾಸಿ ಉಮೇಶ್ ರಾವಣ್ ತಿಳಿಸಿದರು.

Printed by: R Ramesh, Published by Abhishek D R On Behalf of Abhishek D R, Printed at Maruthi Enterprises. No.1159, Near Floor Mill, D Cross, Doddaballapura Town, Bengaluru rural, Karnataka - 561203, Published at No. 3769/1, Rajarathna Nivasa, KSRTC Layout, Near Ambedkar Stadium, Rayan Nagara, Nelamangala. Editor Abhishek D R.

# ರಾಜ್ಯದ ಜನತೆಯ ತೆರಿಗೆಯ ಹಣದಲ್ಲಿ ಭಾರತ್ ಜೋಡು ಮೂಲಕ ದುರ್ಬಳಕೆ: ಛಲವಾದಿ ನಾರಾಯಣಸ್ವಾಮಿ ಟೀಕೆ



**ದೇವನಹಳ್ಳಿ:** ಜನರ ತೆರಿಗೆಯ ಹಣ ಕಾಂಗ್ರೆಸ್ ಪಕ್ಷದ ಸಂಘಟನೆಗಾಗಿ ಭಾರತ್ ಜೋಡು ಹೆಸರಿನಲ್ಲಿ ಹಗಲು ದರೋಡೆ ಇಳಿದಿದೆ ಎಂದು ಮುಖ್ಯಮಂತ್ರಿ ಡಿಕೆ. ಶಿವಕುಮಾರ್ ಅವರನ್ನು ವಿರೋಧ ಪಕ್ಷದ ನಾಯಕ ಚಲವಾದಿ ನಾರಾಯಣಸ್ವಾಮಿ ಟೀಕಿಸಿದರು.

ಭಾರತೀಯ ಜನತಾ ಪಾರ್ಟಿಯ ದೇವನಹಳ್ಳಿ ಮಂಡ ಲದ ಬೂತ್ ಮಟ್ಟದ ಕಾರ್ಯಗಾರ ಹಾಗೂ ಎಸ್ ಐಆರ್ ಕು- ರಿತು ಸಂವಾದ ಕಾರ್ಯಕ್ರಮ ಚಾಲನೆ ನೀಡಿ ಮಾತನಾಡಿ, ಅರ್ಹ ಮತದಾರರ ಹೆಸರು ಸೇರ್ಪಡೆ, ಮೃತ ಹಾಗೂ ಸ್ಥಳಾಂತರಗೊಂಡ ಮತದಾರರ ಹೆಸರುಗಳನ್ನು ಕೈಬಿಡುವಿಕೆ ಸೇರಿದಂತೆ ಇತರೆ ಎಲ್ಲ ಕಾರ್ಯಗಳನ್ನು ನಿಯಮಾನುಸಾರ ಮತ್ತು ನಿಖರವಾಗಿ ನಿರ್ವಹಿಸುವಂತೆ ಸೂಚನೆ ನೀಡಿದರು. ಇದಕ್ಕಾಗಿ ತರಬೇತಿ ನೀಡಲಾಗುತ್ತಿದ್ದು, ತರಬೇತಿ ಪಡೆದು ಪರಿಷ್ಕರಣ ಕಾರ್ಯವನ್ನು ಯಶಸ್ವಿ ಗೊಳಿಸ ಬೇಕು.

ಮುಂಬರುವ ಚುನಾವಣೆಯಲ್ಲಿ ಬಿಜೆಪಿ ಶಾಸಕರು ಅದಿಕಾರಕ್ಕೆ ತಂದೇ ತರುತ್ತೇವೆ. ಅಕ್ರಮ ಮತಗಳನ್ನು ತೆಗೆದು ಹಾಕುವ ಉದ್ದೇಶದಿಂದ ಎಸ್ ಐಆರ್ ಸಂವಾದ ಕಾರ್ಯಕ್ರಮ ಅತ್ಯವಶ್ಯಕವೆಂದರು.

ಮಾಜಿ ಶಾಸಕರಾದ ಚಂದ್ರಣ್ಣ, ಮಾತನಾಡಿ, ಅಂಬ ರೀಷ್ ಅವರ ಅಧ್ಯಕ್ಷರು ಆದ ನಂತರ ತಾಲೂಕಿನ ಪ್ರತಿ ಬೂತ್ ಮಟ್ಟದಲ್ಲಿ ಕಟ್ಟುವಲ್ಲಿ ಶ್ರಮಿಸುತ್ತ ಬಂದಿದ್ದಾರೆ. ನಮ್ಮ ಪಕ್ಷದಲ್ಲಿ ಹಿಂದೆ ಚುನಾವಣೆಗೆ ಸ್ಪರ್ದೆ ಮಾಡಿದ ವರು ಪಕ್ಷದ ಕಾರ್ಯ ಚಟುವಟಿ- ಕೆಯಲ್ಲಿ ತೊಡಗಿಸ ಬೇಕು. ಆ ಸಮಾಜ, ಈ ಸಮಾಜ ಎಂದು ಹೇಳುತ್ತಿಲ್ಲ. ನಾವು ತಮ್ಮನ್ನು ಕರೆ ತಂದಿದ್ದೇವೆ ಯಾರಿಗೂ ಅಂಜುವ ಅಗತ್ಯವಿಲ್ಲ ಸುಮ್ಮನೆ ಮನೆಯಲ್ಲಿ ಕುಳಿತರೆ ಪ್ರಯೋಜ ನವಾಗದು. ಪಕ್ಷದ ಟಿಕೇಟ್ ವಿಚಾರವಾಗಿ ವರಿಷ್ಠರೂ ತಿರ್ಮಾನ ಮಾಡುತ್ತಾರೆ. ಅವರು ನನ್ನೊಡನೆ ಮಾತ ನಾಡಿ ಬಹಳ ಸಮಯವಾಗಿದೆ ಎಂದು ಬೇಸರ ವ್ಯಕ್ತಪಡಿಸಿದರು..

ಮತದಾರರ ಪಟ್ಟಿ ಪರಿಷ್ಕರಣೆ ಕಾರ್ಯ ವನ್ನು ಪಾರ ದರ್ಶಕವಾಗಿ ಹಾಗೂ ದೋಷ ರಹಿತವಾಗಿ ಕೈಗೊಳ್ಳುವ ಉದ್ದೇಶದಿಂದ ಸಂವಾದ ಕಾರ್ಯಕ್ರಮ ಹಮ್ಮಿ ಕೊಳ್ಳಲಾಗಿದೆ ಎಂದು ಬೆಂಗಳೂರಗ್ರಾಮಾಂತರ ಭಾರತೀಯ ಜನತಾ ಪಾರ್ಟಿ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ ಹೇಳಿದರು.

ಈ ಸಂದರ್ಭದಲ್ಲಿ ಆನಂದ ಗುರೂಜೀ, ಮಾಜಿ ಶಾಸಕರಾದ ಚಂದ್ರಣ್ಣ, ಭಾರತೀಯ ಜನತಾ ಪಾರ್ಟಿಯ ಬೆಂಗಳೂರು ಗ್ರಾಮಾಂತರ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ, ಎಸ್ಸಾ ಮೋರ್ಚಾ ಜಿಲ್ಲಾಧ್ಯಕ್ಷ ಬುಳ್ಳಹಳ್ಳಿ ರಾಜಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ನಾಗವೇಣಿ, ತಾಲೂಕು ಅಧ್ಯಕ್ಷ ಅಂಬರೀ ಷ್ ಗೌಡ, ಓಬಿಸಿ ಘಟಕದ ಅಧ್ಯಕ್ಷ ಬಿಕೆ. ನಾರಾಯಣಸ್ವಾಮಿ, ವಿಜಯಪುರ ಟೌನ್ ಅಧ್ಯಕ್ಷ ಪ್ರಭು, ಬಿದಲುಪುರ ಎಲ್ ಅನೀಲ್, ಬೀರಸಂದ್ರ ಸಿದ್ದಲಿಂಗಪ್ಪ, ವೆಂಕಟೇಗೌಡ, ಸಾವಕನಹಳ್ಳಿ ಮುನಿಯಪ್ಪ, ಮಂಜುನಾಥ್, ಯೋಶೋಧ, ತಾಯಮ್ಮ, ದಿವ್ಯ, ನಯನ,ಪ್ರೇಮಾ, ಸೇರಿದಂತೆ ಇತರರು ಹಾಜರಿದ್ದರು.

# ತೈಲ ಬೆಲೆ ಏರಿಕೆಯನ್ನು ಕೈ ಬಿಡುವಂತೆ ಕೇಂದ್ರ ಬಿಜೆಪಿ ಸರ್ಕಾರದ ವಿರುದ್ಧ ರಾಮಾಂಜಿನಪ್ಪ ಆಕ್ರೋಶ



**ದೇವನಹಳ್ಳಿ:** ಸಿರಿವಂತರ ಕಲ್ಯಾಣ ಕ್ಕಾಗಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬಂದಿದೆ ಹೊರತು ಬಡವರ ಅಭಿವೃದ್ಧಿಗಲ್ಲ ಎಂಬುದು ತೈಲ ಬೆಲೆ ಏರಿಕೆಯಿಂದ ದೃಡವಾಗಿ ಬಿಟ್ಟಿದೆ ಎಂದು ದೇವನಹಳ್ಳಿ ತಾಲೂಕು ಬಹುಜನ ಸಮಾಜ ಪಾರ್ಟಿ ಅಧ್ಯಕ್ಷ ಮಲ್ಲೆಪುರ ರಾಮಾಂಜಿನಪ್ಪ ಬಿಜೆಪಿ ದುರಾಡಳಿತವನ್ನು ಟೀಕಿಸಿದರು..

ನಗರದಲ್ಲಿ ಪ್ರವಾಸಿ ಮಂದಿರದಲ್ಲಿ ಪತ್ರಿಕಾ ಹೇಳಿಕೆಯಲ್ಲಿ ಮಾತನಾಡಿದ ಅವರು ಅಡುಗೆ ಮನೆಗೆ ಅಗತ್ಯವಿರುವ ಎಲ್‌ಪಿಜಿ ಸಿಲಿಂಡರ್ ಬೆಲೆಯನ್ನು ಮತ್ತೆ 29 ರೂಪಾಯಿ ಗಳಷ್ಟು ಏರಿಕೆ ಮಾಡಿದ್ದು ಖಂಡನೀಯ. ಬಿಜೆಪಿ ಅಧಿಕಾರಕ್ಕೆ ಬಂದಿರೋದು ಅವರ ಕಲ್ಯಾಣಕ್ಕಲ್ಲ, ದಿನೆದಿನೇ ಗ್ಯಾಸ್, ಪೆಟ್ರೋಲ್ ಡಿಸೇಲ್ ಏರಿಕೆ ಮಾಡಿ ಜನರನ್ನು ಸುಲಿಗೆ ಮಾಡಲು ಪ್ರಯತ್ನಿಸುತ್ತಿದೆ. ಸಾಮಾನ್ಯ ಜನರ ಪಾಲಿಗೆ ದಿನೇ ದಿನೇ ಅಗತ್ಯ ವಸ್ತುಗಳ ಬೆಲೆ ಏರಿಕೆಯು ನುಂಗಲಾರದ ಬಿಸಿ ತುಪ್ಪದಂತಾಗಿದೆ.

ಅಕ್ಕಮಾಯಾವತಿ ಪ್ರಧಾನಿ ಸ್ಥಾನಕ್ಕೆ ಅರ್ಹರು ಅವರಿಗೆ ದೇಶದ ಜನತೆ ಒಮ್ಮೆ ಅಧಿಕಾರ ನೀಡಿ ಈ ದೇಶ ಬಹು ಜನರ ಉದಯೋತ್ಸವಕ್ಕೆ ಮುನ್ನುಡಿ ಬರೆದಂತ ಾಗುತ್ತದೆ. ಜಾತಿ ಧರ್ಮವನ್ನು ಬುಡ ಸಮೇತ ಕಿತ್ತೊಗೆದು ಸಮ ಸಮಾಜದ ಕಲ್ಯಾಣಕ್ಕೆ ಶ್ರಮಿಸುವ ತಿಟ್ಟ ಉಕ್ಕಿನ ಮಹಿಳೆ ಆಗಿದ್ದಾರೆ. ಬಹುಜನರೆ ಒಂದಾಗಿ ಈ ದೇಶದ ಸಂವಿಧಾ ನದಡಿ ಬಡವರ ಮೂಲ ಭೂತಹಕ್ಕು ಗಳಿಗೆ ಹೋರಾಡುವ ಏಕೈಕ ಪಕ್ಷಬಹು ಜನ ಸಮಾಜ ಪಾರ್ಟಿ ಉಳ್ಳವರ ಪರವಾಗಿ ವಿವಿಧ ಯೋಜನೆಗಳನ್ನು ರೂಪಿಸಿ ಬಡವರ ಬದುಕಿಗೆ ಕೊಳ್ಳಿ ಇಡಲು ಹೊರಟಿದೆ. ಬೆಲೆ ಏರಿಕೆಗೆ ಪರ್ಯಾಯ ವ್ಯವಸ್ಥೆ ಕಂಡುಕೊಳ್ಳದ ಪ್ರಧಾನಿ ನರೇಂದ್ರ ಮೋದಿ ತಮ್ಮ ತಪ್ಪು ಆರ್ಥಿಕ ನೀತಿಗಳಿಂದ ಅಗತ್ಯವಸ್ತುಗಳು ನಿರಂತರವಾಗಿ ಇರುತ್ತದೆ ಆರ್ಥಿಕ ಸಂಕಷ್ಟದಿಂದ ಹೊರಬರಲಾಗದ ತಮ್ಮ ಆರ್ಥಿಕ ತಜ್ಞರನ್ನು ಕಿತ್ತೆಸೆಯಿರಿ.. ಜೊತೆಗೆ ತಾವು ಕೂಡ ಆಸ್ಥಾನಕ್ಕೆ ಅನರ್ಹರು ಕೂಡಲೇ ರಾಜೀನಾಮೆ ನೀಡಿ , ತೊಲಗಿ ಗೃಹಬಳಕೆಯ ಎಲ್‌ಪಿಜಿ ಸಿಲಿಂಡರ್ (14.2 ಕೆ.ಜಿ) ದರವನ್ನು ಮತ್ತೊಮ್ಮೆ 29 ರಷ್ಟು ಹೆಚ್ಚಿಸಿದ್ದು ಸರ್ಕಾರಕ್ಕೆ ನಾಚಿಕೆಯಾಗಬೇಕು. ಕೇಂದ್ರ ಬಿಜೆಪಿ ಆಡಳಿತ ಅಧಿಕಾರಕ್ಕೆ ಬಂದಾಗಿನಿಂದ ಯುವಕರಿಗೆ ಉದ್ಯೋಗವಿಲ್ಲ ಐಎಎಸ್ ಐಪಿಎಸ್ ಕೆಎಎಸ್ ಮುಂತಾದ ಪರೀಕ್ಷೆಗಳಲ್ಲಿ ಪ್ರಶ್ನೆ ಪತ್ರಿಕೆಗಳನ್ನು ಲಿಕೌಟ್ ಮಾಡುವ ದುಸ್ಥಿತಿ ವಿದ್ಯಾವಂತರನ್ನು ಕಾಣುತ್ತಿದೆ.

ತೈಲಬಿಬೆಲೆ ಏರಿಗೆಯಿಂದ ಮಧ್ಯಮ ವರ್ಗದ ಸಾರ್ವಜನಿಕರಿಗೆ ಏನಿಲ್ಲ ಸಂಕಷ್ಟ ಎದುರಾಗುತ್ತದೆ ಎಂಬ ಸಾಮಾನ್ಯ ಜ್ಞಾನ ಕೂಡ ಆ ಪಕ್ಷದ ಪ್ರಜ್ಞಾವಂತರಿಗೆ ತಿಳಿಯುತ್ತಿಲ್ಲ. ಇತ್ತೀಚಿನ ದಿನಗಳಲ್ಲಿ ಬಡ ಕಾರ್ಮಿಕರು ಬದುಕುವುದೇ ಕಷ್ಟ ಸಾಧ್ಯವಾಗಿ ಬಿಟ್ಟಿದೆ ಬೆಲೆ ಏರಿಕೆ ಬಾದೆ ಬಡವರಿಗೆ ಮಾತ್ರ ತಿಳಿಯುತ್ತದೆ ಸಿರಿವಂತರಿಗಲ್ಲ. ತೈಬೆಲೆಯನ್ನು ಈ ಕೂಡಲೇ ವಾಪಸ್ ಪಡೆಯಬೇಕು ನಿರ್ಲಕ್ಷಿಸಿದ್ದಲ್ಲಿ ತಮ್ಮ ಸರ್ಕಾರದ ವಿರುದ್ಧ ಪ್ರಜ್ಞಾವಂತ ನಾಗ- ರಿಕರ ಜೊತೆ ಬೀದಿಗಿಳಿದು ಹೋರಾಟ ಕೈಗೊಳ್ಳುವ ಎಚ್ಚರಿಕೆ ನೀಡಿದರು.

# ಆನಂದ್ ಸಿ ತಿರುಮಲರಿಗೆ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ರಾಜ್ಯ ಪ್ರಶಸ್ತಿ



**ಬೆಂಗಳೂರು:** ಕಲೆ, ಶಿಕ್ಷಣ, ಪತ್ರಿಕೋದ್ಯಮ ಹಾಗೂ ಸಮಾಜ ಸೇವೆ ಕ್ಷೇತ್ರಗಳಲ್ಲಿ ಸಲ್ಲಿಸಿದ ವಿಶಿಷ್ಟ ಸೇವೆಯನ್ನು ಗುರುತಿಸಿ ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತರಾದ ಶ್ರೀ ಆನಂದ್ ಸಿ ತಿರುಮಲ ಅವರಿಗೆ ರಾಜ್ಯ ಮಟ್ಟದ ಪ್ರತಿಷ್ಠಿತ 'ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್' ರಾಜ್ಯ ಪ್ರಶಸ್ತಿ ಪ್ರದಾನ ಮಾಡಲಾಯಿತು.

ಮಂಡ್ಯದ ನಗರದಲ್ಲಿ ನಾಲ್ವಡಿ ಕೃಷ್ಣರಾಜ ಒಡೆಯರ್ ಜಯಂತಿ ಅಂಗವಾಗಿ ಆಯೋಜಿ ಸಲಾಗಿದ್ದ "ಪ್ರಥಮ ಮಹಿಳಾ ಕನ್ನಡ ಅಕ್ಷರ ಜಾತ್ರೆ" ಕಾರ್ಯಕ್ರಮದಲ್ಲಿ ಪ್ರಶಸ್ತಿ ಪ್ರದಾನ ಸಮಾರಂಭ ಜರುಗಿತು.

ಡಾ. ಜೀಶಂಪ ಕನ್ನಡ ಸಾಹಿತ್ಯ ವೇದಿಕೆ, ಕನ್ನಡಬಡಿ ದಿನಪತ್ರಿಕೆ ಹಾಗೂ ರಾಜರ್ಷಿ ನಾಲ್ವಡಿ ಕೃಷ್ಣರಾಜ ಒಡೆಯರ್ ಫಿಲಂಸ್, ಮಂಡ್ಯ ಇವರ ಸಹಯೋಗದಲ್ಲಿ ನಡೆದ ಸಮಾರಂಭದಲ್ಲಿ ಶ್ರೀ ಆನಂದ್ ಸಿ ತಿರುಮಲ ಅವರನ್ನು ಸನ್ಮಾನಿಸಿ ಪ್ರಶಸ್ತಿ ನೀಡಿ ಗೌರವಿಸಲಾಯಿತು.

ಕಾರ್ಯಕ್ರಮದ ಅಧ್ಯಕ್ಷತೆಯನ್ನು ಸಂಸ್ಥೆಯ ಅಧ್ಯಕ್ಷ ಎಸ್. ಕೃಷ್ಣ ಸ್ವರ್ಣಸಂದ್ರ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ನಗರ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಆರ್. ಯೋಗಾನಂದ ಹಾಗೂ ಮೈಸೂರು ಜಿಲ್ಲಾ ಪ್ರಭಾರಿ ಇ.ಸಿ. ನಿಂಗರಾಜ್ ಗೌಡ ಭಾಗವಹಿಸಿ ಮಾತನಾಡಿದರು.

ಆನಂದ್ ಸಿ ತಿರುಮಲ ಅವರು ಸಮಾಜಮುಖಿ ಸೇವೆ, ಪತ್ರಿಕೋದ್ಯಮ, ಶಿಕ್ಷಣ, ಯುವಜನರ ಮಾರ್ಗದರ್ಶನ ಹಾಗೂ ವಿವಿಧ ಸಾಮಾಜಿಕ ಚಟುವಟಿಕೆಗಳಲ್ಲಿ ಸಲ್ಲಿಸಿರುವ ಸೇವೆಯನ್ನು ಗಣನೆಗೆ ತೆಗೆದುಕೊಂಡು ಈ ಪ್ರಶಸ್ತಿಗೆ ಆಯ್ಕೆ ಮಾಡಲಾಗಿತ್ತು ಎಂದು ಗಣ್ಯರು ತಿಳಿಸಿದರು.

ಪ್ರಶಸ್ತಿ ಸ್ವೀಕರಿಸಿ ಮಾತನಾಡಿದ ರಾಜ್ಯ ಮತ್ತು ರಾಷ್ಟ್ರ ಪ್ರಶಸ್ತಿ ಪುರಸ್ಕೃತ ಆನಂದ್ ಸಿ ತಿರುಮಲ, "ಈ ಗೌರವ ನನ್ನ ಜವಾಬ್ದಾರಿಯನ್ನು ಮತ್ತಷ್ಟು ಹೆಚ್ಚಿಸಿದೆ. ಸಮಾಜಮುಖಿ ಕಾರ್ಯಗಳು, ಯುವಜನರ ಸಬಲೀಕರಣ ಹಾಗೂ ಶಿಕ್ಷಣ ಕ್ಷೇತ್ರದಲ್ಲಿ ಇನ್ನಷ್ಟು ಸೇವೆ ಸಲ್ಲಿಸಲು ಈ ಪ್ರಶಸ್ತಿ ಪ್ರೇರಣೆ ನೀಡಿದೆ. ಈ ಗೌರವಕ್ಕೆ ಕಾರಣರಾದ ಎಲ್ಲ ಸಂಘಟಕರಿಗೆ ಹಾಗೂ ನನ್ನನ್ನು ಬೆಂಬಲಿಸಿದ ಎಲ್ಲರಿಗೂ ನಾನು ಕೃತಜ್ಞನಾಗಿದ್ದೇನೆ" ಎಂದು ಹೇಳಿದರು.

ಕಾರ್ಯಕ್ರಮದ ಸಮಾರಂಭದಲ್ಲಿ ಯುವ ಮುಖಂಡ .ಯೋಗಾನಂದ, ಅಕ್ಷರ ಜಾತ್ರೆಯ ಸಮ್ಮೇಳನಾಧ್ಯಕ್ಷೆ ಹಾಗೂ ಕವಿಯತ್ರಿ ಬಿ.ಆರ್. ಉಮಾ, ಶರಣ ಸಾಹಿತ್ಯ ಪರಿಷತ್ತಿನ ಮಾಜಿ ಅಧ್ಯಕ್ಷ ಬನ್ನಂಗಾಡಿ ಸಿದ್ದಲಿಂಗಯ್ಯ,ರಾಜ್ಯ ಪ್ರಶಸ್ತಿ ವಿಜೇತ ಪತ್ರಕರ್ತ ಆನಂದ್ ಸಿ ತಿರುಮಲ, ಸಾಹಿತಿ ನವೀದ್ ಮುಲ್ಲಾ, ಆಧ್ಯಾತ್ಮ ಚಿಂತಕಿ ಡಾ.ಪೂರ್ಣಿಮಾ, ಡಾ.ಜೀಶಂಪ ಸಾಹಿತ್ಯ ವೇದಿಕೆಯ ಅಧ್ಯಕ್ಷ ಎಸ್. ಕೃಷ್ಣ ಸ್ವರ್ಣಸಂದ್ರ, ಪದಾಧಿಕಾರಿಗಳಾದ ಮಂಗಲ ಶಿವಣ್ಣ, ನಾಗೇಶ್ ರಾಗಿಮುದ್ದನಹಳ್ಳಿ, ಎಲ್ಲರೊಳ ಗೊಂದಾಗು ಮಂಕುತಿಮ್ಮ ಟ್ರಸ್ಟ್‌ನ ವಿನಯ್ ಕುಮಾರ್, ನಾರಾಯಣಸ್ವಾಮಿ, ಹೇಮಾ ಉಪಸ್ಥಿತರಿದ್ದರು.

ಸಾಹಿತ್ಯಾಸಕ್ತರು, ಸಾಮಾಜಿಕ ಕಾರ್ಯಕರ್ತರು, ಶಿಕ್ಷಣ ತಜ್ಞರು, ವಿವಿಧ ಸಂಘಟನೆಗಳ ಪದಾಧಿಕಾರಿಗಳು ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದು ಪ್ರಶಸ್ತಿ ಪುರಸ್ಕೃತರನ್ನು ಅಭಿನಂದಿಸಿದರು.

# ಯಶಸ್ವಿಯಾಗಿ ನಡೆದ 'ವಾಸ್ತುವಿನ ನಡಿಗೆ ಗ್ರಾಮದ ಕಡೆಗೆ' ಕಾರ್ಯಕ್ರಮ



**ದೊಡ್ಡಬಳ್ಳಾಪುರ:** ಸಾಮಾನ್ಯ ಜನರಿಗೆ ವಾಸ್ತು ಸೂತ್ರಗಳ ಅನ್ವಯ ಜ್ಞಾನವನ್ನು ನೀಡುವ ಸಲುವಾಗಿ ಶ್ರೀ ಪೂತಮಾನಸ ಜ್ಯೋತಿಷ್ಯಾಲಯ ವತಿಯಿಂದ ಸುಕನ್ಯ ಮತ್ತು ಎಸ್.ಕೃಷ್ಣಮೂರ್ತಿ ಇವರುಗಳ ಸವಿನೆನಪಿಗಾಗಿ ದೊಡ್ಡಬಳ್ಳಾಪುರ ತಾಲೂಕಿನ ಮಧುರೆ ಹೋಬಳಿಯ ಕನ್ನಮಂಗಲ ಗೇಟ್ ಸಮೀಪದ ಎಲ್.ಜಿ ಮಹಲ್ ನಲ್ಲಿ "ವಾಸ್ತುವಿನ ನಡಿಗೆ ಗ್ರಾಮದ ಕಡೆಗೆ" ಕಾರ್ಯಕ್ರಮ ಯಶಸ್ವಿಯಾಗಿ ಜರುಗಿತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ ಧನಾತ್ಮಕ ಶಕ್ತಿ ಹೇಗಿರಬೇಕು ಎಂದು ನಮ್ಮ ಋಷಿಮುನಿಗಳು ಸಾವಿರಾರು ವರ್ಷಗಳ ಹಿಂದೆಯೇ ವೈಜ್ಞಾನಿಕವಾಗಿ ನಿರೂಪಿಸಿದ್ದಾರೆ. ಇವತ್ತು ಜಗತ್ತು ಭಾರತದ ಕಡೆ ಮುಖ ಮಾಡಿದೆ. ಯೋಗ, ಆಯುರ್ವೇದವನ್ನ ಜಗತ್ತು ಒಪ್ಪಿಕೊಂಡಂತೆ ನಮ್ಮ ವಾಸ್ತು ಮತ್ತು ಜ್ಯೋತಿಷ್ಯವನ್ನ ಜಗತ್ತು ಸೂಕ್ಷ್ಮವಾಗಿ ಗಮನಿಸುತ್ತಿದೆ. ಕೆಲವರು ಇದನ್ನು ಮೂಢನಂಬಿಕೆ ಎಂದು ತಪ್ಪು ತಿಳಿಯುತ್ತಾರೆ.

ಆದರೆ ನೈಜ ವಾಸ್ತು ವಿಜ್ಞಾನ ಮಾನವನ ಆರೋಗ್ಯ ವೃದ್ಧಿಸುವ ಜೀವನ ಪದ್ಧತಿಯಾಗಿದೆ. ಪ್ರಧಾನಿ ನರೇಂದ್ರ ಮೋದಿಜೀರವರು ಸಹ ಈ ವಾಸ್ತುವಿನ ಬಗ್ಗೆ ಈ ರೀತಿಯ ಅನೇಕ ಮಾತುಗಳನ್ನಾಡಿದ್ದಾರೆ. ವಾಸ್ತುವಿನ ಬಗ್ಗೆ ನಂಬಿಕೆನ್ನೂ ಸಹ ಇಟ್ಟುಕೊಂಡಿದ್ದಾರೆ.

ಹಳ್ಳಿಯ ಜನರಿಗೆ ಒಳಿತಾಗಲಿ ಉದ್ದೇಶದಿಂದ ಹಮ್ಮಿಕೊಂಡಿರುವ ಅಭಿಯಾನ ಶ್ಲಾಘನೀಯ ದೊಡ್ಡಬಳ್ಳಾಪುರದಿಂದ ಆರಂಭವಾಗಿರುವ ಈ ಆಂದೋಲನ ರಾಜ್ಯಾದಂತ ಬೆಳೆಯಲಿ ಎಂದು ಆಶೈಸುತ್ತೇನೆ. ನಮ್ಮ ಯುವ ಪೀಳಿಗೆ ಆಧುನಿಕ ತಂತ್ರಜ್ಞಾನವನ್ನು ಕಲಿಯುವುದನ್ನು ಬೇಡ ಅನ್ನುವುದಿಲ್ಲ, ಆದರೆ ಅದರೊಂದಿಗೆ ನಮ್ಮ ಮಣ್ಣಿನ ಸನಾತನ ಸಂಸ್ಕಾರ ಮತ್ತು ವಿಜ್ಞಾನದ ಹಿನ್ನೆಲೆಯನ್ನೂ ಕೂಡ ತಿಳಿಯಲು ಪ್ರಯತ್ನಿಸಬೇಕು ಎಂಬುದು ನನ್ನ ಅಭಿಪ್ರಾಯ ಎಂದರು.

ಪೂತಮಾನಸ ಜ್ಯೋತಿಷ್ಯಾಲಯ ವ್ಯವಸ್ಥಾಪಕ ಡಾ.ಗಿರೀಶ್ ಕೆ ಮಾತನಾಡಿ ಗ್ರಾಮದಲ್ಲಿ ವಾಸಿಸುವ ಜನತೆಯ ಮನೆಗಳನ್ನು ವಾಸ್ತು ಸೂತ್ರಗಳ ಅನ್ವಯ ಜ್ಞಾನವನ್ನು ಸರಿಪಡಿಸಿ ಶಾಂತಿ, ನೆಮ್ಮದಿ, ಆರೋಗ್ಯವಂತರಾಗಿ ಜೀವನ ಶೈಲಿಯನ್ನು ರೂಪಿಸಿಕೊಳ್ಳಲು ಸಹಕಾರಿಯಾಗುತ್ತದೆ.

ವಾಸ್ತು ವಿಜ್ಞಾನವು ನಗರವಾಸಿಗಳಿಗೆ ಮತ್ತು ಹಣವಂತರಿಗೆ ಮಾತ್ರ ಲಭ್ಯವಾಗಿರುತ್ತವೆ, ಆದರೆ, ರಾಜ್ಯದಲ್ಲಿ ಸುಮಾರು 30,000 ಗ್ರಾಮಗಳಿವೆ, ದೊಡ್ಡಬಳ್ಳಾಪುರ ತಾಲ್ಲೂಕಿನಲ್ಲಿ ಸುಮಾರು 296 ಗ್ರಾಮಗಳು, 3 ಪಟ್ಟಣಗಳು, ಎಲ್ಲಾ ವರ್ಗದ ಜನತೆಗೆ ವಾಸ್ತು ಜ್ಞಾನ ನೀಡುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಜ್ಯೋತಿಷ್ಯರು, ವಾಸ್ತು ತಜ್ಞರು ಜನರಿಗೆ ವಾಸ್ತು ಬಗ್ಗೆ ಜಾಗೃತಿ ಮೂಡಿಸಿದರು.

ಕರ್ನಾಟಕ ರಾಜ್ಯದ ಜ್ಯೋತಿಷ್ಯರ ಹಾಗೂ ಜ್ಯೋತಿಷ್ಯ ಬೋಧನಾ ಸಂಸ್ಥೆಗಳ ಒಕ್ಕೂಟದ ಪ್ರಧಾನ ಕಾರ್ಯದರ್ಶಿ ಗಜೇಂದ್ರಬಾಬು ಅಧ್ಯಕ್ಷತೆ ವಹಿಸಿದ್ದರು.

ಕಾರ್ಯಕ್ರಮದಲ್ಲಿ ಶಾಸಕ ಧೀರಜ್ ಮುನಿರಾಜು, ಮಾಜಿ ಶಾಸಕ ಟಿ.ವೆಂಕಟರಮಣಯ್ಯ, ಬೆಂಗಳೂರು ನಗರ ಮಾಜಿ ಜಿಲ್ಲಾ ಪಂಚಯಿತಿ ಅಧ್ಯಕ್ಷ ಜಿ.ಮರಿಸ್ವಾಮಿ, ದೊಡ್ಡಬಳ್ಳಾಪುರ ಯೋಜನಾ ಪ್ರಾಧಿಕಾರ ಅಧ್ಯಕ್ಷ ಚುಂಚೇಗೌಡ , ನೆಲಮಂಗಲ ಯೋಜನಾ ಪ್ರಾಧಿಕಾರ ಮಾಜಿ ಅಧ್ಯಕ್ಷ ಮಲ್ಲಣ್ಣ, ದೊಡ್ಡಬೆಳವಂಗಲ ವಿ.ಎಸ್.ಎಸ್.ಎನ್ ಮಾಜಿ ಅಧ್ಯಕ್ಷ ಬಿ.ಶಿವಾನಂದಪ್ಪ , ಬಿಜೆಪಿ ದೊಡ್ಡಬಳ್ಳಾಪುರ ತಾಲ್ಲೂಕು ಖಜಾಂಚಿ ಟಿ.ರವಿ ಕುಮಾರ್, ಉದ್ಯಮಿ ಸುನೀಲ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಕರ್ನಾಟಕ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಮನವಿ ಪತ್ರ ಸಲ್ಲಿಕೆ



**ದೇವನಹಳ್ಳಿ:** ಇತ್ತೀಚೆಗೆ ಗದಗ ಜಿಲ್ಲೆಯ ರೋಣ ತಾಲೂಕಿನಲ್ಲಿ ನಡೆದ ಪಿಡಿಓ ಮುಕ್ತಂ ಹುಸೇನ ಕರಡಿಗುಡ್ಡ (46 ವರ್ಷ) ಅವರ ಆತ್ಮಹತ್ಯೆ ಪ್ರಕರಣ ಹಾಗೂ

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ (ಕಆಡಿ) ಮೇಲಿನ ಅಮಾನವೀಯ ಕೆಲಸದ ಒತ್ತಡ, ಬಾಕಿ ವೇತನ ಬಿಡುಗಡೆ ವಿಳಂಬ ಹಾಗೂ ಮಾನಸಿಕ ಕಿರುಕುಳದಿಂದಾಗಿ ಕೊತಬಾಲ ಗ್ರಾ.ಪಂ ಪಿಡಿಓ ಶ್ರೀ ಮುಕ್ತಂಹುಸೇನ ಕರಡಿಗುಡ್ಡ ಅವರ ಆತ್ಮಹತ್ಯೆ ಪ್ರಕರಣದ ಸಮಗ್ರ ತನಿಖೆ ಹಾಗೂ ರಾಜ್ಯದ ಎಲ್ಲಾ ಪಿಡಿಓಗಳ ಸೇವಾ ರಕ್ಷಣೆಗೆ ಆಗ್ರಹಿಸಿ ರಾಜ್ಯ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘದ ವತಿಯಿಂದ ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತ್ ಉಪ ಕಾರ್ಯದರ್ಶಿ ಶಿವುಕುಮಾರ್ ಅವರಿಗೆ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರಾದ ಪ್ರಿಯಾಂಕಾ ಖರ್ಗೆ ಅವರಿಗೆ ತಲುಪಿಸುವಂತೆ ಮನವಿಯನ್ನು ಸಲ್ಲಿಸಲಾಯಿತು.

ಕರ್ನಾಟಕ ರಾಜ್ಯ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಭಿವೃದ್ಧಿ ಸಂಘದ ರಾಜ್ಯಾಧ್ಯಕ್ಷ ದಿಲೀಪ್ ಕುಮಾರ್.ಬಿ.ಎಂ ಮಾತನಾಡಿ

ಇತ್ತೀಚೆಗೆ ತಾಲೂಕಿನ ಅಸೂಟಿ ಹಾಗೂ ಕೊತಬಾಲ ಎರಡು ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಯಾಗಿ (ಹೆಚ್ಚುವರಿ ಪ್ರಭಾರ ಸೇರಿ) ಕರ್ತವ್ಯ ನಿರ್ವಹಿಸುತ್ತಿದ್ದ 46 ವರ್ಷದ ಶ್ರೀ ಮುಕ್ತಂಹುಸೇನ ಕರಡಿಗುಡ್ಡ ಅವರು ಅತಿಯಾದ ಕೆಲಸದ ಒತ್ತಡ, ಹಿಂದಿನ ಪ್ರಕರಣವೊಂದರ ಮೇಲಿದ್ದ ಲೋಕಾಯುಕ್ತ ತನಿಖೆ ಹಾಗೂ ವೇತನವಿಲ್ಲದೆ ಬೇಸತ್ತು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಇಡೀ ರಾಜ್ಯದ ಪಿಡಿಓ ಸಮುದಾಯವನ್ನು ತೀವ್ರ ಆಘಾತಕ್ಕೀಡುಮಾಡಿದೆ ಎಂದರು.

ಹಿಂದೆ ಧಾರವಾಡ ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದಾಗ ದಾಖಲಾಗಿದ್ದ ಪ್ರಕರಣದ ಹಿನ್ನೆಲೆಯಲ್ಲಿ ಅಮಾನತುಗೊಂಡು, ಕಳೆದ 8–9 ತಿಂಗಳುಗಳಿಂದ ಅವರಿಗೆ ಯಾವುದೇ ವೇತನವಾಗಿರಲಿಲ್ಲ. ಎರಡು ತಿಂಗಳುಗಳ ಹಿಂದೆಯಷ್ಟೇ ಅವರು ಕರ್ತವ್ಯಕ್ಕೆ ಹಾಜರಾಗಿದ್ದರು. ವೇತನವಿಲ್ಲದೆ ಸಂಸಾರ ಸಾಗಿಸಲು ಕಷ್ಟವಾಗಿ, ಅವರ ಪತ್ನಿ ಉದ್ಯೋಗ ಅರಸಿ ಬೆಂಗಳೂರಿಗೆ ಹೋಗುವಂತಹ ಚಿಂತಾಜನಕ ಸ್ಥಿತಿ ಅವರ ಕುಟುಂಬಕ್ಕೊದಗಿತ್ತು. ಸಣ್ಣ ಸಣ್ಣ ಮಕ್ಕಳ ಭವಿಷ್ಯದ ಚಿಂತೆ ಹಾಗೂ ಆರ್ಥಿಕ ಮುಗ್ಗಟ್ಟಿನಿಂದ ಅವರು ಎಷ್ಟೊಂದು ಮಾನಸಿಕ ಯಾತನೆ ಅನುಭವಿಸಿದ್ದಾರೆ ಎಂಬುದು ಇದರಿಂದ ಸ್ಪಷ್ಟವಾಗುತ್ತದೆ.

ಈ ಪ್ರಕರಣ ಕೇವಲ ಒಬ್ಬ ಅಧಿಕಾರಿಯ ದುರಂತವಲ್ಲ, ಬದಲಾಗಿ ಇಡೀ ರಾಜ್ಯದಲ್ಲಿ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಎದು- ರಿಸುತ್ತಿರುವ ನೈಜ ಮತ್ತು ಭೀಕರ ಪರಿಸ್ಥಿತಿಗೆ ಹಿಡಿದ ಕನ್ನಡಿಯಾಗಿದೆ. ಗ್ರಾಮೀಣಾಭಿವೃದ್ಧಿಯ ಆಧಾರ ಸ್ತಂಭವಾಗಿರುವ ಪಿಡಿಓಗಳು ಇಂದು ತೀವ್ರವಾದ ಕೆಲಸದ ಒತ್ತಡದಲ್ಲಿ ನಲುಗಿ ಹೋಗುತ್ತಿದ್ದಾರೆ,ಆದ್ದ- ರಿಂದ ಮೀನಾಕ್ಷಿ ಸುಂದರಂ ಸಮಿತಿ ವರದಿ ಕೂಡಲೇ ಮೀನಾಕ್ಷಿ ಸುಂದರಂ ಸಮಿತಿಯಿಂದ ವರದಿಯನ್ನು ಪಡೆದು, ಅದರಲ್ಲಿನ ಶಿಫಾರಸುಗಳನ್ನು ಜಾರಿಗೊಳಿಸುವ ಮೂಲಕ ನೌಕರರ ಸುರಕ್ಷತೆ ಮತ್ತು ಹಿತರಕ್ಷಣೆಗೆ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ಹೇಳಿದರು

ದಾಖಲೆ ರಹಿತ ಮತ್ತು ಔಟಟುಟಿಜ ಒಖಖ ವರದಿಗಳ ಆಧಾರದ ಮೇಲೆ ಬರುವ ದೂರುಗಳನ್ನು ತನಿಖೆ ಮಾಡುವುದು/ ಇಲಾಖಾ ವಿಚಾರಣೆ ಮಾಡುವುದನ್ನು ನಿಲ್ಲಿಸಬೇಕು.

ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು ಸರ್ಕಾರದ ಯೋಜನೆಗಳನ್ನು ಕಟ್ಟಕಡೆಯ ಹಳ್ಳಿಗೂ ತಲುಪಿಸುವ ಪ್ರಾಮಾಣಿಕ ಸೇವಕರು. ಅವರ ಹಿತರಕ್ಷಣೆ ಸರ್ಕಾರದ ಆದ್ಯತೆಯಾಗಬೇಕು. ಮೇಲ್ಕಂಡ ನಮ್ಮ ಬೇಡಿಕೆಗಳನ್ನು ಗಂಭೀರವಾಗಿ ಪರಿಗಣಿಸಿ, ಪಿಡಿಓಗಳ ಪರವಾದ ಸ್ಪಷ್ಟ ಆದ- 'ೇಶಗಳನ್ನು ಹೊರಡಿಸುವ ಮೂಲಕ ಮತ್ತೊಬ್ಬ ಅಧಿಕಾರಿ ಆತ್ಮಹತ್ಯೆಯ ಹಾದಿ ಹಿಡಿಯದಂತೆ ಒತ್ತಡ ಮುಕ್ತ ಕರ್ತವ್ಯ ನಿರ್ವಹಣೆಗೆ ಅನುವು ಮಾಡಿ ಕೊಡುವಂತೆ ಸರ್ಕಾರಕ್ಕೆ ಒತ್ತಾಯಿಸಿದರು.

ಗ್ರಾಮ ಪಂಚಾಯತಿಗಳ ಅಭಿವೃದ್ಧಿ ಅಧಿಕಾರಿಯಾಗಿ (ಹೆಚ್ಚುವರಿ ಪ್ರಭಾರ ಸೇರಿ) ಕರ್ತವ್ಯ ನಿರ್ವಹಿಸುತ್ತಿದ್ದ 46 ವರ್ಷದ ಶ್ರೀ ಮುಕ್ತಂಹುಸೇನ ಅವರಿಗೆ ಮೌನಚರಣೆಯ ಮೂಲಕ ಭಾವಪೂರ್ಣ ಶ್ರದ್ಧಾಂಜಲಿ ಸಲ್ಲಿಸ ಲಾಯಿತು.

ಇದೇ ಸಂದರ್ಭದಲ್ಲಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಗ್ರಾಮ ಪಂಚಾಯತಿಯ ಪಿಡಿಓಗಳು ಮತ್ತು ತಾಲೂಕು ಮಟ್ಟದ ಅಧಿಕಾ- ರಿಗಳು ಭಾಗಿಯಾಗಿದ್ದರು.

# ಪ್ರತಿ ಗ್ರಾಪಂನಲ್ಲೂ ಡಿಎಸ್‌ಎಸ್ ಸಂಘಟನೆ ಬಲಪಡಿಸಿ:ದೊಡ್ಡಿಂದುವಾಡಿ ಸಿದ್ಧರಾಜು



**ಯಳಂದೂರು:** ಪ್ರತಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಎಲ್ಲಾ ಗ್ರಾಮಗಳಲ್ಲೂ ದಲಿತ ಸಂಘರ್ಷ ಸಮಿತಿಯ ಸಂಘಟನೆಯನ್ನು ಬಲಪಡಿಸುವ ಕೆಲಸವನ್ನು ಮಾಡಬೇಕು ಎಂದು ದಲಿತ ಸಂಘರ್ಷ ಸಮಿತಿ ಅಂಬೇಡ್ಕರ್ ವಾದದ ರಾಜ್ಯ ಸಂಚಾಲಕ ದೊಡ್ಡಿಂದವಾಡಿ ಸಿದ್ಧರಾಜು ಕರೆ ನೀಡಿದರು. ಅವರು ಈ ಸಂಬಂಧ ಪಟ್ಟಣದ ಪ್ರವಾಸಿ ಮಂದಿರದಲ್ಲಿ ಈಚೆಗೆ ನಡೆದ ಸಭೆಯಲ್ಲಿ ಮತನಾಡಿದರು.

ಭಾರತಕ್ಕೆ ಡಾ.ಬಿ.ಆರ್. ಅಂಬೇಡ್ಕರ್ ಸಂವಿಧಾನವನ್ನು ನೀಡಿದ್ದಾರೆ. ಸಂವಿಧಾನದಲ್ಲಿ ದಲಿತರ ಉದ್ಧಾರಕ್ಕಾಗಿ ಅನೇಕ ಸೌಲಭ್ಯಗಳನ್ನು ನೀಡಲಾಗಿದೆ. ನಾವು ಇಡೀ ರಾಷ್ಟ್ರದಲ್ಲಿ ದೊಡ್ಡ ಜನಸಂಖ್ಯೆಯಲ್ಲಿದ್ದೇವೆ. ಆದರೆ ಇನ್ನೂ ಕೂಡ ನಮ್ಮ ಆರ್ಥಿಕ, ಸಾಮಾಜಿಕ, ಶೈಕ್ಷಣಿಕ ಸ್ಥಿತಿಗತಿಗಳು ನಿರೀಕ್ಷಿತ ಮಟ್ಟದಲ್ಲಿ ಪ್ರಗತಿ ಕಂಡಿಲ್ಲ. ಇದಕ್ಕೆ ಅರಿವಿನ ಕೊರತೆ ಹಾಗೂ ನಮ್ಮ ಹಕ್ಕುಗಳನ್ನು ಕೇಳುವ ಮನೋಭಾವ ಕಡಿಮೆ ಇರುವುದೇ ಪ್ರಮುಖ ಕಾರಣವಾಗಿದೆ. ಈ ನಿಟ್ಟಿನಲ್ಲಿ ದಲಿತ ಸಂಘರ್ಷ ಸಮಿತಿ ನಿರಂತರವಾಗಿ ಹೋರಾಟ ನಡೆಸಿಕೊಂಡೇ ಬರುತ್ತಿದೆ. ಆದರೆ ಈಚೆಗೆ ಇದಕ್ಕೆ ಬಲ ಕಡಿಮೆಯಾಗುತ್ತಿದೆ. ಹಾಗಾಗಿ ಇದನ್ನು ಮತ್ತೊಮ್ಮೆ ಸಂಘಟಿಸುವ ಕೆಲಸವನ್ನು ನಾವು ಮಾಡಬೇಕಿದೆ. ಈ ನಿಟ್ಟಿನಲ್ಲಿ ಪ್ರತಿ ಗ್ರಾಮಗಳಲ್ಲೂ ನಮ್ಮ ಸಮಿತಿಯ ಸದಸ್ಯರನ್ನು ಹೆಚ್ಚಿಸುವ ನಿಟ್ಟಿನಲ್ಲಿ ನಾವು ಕೆಲಸ ಮಾಡಬೇಕಿದೆ. ಇವರಿಗೆ ಅಗತ್ಯ ತರಬೇತಿಯನ್ನು ನೀಡಬೇಕಿದೆ. ದಸಂಸದ ಉದ್ದೇಶವನ್ನು ತಿಳಿಸುವ ಕೆಲಸವನ್ನು ಮಾಡಬೇಕಿದೆ. ಇದರಿಂದ ಸಿಗುವ ಪ್ರಯೋಜನಗಳನ್ನು ಮನವರಿಕೆ ಮಾಡಿಕೊಡಬೇಕಿದೆ. ಈ ನಿಟ್ಟಿನಲ್ಲಿ ನವು ಸಮರೋಪಾದಿಯಲ್ಲಿ ಕೆಲಸವನ್ನು ಮಾಡಬೇಕು. ಗ್ರಾಮಗಳಲ್ಲಿ ಪ್ರತಿನಿತ್ಯ ನಡೆಯುವ ದೌರ್ಜನ್ಯ ಪ್ರಕರಣಗಳು, ಸ್ಮಶಾನ, ಕುಡಿಯುವ ನೀರು, ರಸ್ತೆ ಸೇರಿದಂತೆ ಇತರೆ ಸಮಸ್ಯೆಗಳ ಬಗ್ಗೆ ಧ್ವನಿ ಎತ್ತಲು ನಾವು ಸಂಘಟನೆಯಲ್ಲಿ ತೊಡಗಿಕೊಳ್ಳಬೇಕು. ಈಸಂದರ್ಭದಲ್ಲಿ ಮಹದೇವ, ಮೀನಾಕ್ಷಮ್ಮ, ಶಿವಮ್ಮ, ಯರಿಯೂರು ಶಿವಣ್ಣ, ಶಂಕರಮೂರ್ತಿ, ರವಿ ಸೇರಿದಂತೆ ಅನೇಕರು ಇದ್ದರು.

ಸುದ್ದಿ ಹಾಗೂ ಜಾಹೀರಾತುಗಳಿಗೆ ಸಂಪರ್ಕಿಸಿ:
9538786812
8217606793

# ಬಳ್ಳೇಕೆರೆ ಸರ್ಕಾರಿ ಪ್ರೌಢಶಾಲೆಯಲ್ಲಿ ಜೂನ್ 21ಕ್ಕೆ ಗುರುವಂದನಾ ಮತ್ತು ಸ್ನೇಹ ಸಮ್ಮಿಲನ



**ಕೃಷ್ಣರಾಜಪೇಟೆ:** ಸರ್ಕಾರಿ ಪ್ರೌಢಶಾಲೆ ಬಳ್ಳೇಕೆರೆ 2010ನೇ ಸಾಲಿನ ಹಳೇ ವಿದ್ಯಾರ್ಥಿಗಳ ವತಿಯಿಂದ ಹಮ್ಮಿಕೊಳ್ಳಲಾಗಿರುವ ಗುರುವಂದನಾ ಮತ್ತು ಸ್ನೇಹ ಸಮ್ಮಿಲನ ಕಾರ್ಯಕ್ರಮದ ಆಹ್ವಾನ ಪತ್ರಿಕೆಯನ್ನು ಶಾಲೆಯ ಮುಖ್ಯ ಶಿಕ್ಷಕರು ಹಾಗೂ ಹಾಲಿ ಶಿಕ್ಷಕ ವೃಂದಕ್ಕೆ ಗೌರವಪೂರ್ವಕವಾಗಿ ಸಲ್ಲಿಸಲಾಯಿತು.

ಬಳ್ಳೇಕೆರೆ ಸರ್ಕಾರಿ ಪ್ರೌಢಶಾಲೆಯ ಆವರಣದಲ್ಲಿಯೇ ದಿನಾಂಕ 21.06.2026ರ ಭಾನುವಾರದಂದು ಈ ವಿಶೇಷ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ.

ಅಂದು ತಮಗೆ ಅಕ್ಷರ ಕಲಿಸಿದ ಅಂದಿನ ಗುರುಗಳನ್ನು ನೆನೆದು ಗೌರವಿಸುವ ಮತ್ತು ಸಹಪಾಠಿಗಳೊಂದಿಗೆ ಹಳೆಯ ನೆನಪುಗಳನ್ನು ಮೆಲುಕು ಹಾಕುವ ನಿಟ್ಟಿನಲ್ಲಿ 2010ನೇ ಸಾಲಿನ ವಿದ್ಯಾರ್ಥಿ- ವಿದ್ಯಾರ್ಥಿನಿಯರು ಈ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದಾರೆ.

**ಮುಖ್ಯ ಶಿಕ್ಷಕರ ಹಾರೈಕೆ:** ಆಹ್ವಾನ ಪತ್ರಿಕೆ ಸ್ವೀಕರಿಸಿ ಮಾತನಾಡಿದ ಅಂದಿನ ಶಿಕ್ಷಕರು ಹಾಗೂ ಹಾಲಿ ಮುಖ್ಯ ಶಿಕ್ಷಕರಾದ ವೆಂಕಟೇಶ್ ಬಿ.ಆರ್.ವಿ. ರವರು ಹಳೆಯ ವಿದ್ಯಾರ್ಥಿಗಳು ಒಟ್ಟಾಗಿ ಇಂತಹ ಸತ್ಕಾರ್ಯಕ್ಕೆ ಮುಂದಾಗಿರುವುದು ಹೆಮ್ಮೆಯ ವಿಷಯ. ಕಲಿತ ಶಾಲೆಯನ್ನು ಮತ್ತು ಅಕ್ಷರ ಕಲಿಸಿದ ಗುರುಗಳನ್ನು ಸ್ಮರಿಸುವ ಇಂತಹ ಕಾರ್ಯಕ್ರಮಗಳು ಇಂದಿನ ತಲೆಮಾರಿಗೆ ಮಾದರಿಯಾಗಿವೆ ಎಂದು ಹೇಳಿ ಕಾರ್ಯಕ್ರಮಕ್ಕೆ ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕರಾದ ವೆಂಕಟೇಶ್ ಬಿ.ಆರ್.ವಿ., ಶಾಲೆಯ ಹಾಲಿ ಶಿಕ್ಷಕ ವೃಂದದವರು ಹಾಗೂ 2010ನೇ ಸಾಲಿನ ಬ್ಯಾಚ್‌ನ ಹಲವಾರು ವಿದ್ಯಾರ್ಥಿ ವಿದ್ಯಾರ್ಥಿನಿಯರು ಉಪಸ್ಥಿತರಿದ್ದರು

# ಬಿಜೆಪಿ ಪಕ್ಷದ ಮುಖಂಡರಾಗಲಿ ಕಾರ್ಯಕರ್ತರಾಗಲಿ ತುಂಬಾ ಶಿಸ್ತಿನಿಂದ ಸಭೆ ಸಮಾರಂಭಗಳಲ್ಲಿ ಸಂಘಟಿತರಾಗಬೇಕು :ಛಲವಾದಿ ನಾರಾಯಣಸ್ವಾಮಿ



**ದೇವನಹಳ್ಳಿ:** ತಾಲೂಕಿನ ವಿಜಯಪುರ ಪಟ್ಟಣದ ಲಕ್ಷ್ಮೀನರಸಿಂಹ ಸ್ವಾಮಿ ಕಲ್ಯಾಣ ಮಂಟಪದಲ್ಲಿ ಭಾರತೀಯ ಜನತಾ ಪಾರ್ಟಿಯ ಎಲ್ಲಾ ಮುಖಂಡರುಗಳು ಹಾಗೂ ಪದಾಧಿಕಾರಿಗಳು , ಬೂತ್ ಅಧ್ಯಕ್ಷರುಗಳು, ಬೂತ್ ಸಮಿತಿಯ ಸದಸ್ಯರುಗಳು,ಏಂ 2 ಗಳ "ಬೂತ್ ಮಟ್ಟದ ಕಾರ್ಯಗಾರ ,ಬೂತ್ ಸದೃಡ,ಸಂಘಟನೆ, ಮತ್ತು ಖಖಖ ನ ಕುರಿತ ಸಂಪನ್ಮೂಲ ವಿಷಯ ಕುರಿತು ಚರ್ಚೆ ಮತ್ತು ದೇವನಹಳ್ಳಿ ತಾಲೂಕು ಮಂಡಲದ ಅಧ್ಯಕ್ಷ ಅಂಬರೀಶ್ ಗೌಡ ಮತ್ತು ಬಿಜೆಪಿ ಮುಖಂಡರಾದ ಬಿ. ಕೆ.ನಾರಾಯಣಸ್ವಾಮಿ ಅವರ ಹುಟ್ಟುಹಬ್ಬದ ಪ್ರಯುಕ್ತ ಕಾರ್ಯಕರ್ತರು ಮತ್ತು ಅಭಿಮಾನಿಗಳಿಂದ ಜನ್ಮದಿನೋತ್ಸವವನ್ನು" ಹಮ್ಮಿಕೊಳ್ಳಲಾಗಿತ್ತು.

ಈ ವೇಳೆಯಲ್ಲಿ ರಾಜ್ಯ ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕರಾದ ಛಲವಾದಿ ನಾರಾಯಣಸ್ವಾಮಿ ಮಾತನಾಡಿ ಬಿಜೆಪಿ ಪಕ್ಷದ ಮುಖಂಡರಾಗಲಿ ಕಾರ್ಯಕರ್ತರ ಆಗಲಿ ತುಂಬಾ ಶಿಸ್ತಿನಿಂದ ಪ್ರತಿಯೊಬ್ಬರು ಪ್ರತಿಯೊಂದು ಸಭೆ ಸಮಾರಂಭಗಳಲ್ಲಿ ಸಂಘಟಿತರಾಗಬೇಕು ಆಗ ಮಾತ್ರ ಮುಂದಿನ ದಿನಗಳಲ್ಲಿ ಬಿಜೆಪಿ ಪಕ್ಷದ ಗೆಲುವು ಖಚಿತವಾಗುವುದು ಎಂದು ಸಲಹೆ ನೀಡಿದರು. ನಂತರ ಭಾರತೀಯ ಜನತಾ ಪಾರ್ಟಿಯ ದೇವನಹಳ್ಳಿ ತಾಲೂಕಿನ ಅಧ್ಯಕ್ಷರು ಅಂಬರೀಶ ಗೌಡ ಮತ್ತು ಬಿ.ಕೆ ನಾರಾಯಣಸ್ವಾಮಿ ಅವರು ಪಾದರಸದಂತೆ ಪಕ್ಷದ ಕೆಲಸ ಅಚ್ಚುಕಟ್ಟಾಗಿ ನಿರ್ವಹಿಸುತ್ತ ಕಾರ್ಯಕರ್ತರ ನಾಡಿ ಮಿಡಿತವನ್ನು ಅರಿತುಕೊಂಡು ಅವರ ಭಾವನೆಗೆ ತಕ್ಕಂತೆ ಸಹಕರಿಸುವ ವ್ಯಕ್ತಿತ್ವ ಸದಾ ನಗುಮುಖದ ಚಿಲುಮೆ ಇವರು, ಇವರು ದೇವನಹಳ್ಳಿ ಮಂಡಲದ ಅಧ್ಯಕ್ಷರಾದ ಮೇಲೆ ಬಿಜೆಪಿ ಪಕ್ಷದ ಕಾರ್ಯಕರ್ತರಲ್ಲಿ ನವ ಚೈತನ್ಯವನ್ನು ಮೂಡಿಸಿದ್ದಾರೆ ಅಂತಹ ವ್ಯಕ್ತಿಯ ಜನ್ಮದಿನೋತ್ಸವವನ್ನು ಆಚ–ರಿಸುತ್ತಿರುವುದು ಸಂತಸದ ವಿಷಯವಾಗಿದೆ. ಇವರಿಗೆ ಹುಟ್ಟು ಹಬ್ಬದ ಶುಭಾಶಯಗಳು, ಭಗವಂತ ನಿಮಗೆ ಆರೋಗ್ಯವಾಗಿ ಸಂತೋಷಭರಿತವಾದ ಸಂತೃಪ್ತಿಯ ಆಶಯದಲ್ಲಿ ನಿಮ್ಮ ಕನಸು ನನಸಾಗಲಿ ಎಂದು ಶುಭಹಾರೈಸಿದರು.

ದೇವನಹಳ್ಳಿ ತಾಲೂಕು ಮಂ ಡಲದ ಅಧ್ಯಕ್ಷ ಅಂಬರೀಶ್ ಗೌಡ ಮಾ ತನಾಡಿ ಬಿಜೆಪಿ ಪಕ್ಷದ ಎಲ್ಲಾ ಕಾಯ ರ್ಕರ್ತರು ಬಿಎಲ್ಎ –2 ಗಳು ಜನರ ಮತವನ್ನು ಪಡೆಯಲು ಜವಾಬ್ದಾರಿಯುತವಾಗಿ ಕಾರ್ಯಸಂಘಟನೆ ಮಾಡಿ, ಚುನಾವಣೆ ಬಂದರೂ ಬರದಿದ್ದರೂ ಸದಾ ಜನಸೇವೆ ಮತ್ತು ದೇಶದ ಸೇವೆಗೆ ಸಿದ್ದರಾಗಿ, ಜನರ ಮತವನ್ನು ಕದಿಯಬೇಡಿ ಮತ ನೀಡುವ ಜನರ ಹೃದಯವನ್ನು ಗೆಲ್ಲಿ, ದೇಶ ಸೇವೆಗಾಗಿ ನಾವು ಸಬಲರಾಗಲು ಗೆಲವು ಅಗತ್ಯ ಹಾಗೂ ನನ್ನ ಮತ್ತು ಬಿ.ಕೆ ನಾರಾಯಣಸ್ವಾಮಿಯವರ ಹುಟ್ಟುಹಬ್ಬಕ್ಕೆ ಶುಭ ಕೋರಿದ ಪ್ರತಿಯೊಬ್ಬರಿಗೂ ಅಭಿನಂದನೆಗಳು ಎಂದು ಹೇಳಿದರು.

ಸಮಾರಂಭದಲ್ಲಿ ಶ್ರೀ ಆನಂದ್ ಗುರೂಜಿ ಆಶೀರ್ವಚನ ಪಡೆದು, ಅಭಿಮಾ ನಿಗಳು ಮತ್ತು ಕಾರ್ಯಕರ್ತರಿಂದ ಕೇಕ್ ಕತ್ತರಿಸಿ ಸನ್ಮಾನಿಸಿ ಅಭಿನಂದಿಸುವುದರ ಮೂಲಕ ಅದ್ದೂರಿಯಾಗಿ ಜನ್ಮದಿನೋತ್ಸವವನ್ನು ಆಚರಣೆ ಮಾಡಲಾಯಿತು.

ಇದೇ ಸಂದರ್ಭದಲ್ಲಿ ಮಾಜಿ ಶಾಸಕರಾದ ಜಿ. ಚಂದ್ರಣ್ಣ, ಬಿಜೆಪಿ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ಜಿಲ್ಲಾಧ್ಯಕ್ಷ ರಾಮಕೃಷ್ಣಪ್ಪ,ಬಿಜೆಪಿ ಮುಖಂಡ ರಾದ ಓಬದೇನಹಳ್ಳಿ ಮುನಿಯಪ್ಪ,ವಿಜಯಕುಮಾರ್, ಅರುವನಹಳ್ಳಿ ವೆಂಕ ಟೇಗೌಡ, ಸೇರಿದಂತೆ ವಿಜಯಪುರ ನಗರದ ಬಿಎಲ್ಎ –2 ಗಳು, ಕಾರ್ಯಕರ್ತರು ಅಭಿಮಾನಿಗಳು ಭಾಗಿಯಾಗಿದ್ದರು.

# ಬ್ಯಾಗ್‌ನಲ್ಲಿ ಅಡಗಿಸಿಟ್ಟಿದ್ದ ಕೋಟಿ ಮೌಲ್ಯದ ಗಾಂಜಾ ಪತ್ತೆ

**ದೇವನಹಳ್ಳಿ:** ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಕಸ್ಟಮ್ಸ್ ಅಧಿಕಾರಿಗಳು ನಡೆಸಿದ ಕಟ್ಟುನಿಟ್ಟಿನ ತಪಾಸಣೆ ವೇಳೆ ಕೋಟ್ಯಂತರ ರೂಪಾಯಿ ಮೌಲ್ಯದ ಹೈಡ್ರೋಪೋನಿಕ್ ಗಾಂಜಾ ಜಪ್ತಿಯಾಗಿರುವ ಘಟನೆ ಬೆಳಕಿಗೆ ಬಂದಿದೆ. ವಿದೇಶದಿಂದ ಅಕ್ರಮವಾಗಿ ಮಾದಕ ವಸ್ತುಗಳನ್ನು ಸಾಗಣೆ ಮಾಡುವ ಜಾಲದ ವಿರುದ್ಧ ಅಧಿಕಾರಿಗಳು ನಿರಂತರ ಕಾರ್ಯಾಚರಣೆ ನಡೆಸುತ್ತಿರುವ ನಡುವೆಯೇ ಈ ಪ್ರಕರಣ ಪತ್ತೆಯಾಗಿದ್ದು, ಮಾದಕ ವಸ್ತು ಕಳ್ಳಸಾಗಣೆ ತಡೆಯುವಲ್ಲಿ ಮತ್ತೊಂದು ಮಹತ್ವದ ಯಶಸ್ಸು ಸಿಕ್ಕಂತಾಗಿದೆ.



ಮಾಹಿತಿಯ ಪ್ರಕಾರ, ಥೈಲ್ಯಾಂಡ್‌ನ ಬ್ಯಾಂಕಾಕ್ ನಗರದಿಂದ ಬೆಂಗಳೂರಿನ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣಕ್ಕೆ ಬಂದಿಳಿದಿದ್ದ ಪ್ರಯಾಣಿಕನೊಬ್ಬನ ಚಲನವಲನಗಳು ಕಸ್ಟಮ್ಸ್ ಅಧಿಕಾರಿಗಳ ಗಮನ ಸೆಳೆದಿದ್ದವು. ವಾಡಿಕೆಯಂತೆ ಆಗಮಿಸಿದ ಪ್ರಯಾಣಿಕರು ಹಾಗೂ ಅವರ ಲಗೇಜ್‌ಗಳನ್ನು ತಪಾಸಣೆ ನಡೆಸುತ್ತಿದ್ದ ವೇಳೆ ಈ ವ್ಯಕ್ತಿಯ ಬ್ಯಾಗ್ ಕುರಿತು ಅಧಿಕಾರಿಗಳಿಗೆ ಅನುಮಾನ ವ್ಯಕ್ತವಾಗಿದೆ. ಹೀಗಾಗಿ ಆತನ ಲಗೇಜ್ ಅನ್ನು ಪ್ರತ್ಯೇಕವಾಗಿ ತೆಗೆದುಕೊಂಡು ಕೂಲಂಕಷ ಪರಿಶೀಲನೆ ನಡೆಸಲಾಗಿದೆ.

ಪರಿಶೀಲನೆ ವೇಳೆ ಬ್ಯಾಗ್ ಒಳಭಾಗದಲ್ಲಿ ಅತ್ಯಂತ ಚಾಕಚಕ್ಯತೆಯಿಂದ ಅಡಗಿಸಿಡಲಾಗಿದ್ದ ಹೈಡ್ರೋಪೋನಿಕ್ ಗಾಂಜಾ ಪತ್ತೆಯಾಗಿದೆ. ವಿದೇಶಿ ಮಾರುಕಟ್ಟೆಗಳಲ್ಲಿ ಹೆಚ್ಚಿನ ಬೇಡಿಕೆ ಹೊಂದಿರುವ ಈ ಮಾದಕ ವಸ್ತುವನ್ನು ಭಾರತಕ್ಕೆ ಅಕ್ರಮವಾಗಿ ಸಾಗಣೆ ಮಾಡಲು ಯತ್ನಿಸಲಾಗಿತ್ತು ಎನ್ನಲಾಗಿದೆ. ಅಧಿಕಾರಿಗಳು ತಕ್ಷಣವೇ ಮಾದಕ ವಸ್ತುವನ್ನು ವಶಪಡಿಸಿಕೊಂಡು ಪ್ರಯಾಣಿಕನನ್ನು ಬಂಧಿಸಿದ್ದಾರೆ.

ಕಸ್ಟಮ್ಸ್ ಅಧಿಕಾರಿಗಳ ಮಾಹಿತಿ ಪ್ರಕಾರ, ಜಪ್ತಿ ಮಾಡಲಾದ ಹೈಡ್ರೋಪೋನಿಕ್ ಗಾಂಜಾದ ಒಟ್ಟು ತೂಕ 6.66 ಕೆಜಿ ಆಗಿದ್ದು, ಇದರ ಅಂತರರಾಷ್ಟ್ರೀಯ ಮಾರುಕಟ್ಟೆ ಮೌಲ್ಯ ಸುಮಾರು 2.33 ಕೋಟಿ ರೂಪಾಯಿ ಎಂದು ಅಂದಾಜಿಸಲಾಗಿದೆ. ಸಾಮಾನ್ಯ ಗಾಂಜಾಕ್ಕಿಂತ ಹೈಡ್ರೋಪೋನಿಕ್ ಗಾಂಜಾಕ್ಕೆ ಹೆಚ್ಚಿನ ಬೆಲೆ ಇರುವುದರಿಂದ ಇದು ಡ್ರಗ್ಸ್ ಜಾಲದಲ್ಲಿ ವಿಶೇಷ ಸ್ಥಾನ ಹೊಂದಿದೆ ಎಂದು ಅಧಿಕಾ–ರಿಗಳು ತಿಳಿಸಿದ್ದಾರೆ.

ಆರೋಪಿಯನ್ನು ವಶಕ್ಕೆ ಪಡೆದು ಹೆಚ್ಚಿನ ವಿಚಾರಣೆಗೆ ಒಳಪಡಿಸಲಾಗಿದ್ದು, ಈ ಮಾದಕ ವಸ್ತುಗಳನ್ನು ಯಾರ ಸೂಚನೆಯ ಮೇರೆಗೆ ತರಲಾಗುತ್ತಿತ್ತು, ಇದರ ಹಿಂದಿರುವ ಪ್ರಮುಖ ಕಿಂಗ್‌ಪಿನ್‌ಗಳು ಯಾರು, ಬೆಂಗಳೂರಿನಲ್ಲಿ ಅಥವಾ ರಾಜ್ಯದ ಇತರ ಭಾಗಗಳಲ್ಲಿ ಯಾರಿಗೆ ಈ ಸರಕು ತಲುಪಬೇಕಾಗಿತ್ತು ಎಂಬ ವಿಚಾರವಾಗಿ ಅಧಿಕಾರಿಗಳು ತನಿಖೆ ಮುಂದುವರಿಸಿದ್ದಾರೆ. ಅಲ್ಲದೆ, ಈ ಪ್ರಕರಣ ಅಂತರರಾಷ್ಟ್ರೀಯ ಡ್ರಗ್ಸ್ ಜಾಲದೊಂದಿಗೆ ಸಂಬಂಧ ಹೊಂದಿದೆಯೇ ಎಂಬ ದೃಷ್ಟಿಯಿಂದಲೂ ತನಿಖೆ ನಡೆಸಲಾಗುತ್ತಿದೆ.

ಇತ್ತೀಚಿನ ದಿನಗಳಲ್ಲಿ ಕೆಂಪೇಗೌಡ ಅಂತರರಾಷ್ಟ್ರೀಯ ವಿಮಾನ ನಿಲ್ದಾಣದ ಮೂಲಕ ಮಾದಕ ವಸ್ತುಗಳ ಅಕ್ರಮ ಸಾಗಣೆ ಮಾಡಲು ಯತ್ನಿಸುತ್ತಿರುವ ಹಲವು ಪ್ರಕರಣಗಳು ಪತ್ತೆಯಾಗುತ್ತಿದ್ದು, ಕಸ್ಟಮ್ಸ್ ಹಾಗೂ ಇತರ ತನಿಖಾ ಸಂಸ್ಥೆಗಳು ಕಟ್ಟುನಿಟ್ಟಿನ ನಿಗಾ ವಹಿಸಿವೆ. ಈ ಕಾರ್ಯಾಚರಣೆಯಿಂದ ಮತ್ತೊಮ್ಮೆ ದೊಡ್ಡ ಪ್ರಮಾಣದ ಮಾದಕ ವಸ್ತು ಜಾಲದ ಕೊಂಡಿಯೊಂದು ಬಯಲಾಗುವ ಸಾಧ್ಯತೆ ಇದೆ ಎಂದು ಅಧಿಕಾ–ರಿಗಳು ತಿಳಿಸಿದ್ದಾರೆ. ಪ್ರಕರಣಕ್ಕೆ ಸಂಬಂಧಿಸಿದಂತೆ ತನಿಖೆ ಮುಂದುವರಿದಿದ್ದು, ಮುಂದಿನ ದಿನಗಳಲ್ಲಿ ಇನ್ನಷ್ಟು ಮಹತ್ವದ ಮಾಹಿತಿ ಹೊರಬೀಳುವ ನಿರೀಕ್ಷೆಯಿದೆ.

# ಸ್ವಾಭಿಮಾನಿ ಕೃಷ್ಣರಾಜಪೇಟೆ ತಾಲೂಕು ನಾಯಕ ಸಂಘದ ಪದಾಧಿಕಾರಿಗಳು,ನಿರ್ದೇಶಕರ ಅವಿರೋಧ ಆಯ್ಕೆ



**ಕೃಷ್ಣರಾಜಪೇಟೆ** ;ತಾಲೂಕಿನ ವಾಲ್ಮೀಕಿ ಸಮುದಾಯ ಭವನದಲ್ಲಿ ಹಮ್ಮಿಕೊಳ್ಳಲಾಗಿದ್ದ ಮಹಾಸಭೆಯಲ್ಲಿ ಸ್ವಾಭಿಮಾನಿ ಕೃಷ್ಣರಾಜಪೇಟೆ ತಾಲೂಕು ನಾಯಕ ಸಂಘ'ದ ವಿವಿಧ ಹೋಬಳಿ ಹಾಗೂ ನಗರ ಘಟಕಗಳ ಅಧ್ಯಕ್ಷರು, ಪದಾಧಿಕಾ–ರಿಗಳು ಮತ್ತು ನೂತನ ನಿರ್ದೇಶಕರನ್ನು ಅವಿರೋಧವಾಗಿ ಆಯ್ಕೆ ಮಾಡಲಾಯಿತು.

ನೂತನವಾಗಿ ಆಯ್ಕೆಯಾದ ಎಲ್ಲಾ ಪದಾಧಿಕಾ–ರಿಗಳನ್ನು ಇದೇ ಸಂದರ್ಭದಲ್ಲಿ ಸನ್ಮಾನಿಸಿ ಗೌರವಿಸಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಸಮಾಜದ ಹಿರಿಯ ಮುಖಂಡರಾದ ಕೆ.ಎಂ. ಕುಮಾರ್ ರವರು ಸಮಾಜದ ಅಭಿವೃದ್ಧಿಗಾಗಿ ನಾವೆಲ್ಲರೂ ಒಗ್ಗಟ್ಟಿನಿಂದ ಮತ್ತು ಸಕ್ರಿಯವಾಗಿ ಕೆಲಸ ಮಾಡಬೇಕಿದೆ. ಮುಂದಿನ ಪೀಳಿಗೆಯ ಉಜ್ವಲ ಭವಿಷ್ಯಕ್ಕಾಗಿ ಶ್ರಮಿಸುವುದು ನಮ್ಮೆಲ್ಲರ ಕರ್ತವ್ಯ ಎಂದು ಕರೆ ನೀಡುವ ಮೂಲಕ ನೂತನ ಪದಾಧಿಕಾರಿಗಳಿಗೆ ಶುಭ ಹಾರೈಸಿದರು.

ವಿವಿಧ ಘಟಕಗಳ ನೂತನ ಪದಾಧಿಕಾರಿಗಳ ವಿವರ: ಕೃಷ್ಣರಾಜಪೇಟೆ ಮತ್ತು ಹೊಸಹೊಳಲು ನಗರ ಘಟಕ:

**ಗೌರವ ಅಧ್ಯಕ್ಷರು:** ನಟರಾಜ್ ಎನ್. ಅಧ್ಯಕ್ಷರು: ಗಣೇಶ್ ನಾಯಕ. ಉಪಾಧ್ಯಕ್ಷರು: ರಮೇಶ್. ಪ್ರಧಾನ ಕಾರ್ಯದರ್ಶಿ: ಶಿವಾನಂದ. ಕಾರ್ಯದರ್ಶಿ: ರಾಮ ನಾಯಕ. ಸಹ ಕಾರ್ಯದರ್ಶಿ: ಶಿವಲಿಂಗ. ಖಜಾಂಚಿ: ನಾಗರಾಜ ಕೆ.ಎಸ್. ಸಂಘಟನಾ ಕಾರ್ಯದರ್ಶಿ: ನಾಗೇಶ್ ನಾಯಕ. ನಿರ್ದೇಶಕರು: ತಮ್ಮಯ್ಯ ಕೆ. ಕುಮಾರ ಕೆ.ಕೆ., ಗೋಪಾಲ, ಸತ್ಯ.

**ಅಕ್ಕಿಹೆಬ್ಬಾಳು ಹೋಬಳಿ ಘಟಕ:** ಗೌರವ ಅಧ್ಯಕ್ಷರು:/ ಮಂಜಣ್ಣ (ರೈಲ್ವೇ ಸ್ಟೇಷನ್) ಅಧ್ಯಕ್ಷರು: ಗೋಪಾಲ್ ಎಸ್.ಎಸ್. ಉಪಾಧ್ಯಕ್ಷರು: ಶಿವಣ್ಣ ನಾಯಕ ಎ.ಬಿ. ಕಾರ್ಯದರ್ಶಿ: ಮಧು ನಾಯಕ. ಖಜಾಂಚಿ: ಅಶ್ವಥ್. ನಿರ್ದೇಶಕರು: ಎ.ಸಿ. ರಾಘವೇಂದ್ರ ನಾಯಕ, ಸತೀಶ್ ನಾಯಕ, ಅನಂತ್ ರಾಮ್, ಮಂಜು ನಾಯಕ ಎ.ಆರ್. ಪ್ರವೀಣ, ಶಿವಣ್ಣ ನಾಯಕ ಎ. ಎನ್., ತಮ್ಮಯ್ಯ ದಡ್ಡದಹಳ್ಳಿ, ಜಗದೀಶ್.

**ಕಿಕ್ಕೇರಿ ಹೋಬಳಿ ಘಟಕ:** ನಿರ್ದೇಶಕರು: ನಾರಾಯಣ ನಾಯಕ, ಬಸವರಾಜು, ನವೀನ ಕೆ.ಪಿ., ಕುಮಾರ, ಚೆಲುವನಾಯಕ, ವಿಜಯ್.

**ಶೀಳನೆರೆ ಹೋಬಳಿ ಘಟಕ:** ಗೌರವಾಧ್ಯಕ್ಷರು: ಶ್ರೀಕಂಠ ನಾಯಕ. ಅಧ್ಯಕ್ಷರು: ಸುನಿಲ್ ಕುಮಾರ್ ಎಮ್. ಉಪಾಧ್ಯಕ್ಷರು: ಸುನಿಲ್ ಕುಮಾರ್ ಎಮ್.ಆರ್. ಕಾರ್ಯದರ್ಶಿ: ಶಶಿಕುಮಾರ್ ಎಮ್.ಸಿ. ಖಜಾಂಚಿ: ಪ್ರವೀಣ್ ನಾಯಕ. ಸಂಘಟನಾ ಕಾರ್ಯದರ್ಶಿ: ಮಂಜ ನಾಯಕ. ನಿರ್ದೇಶಕರು: ರಾಜಯ್ಯ, ದರ್ಶನ್ ಎಮ್.ಎಸ್., ರಾಕೇಶ್, ಲೋಕೇಶ್.

**ಕಸಬಾ ಹೋಬಳಿ ಘಟಕ (ನಿರ್ದೇಶಕರು):** ಸಿದ್ದರಾಜು ಹರಿಹರಪುರ, ಮಂಜು ನಾಯಕ, ಕೀರ್ತಿ ಕುಮಾರ್, ದರ್ಶನ್ ನಾಯಕ, ಮಹೇಶ್, ರಘು, ಸುರೇಶ್, ದೇವರಾಜ್, ವಿಜಯ್.

**ಸಂತೆಬಾಚಳ್ಳಿ ಹೋಬಳಿ ಘಟಕ:** ನಿರ್ದೇಶಕರು: ನರಸಿಂಹ, ಚೆಲುವರಾಜ್, ಗೋಪಾಲ, ನಾಗೇಶ, ಕೆಂಪರಾಜ್, ವಿಜಯ್, ಜಗದೀಶ್, ಕಿಟ್ಟಿ, ರೇವ, ಮಹದೇವಣ್ಣ, ಮಂಜು, ಬಸವರಾಜ್, ಹುಚ್ಚಣ್ಣ.


**ಕೃಷ್ಣರಾಜಪೇಟೆ ತಾಲೂಕು ಮಟ್ಟದ ನೂತನ ನಿರ್ದೇಶಕರು:** ರಾಜನಾಯಕ (ಕೃಷ್ಣರಾಜಪೇಟೆ), ಸತೀಶ್ (ಹೊಸಹೊಳಲು), ಶ್ರೀಧರ್ ನಾಯಕ (ಕೃಷ್ಣರಾಜಪೇಟೆ), ಪ್ರಸನ್ನ ಕುಮಾರ್ (ವಕೀಲರು, ಮುರುಕನಹಳ್ಳಿ), ಭೋಜ ನಾಯಕ (ಅಕ್ಕಿಹೆಬ್ಬಾಳು), ಚಂದ್ರ ನಾಯಕ (ಆಲಂಬಾಡಿ ಕಾವಲು), ರಾಜನಾಯಕ (ಅಕ್ಕಿಹೆಬ್ಬಾಳು), ಮಹೇಶ್ ನಾಯಕ (ಅಕ್ಕಿಹೆಬ್ಬಾಳು), ಕೆ.ಎಂ. ಕುಮಾರ್ (ಕಾರಿಗನಹಳ್ಳಿ), ಜಿ.ಪಿ. ರಾಜು (ಗೊಲ್ಲರಕೊಪ್ಪಲು), ಕೆಂಪ ನಾಯಕ (ಪೂವನಹಳ್ಳಿ), ಕೆ.ಕೆ. ಶೇಖರ್ (ಕುಪ್ಪಳ್ಳಿ), ಮಹದೇವ್ (ಭಾರತಿಪುರ), ಸಿದ್ದರಾಜ್ (ಕಾಮನಹಳ್ಳಿ), ಹೇಮಂತ್ ಕುಮಾರ್ (ಬೊಮ್ಮೇನಹಳ್ಳಿ).

**ಜೂನ್ 20 ರಂದು ಪ್ರಮುಖ ಸಭೆ:** ವಾಲ್ಮೀಕಿ ಕೋ–ಆಪರೇಟಿವ್ ಸೊಸೈಟಿ ಬ್ಯಾಂಕ್ ಸ್ಥಾಪನೆಗೆ ಚರ್ಚೆ ಬರುವ ದಿನಾಂಕ: 20/06/2026ರ ಶನಿವಾರ ಬೆಳಿಗ್ಗೆ 11 ಗಂಟೆಗೆ ತಾಲೂಕಿನ ವಾಲ್ಮೀಕಿ ಸಮುದಾಯ ಭವನದಲ್ಲಿ ನೂತನ ನಿರ್ದೇಶಕರ ಪ್ರಮುಖ ಸಭೆಯನ್ನು ಕರೆಯಲಾಗಿದೆ. ಈ ಸಭೆಯಲ್ಲಿ ನೂತನ ತಾಲೂಕು ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿ ಹಾಗೂ ಖಜಾಂಚಿ ಸೇರಿದಂತೆ ಪ್ರಮುಖ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ನಡೆಯಲಿದೆ.

ಇದೇ ಸಭೆಯಲ್ಲಿ ಸಮುದಾಯದ ಆರ್ಥಿಕ ಸ್ವಾವಲಂಬನೆಗಾಗಿ ವಾಲ್ಮೀಕಿ ಕೋ–ಆಪರೇಟಿವ್ ಸೊಸೈಟಿ ಬ್ಯಾಂಕ್' ಸ್ಥಾಪಿಸುವ ಕುರಿತು ಮಹತ್ವದ ಚರ್ಚೆ ನಡೆಯಲಿದೆ. ಆದ್ದರಿಂದ ತಾಲೂಕಿನಾದ್ಯಂತ ಇರುವ ಸಮಾಜದ ಮುಖಂಡರು ಪಕ್ಷಾತೀತವಾಗಿ ಈ ಸಭೆಯಲ್ಲಿ ಭಾಗವಹಿಸಿ, ಸೂಕ್ತ ಸಲಹೆ–ಸೂಚನೆಗಳನ್ನು ನೀಡಿ ಸಹಕರಿಸಬೇಕಾಗಿ ಸಭೆಯಲ್ಲಿ ಮನವಿ ಮಾಡಲಾಯಿತು.

ಈ ಸಂದರ್ಭದಲ್ಲಿ ತಾಲೂಕಿನ ಎಲ್ಲಾ ಹೋಬಳಿ ಹಾಗೂ ಗ್ರಾಮಗಳ ನಾಯಕ ಸಮುದಾಯದ ಮುಖಂಡರು, ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿ ಗೊಳಿಸಿದರು.

# ಸಮುದಾಯದ ಮಕ್ಕಳ ಮುಂದಿನ ಭವಿಷ್ಯಕ್ಕಾಗಿ ಕರ್ನಾಟಕ ಮಾದರ ಮಹಾಸಭಾ ಸಂಘಟನೆ ಸದಾಸಿದ್ಧ




**ದೇವನಹಳ್ಳಿ:** ಪಟ್ಟಣದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಕಚೇರಿಯಲ್ಲಿ ಕರ್ನಾಟಕ ಮಾದರ ಮಹಾಸಭಾ ಸಂಘದ ವತಿಯಿಂದ ಜಿಲ್ಲಾಧ್ಯಕ್ಷರಾದ ಹೊಸಕೋಟೆ ಸುಬ್ಬರಾಜು ಅಧ್ಯಕ್ಷತೆಯಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ದೇವನಹಳ್ಳಿ ತಾಲೂಕು ಘಟಕದ ನೂತನ ಪದಾಧಿಕಾರಿಗಳ ಆಯ್ಕೆಯ ಪಟ್ಟಿ ಪ್ರಕಟಿಸಿ ಮಾತನಾಡಿದರು. ಮಾದಿಗ ಸಮುದಾಯದ ಏಳಿಗೆಯನ್ನು ಸಾಧಿಸಲು ಎಲ್ಲರನ್ನೂ ಸಂಘಟಿಸಿ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಗಿದೆ,ಸಮುದಾಯದ ಮಕ್ಕಳ ಮುಂದಿನ ಭವಿಷ್ಯಕ್ಕಾಗಿ ಕರ್ನಾಟಕ ಮಾದರ ಮಹಾಸಭಾ ಸಂಘಟನೆ ಸದಾ ಸಿದ್ಧ,ನೂತನ ಪದಾಧಿಕಾರಿಗಳು ಅವಿರೋಧವಾಗಿ ಆಯ್ಕೆ ಯಾಗಿದ್ದು ಜವಾಬ್ದಾರಿಯುತವಾಗಿ ಕರ್ತವ್ಯ ನಿರ್ವಹಣೆ ಮಾಡಲಿ ಎಂದು ಶುಭ ಹಾರೈಸಿದರು.

**ದೇವನಹಳ್ಳಿ ಘಟಕದ ನೂತನ ಪದಾಧಿಕಾರಿಗಳ ಪಟ್ಟಿ:** ಅಧ್ಯಕ್ಷರು ಎಂ .ನರಸಿಂಹಮೂರ್ತಿ, ಉಪಾಧ್ಯಕ್ಷರು ಅಂಬ–ರೀಶ್, ಕಾರ್ಯದರ್ಶಿ ಶಿವಾನಂದ ಟಿ. ಎಂ, ಖಜಾಂಚಿ ಎಚ್ .ಡಿ ದೇವರಾಜ್ ,ಕಾರ್ಯಕಾರಿ ಸಮಿತಿ ಸದಸ್ಯರು ಎಂ .ಆನಂದ್ ಕುಮಾರ್ ,ಆರ್ ಕುಮಾರ್, ಕೇಶವ ,ಎಂ . ವೆಂಕಟೇಶ್ (ಪ್ರಭು) ವೇಣುಗೋಪಾಲ್ .ಎಂ, ವಿಶೇಷ ಆಹ್ವಾನಿತರುಗಳಾದ ಮಂಜುನಾಥ್ .ಕೆ, ದಾಸರಹಳ್ಳಿ ಸುಧಾ,ವೆಂಕಟೇಶ್, ಪ್ರಕಾಶ್, ನರಸಿಂಹ ಮೂರ್ತಿ,ಜಗದೀಶ್ ಅವಿರೋಧವಾಗಿ ಆಯ್ಕೆ ಮಾಡಿದ್ದಾರೆ.

ರಾಜ್ಯ ಸಂಘಟನಾ ಕಾರ್ಯದರ್ಶಿ ಬಿ.ಕೆ ಶಿವಪ್ಪ ಮಾತನಾಡಿ ನಮ್ಮ ಸಮುದಾಯದವರು ಶಿಕ್ಷಣ, ಆರೋಗ್ಯ, ರಾಜಕೀಯ ಸೇರಿದಂತೆ ಸರ್ವೋತೋಮುಖ ಬೆಳ ವಣಿಗೆಯ ಸದುದ್ದೇಶದೊಂದಿಗೆ ಸಂಘ ಕಾರ್ಯನಿರ್ವ ಹಿಸುತ್ತಿದೆ,ಈ ಸಂಘವು ಇತರ ಸಂಘದೊಂದಿಗೆ ಯಾವುದೇ ಪೈಪೋಟಿ ಹೊಂದಿಲ್ಲ ಎಲ್ಲರ ಸಹಕಾರ ಮತ್ತು ವಿಶ್ವಾರ್ಹತೆಯೊಂದಿಗೆ ಸಕರಾತ್ಮಕ ಅಭಿವೃದ್ಧಿ ಹೊಂದಬೇಕು ಎಂಬುದೇ ನಮ್ಮ ಸಂಘದ ಆಶಯ ಎಂದರು.

ಇದೇ ಮೇ 10 ಭಾನುವಾರದಂದು ಬೆಂಗಳೂರಿನ ಅರಮನೆ ಮೈದಾನದಲ್ಲಿ ಕಾರ್ಯ ಕಾರಿಣಿ ಸಭೆ ನಡೆಯಲಿದ್ದು, ಎಸ್ ಎಸ್ ಎಲ್ ಸಿ ಮತ್ತು ಪಿಯುಸಿಯಲ್ಲಿ ಅತಿ ಹೆಚ್ಚು ಅಂಕ ಪಡೆದ ತಲಾ ಹತ್ತು ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಮತ್ತು ಸಮುದಾಯದ ಹಿರಿಯ ಹೋರಾಟಗಾರರಿಗೆ ಸನ್ಮಾನ ನಡೆಯಲಿದೆ ಪ್ರತಿಯೊಬ್ಬರೂ ಭಾಗವಹಿಸಲು ತಿಳಿಸಿದರು. ನೂತನವಾಗಿ ಆಯ್ಕೆಯಾಗಿರುವ ಪದಾಧಿಕಾರಿಗಳನ್ನು ಜಿಲ್ಲಾಧ್ಯಕ್ಷರು ಮತ್ತು ಮುಖಂಡರು ಸನ್ಮಾನಿಸಿ ಗೌರವಿಸಿದರು.

ಇದೇ ಸಂದರ್ಭದಲ್ಲಿ ಕರ್ನಾಟಕ ಮಾದರ ಮಹಾಸಭಾ ಸಂಘದ ಜಿಲ್ಲಾ ಉಪಾಧ್ಯಕ್ಷ ನಾರಾಯಣಸ್ವಾಮಿ, ಜಿಲ್ಲಾ ಕಾರ್ಯಕಾರಿಣಿ ಕಾರ್ಯರ್ಶಿ ಗೊಡ್ಲುಮದ್ದೇನಹಳ್ಳಿ ಮುನಿರಾಜು, ಮುಖಂಡರುಗಳಾದ ನಾರಾಯಣಪ್ಪ, ಸೀನಪ್ಪ, ಶ್ರೀನಿವಾಸ್,ಮುನಿರಾಜು ಸೇರಿದಂತೆ ಹಲವಾರು ಜಿಲ್ಲಾ ಮತ್ತು ತಾಲೂಕು ಪದಾಧಿಕಾರಿಗಳು ಸದಸ್ಯರು ಭಾಗಿಯಾಗಿದ್ದರು.

# ಕಮರಿಯಿಂದ ಬಿದ್ದು ವ್ಯಕ್ತಿ ಸಾವು: ಆತ್ಮಹತ್ಯೆ ಶಂಕೆ



**ಕಮರಿಯಲ್ಲಿ ಶವ ಪತ್ತೆಗಾಗಿ ಶೋಧ ನಡೆಸುತ್ತಿರುವ ಅರಣ್ಯ ಹಾಗೂ ಪೊಲೀಸ್ ಇಲಾಖೆಯ ಸಿಬ್ಬಂದಿ**

**ಯಳಂದೂರು:** ತಾಲೂಕಿನ ಐತಿಹಾಸಿಕ ಪುರಾಣ ಪ್ರಸಿದ್ಧ ಕ್ಷೇತ್ರವಾಗಿರುವ ಬಿಳಿಗಿರಿರಂಗನಬೆಟ್ಟದ ದೇಗುಲದ ಪಕ್ಕದಲ್ಲಿರುವ ಕಮರಿಯಿಂದ ಬಿದ್ದು ವ್ಯಕ್ತಿಯೊಬ್ಬರು ಮೃತಪಟ್ಟಿರುವ ಘಟನೆ ನಡೆದಿದ್ದು ಆತ್ಮಹತ್ಯೆ ಮಾಡಿ ಕೊಂಡಿರುವ ಶಂಕೆ ವ್ಯಕ್ತವಾಗಿದೆ.

ಮೈಸೂರು ಜಿಲ್ಲೆ ನಂಜನಗೂಡು ತಾಲೂಕಿನ ತಗಡೂರು ಗ್ರಾಮದ ಸುಬ್ಬಶೆಟ್ಟಿ (65) ಎಂಬುವರೇ ಮೃತಪಟ್ಟಿರುವ ವ್ಯಕ್ತಿಯಾಗಿದ್ದಾರೆ. ಮೃತರಿಗೆ ಪತ್ನಿ ಸುಂದ್ರಮ್ಮ ಸೇರಿದಂತೆ ಒಂದು ಗಂಡು, ಒಬ್ಬಳು ಹೆಣ್ಣು ಮಗಳಿದ್ದಾಳೆ. ಇವರು ಕಳೆದ ಎರಡು ಮೂರು ದಿನಗಳಿಂದ ಮನೆಯಿಂದ ನಾಪತ್ತೆಯಾಗಿದ್ದರು. ಇವರು ಅಪಾರ ಪ್ರಮಾಣದಲ್ಲಿ ಸಾಲ ಮಾಡಿಕೊಂಡಿದ್ದರು. ಅಲ್ಲದೆ ಅನಾರೋಗ್ಯದಿಂದ ಬಳಲುತ್ತಿದ್ದರು ಎನ್ನಲಾಗಿದೆ.

ಬಿಳಿಗಿರಿರಂಗನಬೆಟ್ಟದ ಕಮರಿಯ ಮೇಲೆ ಚಪ್ಪಲಿ, ಮಾತ್ರೆ, ಟವೆಲ್ ಪತ್ತೆಯಾಗಿತ್ತು. ಹಾಗಾಗಿ ಅನುಮಾನ ಬಂದು ಇಲ್ಲಿ ಅಳವಡಿಸಲಾಗಿದ್ದ ಸಿಸಿ ಕ್ಯಾಮರವನ್ನು ಪರಿಶೀಲಿಸಲಾಗಿದೆ. ನಂತರ ಅರಣ್ಯ ಇಲಾಖೆಯವರು ಡ್ರೋಣ್ ಮೂಲಕ ಪರಿಶೀಲಿಸಿದಾಗ ಕೊಳೆತ ಸ್ಥಿತಿಯಲ್ಲಿ ವ್ಯಕ್ತಿಯೊಬ್ಬರ ಶವ ಕಮ–ರಿಯ ಕೆಳಗಿರುವ ದಟ್ಟ ಅರಣ್ಯದಲ್ಲಿ ಪತ್ತೆಯಾಗಿದೆ. ಈ ಸಂಬಂಧ ಪೊಲೀಸ್ ಠಾಣೆಗೆ ದೂರು ನೀಡಿದ್ದು ಪೊಲೀಸರು ಸ್ಥಳ ಪರಿಶೀಲನೆ ನಡೆಸಿ ಶವವನ್ನು ಕಮರಿಯಿಂದ ಹೊರತೆಗೆದು ಮರಣೋತ್ತರ ಪರೀಕ್ಷೆ ಚಾಮರಾಜನಗರದ ಸಿಮ್ಸ್ ಆಸ್ಪತ್ರೆಗೆ ತೆಗೆದುಕೊಂಡು ಹೋಗಲಾಗಿದೆ. ಈ ಸಂಬಂಧ ಪಟ್ಟಣದ ಪೊಲೀಸ್ ಠಾಣೆಯಲ್ಲಿ ದೂರು ದಾಖಲಾಗಿದ್ದು ಮುಂದಿನ ಕ್ರಮ ವಹಿಸಲಾಗಿದೆ.

# ಸಿಡಿದೆದ್ದ ರೈತ ಸಂಘದ ಕಾರ್ಯಕರ್ತರಿಂದ ಬಾರ್ ಕೋಲ್ ಚಳುವಳಿ ಮೂಲಕ ಆಕ್ರೋಶ



**ತಾಂಡವಪುರ:** ನಂಜನಗೂಡು ತಾಲೂಕು ಕಚೇ–ರಿಯಲ್ಲಿ ಲಂಚಾವತಾರ ತಾಂಡವವಾಡುತ್ತಿದೆ.ಹಣಬಾಕ ಅಧಿಕಾರಿಗಳ ವಿರುದ್ಧ ತಾಲೂಕು ರೈತ ಸಂಘದ ಕಾರ್ಯ ಕರ್ತರು ಸಿಡಿದೆದ್ದಿದ್ ಬಾರ್ಕೋಲ್ ಚಳುವಳಿ ಮೂಲಕ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ರಾಜ್ಯ ರೈತ ಸಂಘ ಮತ್ತು ಹಸಿರು ಸೇನೆಯ ಕಾರ್ಯಾಧ್ಯಕ್ಷ ವಿದ್ಯಾಸಾಗರ್, ಸಿಂಧುವಳ್ಳಿ ಸತೀಶ್ ಇಮ್ಮಾವು ರಘು ಮತ್ತು ತಾಲೂಕು ಅಧ್ಯಕ್ಷ ಸೂರಳ್ಳಿ ಮಹಾದೇವ ನಾಯಕ ನೇತೃತ್ವದಲ್ಲಿ ಬೃಹತ್ ಪ್ರತಿಭಟನೆ ನಡೆದಿದೆ.

ಬಾರ್ ಕೋಲ್ ಚಳುವಳಿಯಲ್ಲಿ ನೂರಾರು ರೈತರು ಭಾಗಿಯಾಗಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ನಂಜನಗೂಡು ನಗರದ ಅಂಬೇಡ್ಕರ್ ವೃತ್ತದಿಂದ ಪ್ರಾರಂಭವಾದ ಬಾರ್ ಕೋಲ್ ಚಳುವಳಿ ಎಂ ಜಿ ರಸ್ತೆಯ ಮೂಲಕ ಮಿನಿವಿಧಾನಸೌಧ ಕಚೇರಿಗೆ ಆಗಮಿಸಿದೆ.

ದಾರಿಯುವುದಕ್ಕೂ ಕಂದಾಯ ಅಧಿಕಾರಿಗಳ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿದ್ದಾರೆ.

ರೈತರು ಕೃಷಿ ಭೂಮಿಗೆ ಸಂಬಂಧಿಸಿದಂತೆ ಕೆಲಸ ಕಾರ್ಯ ನಡೆಯಬೇಕಾದರೆ ಲಂಚದ ಹಣ ನೀಡಲೇಬೇಕು.

ಜಮೀನಿನ ದಾಖಲಾತಿಗಳು, ವಂಶವೃಕ್ಷ, ಜನನ ಮತ್ತು ಮರಣ ದೃಢೀಕರಣ ಕೃಷಿ ಭೂಮಿಯ ವ್ಯಾಜ್ಯಗಳನ್ನು ಬಗೆಹರಿಸಿಕೊಳ್ಳಲು ತಹಸೀಲ್ದಾರ್ ಕಚೇರಿಯಲ್ಲಿ ಲಂಚದ ಹಣ ನೀಡದಿದ್ದರೆ ಕೆಲಸ ನಡೆಯಲ್ಲ ಎಂದು ಆರೋಪಿಸಿದ್ದಾರೆ.

ಕಂದಾಯ ಅಧಿಕಾರಿಗಳ ಹಣ ದಾಹಕ್ಕೆ ಬೇಸತ್ತ ರೈತರು ಪ್ರತಿಭಟನೆ ಹಾದಿ ಹಿಡಿದಿದ್ದಾರೆ.

ನಂಜನಗೂಡಿಗೆ ನೂತನ ತಹಸೀಲ್ದಾರ್ ಡಾ. ಸ್ಮಿತಾ ರಾಮು ಅಧಿಕಾರ ಪಡೆದು ಆರು ತಿಂಗಳು ಕಳೆದಿದೆ.ರೈತರು ಮತ್ತು ಸಾರ್ವಜನಿಕರ ಕೆಲಸ ಕಾರ್ಯಗಳನ್ನು ಅವರ ಸಿಬ್ಬಂದಿಗಳು ಮಾಡುವುದಿಲ್ಲ.ಕೂಡಲೇ ನಂಜನಗೂಡಿನ ಕಂದಾಯ ಇಲಾಖೆ ಶುದ್ಧವಾಗಬೇಕು.ರೈತರ ಕೆಲಸ ಕಾರ್ಯಗಳು ಸುಲಲಿತವಾಗಿ ನಡೆಯಬೇಕಿದ್ದರೆ ಸಾಕಷ್ಟು ವರ್ಷಗಳಿಂದ ಜಾಂಡ ಹೂಡಿರುವ ಅಧಿಕಾರಿಗಳು ಎತ್ತಂಗಡಿ ಆಗಬೇಕು.ಆರ್ ಐ ಮತ್ತು ವಿಎಗಳು ಹತ್ತಾರು ವರ್ಷಗಳಿಂದ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸಿ ರೈತರನ್ನು ಸುಲಿಗೆ ಮಾಡುತ್ತಿದ್ದಾರೆ ಎಂದು ಆರೋಪಿಸಿದರು. ಪ್ರತಿಭಟನೆ ನಡೆಸಿದರು. ಸ್ಥಳಕ್ಕೆ ಮೈಸೂರು ಜಿಲ್ಲಾಧಿಕಾರಿಗಳು ಸ್ಥಳೀಯ ಶಾಸಕರು ಆಗಮಿಸಬೇಕು

ನಂಜನಗೂಡಿನ ತಹಸೀಲ್ದಾರ್ ಸೇರಿದಂತೆ ಕಂದಾಯ ಇಲಾಖೆಯಲ್ಲಿ ಕಳಂಕ ತರುತ್ತಿರುವ ಅಧಿಕಾ–ರಿಗಳನ್ನು ಕೂಡಲೇ ವರ್ಗಾವಣೆ ಮಾಡಬೇಕು ನಂಜನಗೂಡು ಕ್ಷೇತ್ರದ ಜನರ ಸೇವೆ ಮಾಡಲು ಬಂದ ಅಧಿಕಾರಿಗಳು ರೈತರನ್ನು ಸುಲಿಗೆ ಮಾಡಿ ಅಕ್ರಮವಾಗಿ ಆಸ್ತಿ ಮತ್ತು ತೋಟ ಮಾಡಿದ್ದಾರೆ ಇಂತಹ ಅಧಿಕಾರಿಗಳನ್ನು ಗುರುತಿಸಿ ತಾಲೂಕಿನಿಂದ ಹೊರಗಟ್ಟಬೇಕು ಎಂದು ಆಗ್ರಹಿಸಿದರು...

1.ಅಕ್ರಮವಾಗಿ ಮಾಡಿರುವ ಆಸ್ತಿಯನ್ನು ಮುಟ್ಟುಗೋಲು ಹಾಕಬೇಕು..!

ನಂಜನಗೂಡು ತಾಲೂಕಿನಲ್ಲಿ ರೈತರ ಮತ್ತು ಸಾರ್ವಜನಿಕರ ಕೆಲಸ ಮಾಡಲು ಬಂದಿರುವ ರೆವಿನ್ಯೂ ಅಧಿಕಾರಿಗಳು ಹತ್ತಾರು ವರ್ಷಗಳ ಕಾಲ ಒಂದೇ ಸ್ಥಳದಲ್ಲಿ ಕಾರ್ಯನಿರ್ವಹಿಸಿ ಹುಲ್ಲಹಳ್ಳಿಯ ಹೆಡಿಯಾಲ ಮತ್ತು ದೊಡ್ಡ ಕವಲಂದೆ ಮತ್ತು ಕಳಲೆ ಭಾಗದಲ್ಲಿ ಅಕ್ರಮ ಆಸ್ತಿ ಮಾಡಿದ್ದಾರೆ. ಇದನ್ನು ಕುಲಂಕುಷವಾಗಿ ತನಿಖೆ ಮಾಡಿ ಸರ್ಕಾರ ವಶಪಡಿಸಿಕೊಂಡು ಮುಟ್ಟುಗೋಲು ಹಾಕಬೇಕು ಅಂತಹ ಅಧಿಕಾರಿಗಳನ್ನು ಕೆಲಸದಿಂದ ವಜಾ ಮಾಡಬೇಕು.

2. ತಹಸಿಲ್ದಾರ್ ಡಾ. ಸ್ಮಿತಾ ರಾಮು ರವರನ್ನು ಕೂಡಲೇ ತಾಲೂಕಿನಿಂದ ವರ್ಗಾವಣೆ ಮಾಡಿ

ರೈತರು ಮತ್ತು ಸಾರ್ವಜನಿಕರು ತಮ್ಮ ಸಮಸ್ಯೆ ಬಗೆಹರಿಸಿಕೊಳ್ಳಲು ತಹಸೀಲ್ದಾರ್ ಕಚೇರಿಗೆ ಧಾವಿಸಿದರೆ ನಿಮ್ಮ ಮೇಲೆ ಪ್ರಕರಣ ದಾಖಲಿಸಿ ಜೈಲಿಗೆ ಕಳಿಸುತ್ತೇನೆ ಎಂದು ಸಮಸ್ಯೆ ಹೇಳುವ ರೈತರಿಗೆ ತಹಸೀಲ್ದಾರ್ ಧಮ್ಕಿ ಹಾಕುತ್ತಿದ್ದಾರೆ. ಇದರಿಂದ ತಾಲೂಕಿನ ಜನತೆ ರೊಚ್ಚಿಗೆದ್ದಿದ್ದಾರೆ ಕೂಡಲೇ ತಹಸಿಲ್ದಾರ್ ಡಾ. ಸ್ಮಿತಾ ರಾಮುರನ್ನು ಕೂಡಲೇ ವರ್ಗಾವಣೆ ಮಾಡಬೇಕು ಎಂದು ಬಾರ್ಕೋಲ್ ಚಳುವಳಿಯಲ್ಲಿ ಆಗ್ರಹ ಪಡಿಸಿದರು.

# ಚೆಸ್ ಚಾಂಪಿಯನ್ ಪ್ರಜ್ಞಾನಂದ ಜೊತೆ ಚೆಸ್ ಆಡಿ 50 ಲಕ್ಷ ರೂ. ಕೊಟ್ಟ ವಿಜಯ್




**ಚೆನ್ನೈ:** ಅಂತರರಾಷ್ಟ್ರೀಯ ಚದುರಂಗ ಕ್ಷೇತ್ರದಲ್ಲಿ ಭಾರತಕ್ಕೆ ಮತ್ತೊಂದು ಐತಿಹಾಸಿಕ ಹೆಗ್ಗಳಿಕೆಯನ್ನು ತಂದುಕೊಟ್ಟ ಗ್ರ್ಯಾಂಡ್‌ಮಾಸ್ಟರ್ ಆರ್. ಪ್ರಜ್ಞಾನಂದ ಅವರನ್ನು ತಮಿಳುನಾಡು ಸರ್ಕಾರ ಭರ್ಜರಿಯಾಗಿ ಸನ್ಮಾನಿಸಿದೆ. ನಾರ್ವೆ ಚೆಸ್ 2026 ಟೂರ್ನಿಯಲ್ಲಿ ಚಾಂಪಿಯನ್ ಆಗಿ ಹೊರಹೊಮ್ಮಿದ ಪ್ರಜ್ಞಾನಂದ ಅವರಿಗೆ ಸೋಮವಾರ ಚೆನ್ನೈನಲ್ಲಿರುವ ತಮಿಳುನಾಡು ಸಚಿವಾಲಯದಲ್ಲಿ ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರು 50 ಲಕ್ಷ ರೂಪಾಯಿಗಳ ನಗದು ಬಹುಮಾನ ನೀಡಿ ಅಭಿನಂದಿಸಿದರು. ಇದೇ ವೇಳೆ ಮುಖ್ಯಮಂತ್ರಿ ಮತ್ತು ಪ್ರಜ್ಞಾನಂದ ಅವರ ನಡುವೆ ನಡೆದ ಸ್ನೇಹಪೂರ್ವಕ ಚದುರಂಗ ಆಟದ ಕ್ಷಣಗಳು ಎಲ್ಲರ ಗಮನ ಸೆಳೆದವು.

**ನಾರ್ವೆ ಚೆಸ್‌ನಲ್ಲಿ ಭಾರತದ ಐತಿಹಾಸಿಕ ಸಾಧನೆ:** ವಿಶ್ವದ ಅತ್ಯಂತ ಪ್ರತಿಷ್ಠಿತ ಚದುರಂಗ ಟೂರ್ನಿಗಳಲ್ಲಿ ಒಂದಾಗಿ ಪರಿಗಣಿಸಲ್ಪಡುವ ನಾರ್ವೆ ಚೆಸ್ ಸ್ಪರ್ಧೆಯಲ್ಲಿ ಪ್ರಶಸ್ತಿ ಗೆಲ್ಲುವುದು ಯಾವುದೇ ಆಟಗಾರನಿಗೆ ದೊಡ್ಡ ಸಾಧನೆಯಾಗಿದೆ. ಈ ಬಾರಿಯ ಟೂರ್ನಿಯಲ್ಲಿ ಭಾರತದ ಯುವ ಗ್ರ್ಯಾಂಡ್‌ಮಾಸ್ಟರ್ ಆರ್. ಪ್ರಜ್ಞಾನಂದ ಅತ್ಯುತ್ತಮ ಪ್ರದರ್ಶನ ನೀಡಿ ಚಾಂಪಿಯನ್ ಪಟ್ಟ ಅಲಂಕರಿಸಿದ್ದಾರೆ. ಇದರೊಂದಿಗೆ ನಾರ್ವೆ ಚೆಸ್ ಪ್ರಶಸ್ತಿ ಗೆದ್ದ ಮೊದಲ ಭಾರತೀಯ ಆಟಗಾರ ಎಂಬ ಐತಿಹಾಸಿಕ ದಾಖಲೆಯನ್ನು ತಮ್ಮ ಹೆಸರಿಗೆ ಬರೆದುಕೊಂಡಿದ್ದಾರೆ.

ಓಸ್ಲೋದಲ್ಲಿ ನಡೆದ ಈ ಪ್ರತಿಷ್ಠಿತ ಟೂರ್ನಿಯಲ್ಲಿ ವಿಶ್ವದ ಅಗ್ರ ಶ್ರೇಯಾಂಕಿತ ಆಟಗಾರರ ವಿರುದ್ಧ ಸೆಣಸಿದ ಪ್ರಜ್ಞಾನಂದ, ತಮ್ಮ ಚತುರ ತಂತ್ರಗಾರಿಕೆ, ಆತ್ಮವಿಶ್ವಾಸ ಮತ್ತು ಅದ್ಭುತ ಆಟದ ಮೂಲಕ ಎಲ್ಲರ ಮೆಚ್ಚುಗೆಗೆ ಪಾತ್ರರಾದರು. ಕೇವಲ 20 ವರ್ಷ ವಯಸ್ಸಿನಲ್ಲೇ ಅವರು ಸಾಧಿಸಿರುವ ಈ ಗೆಲುವು ಭಾರತೀಯ ಚದುರಂಗ ಇತಿಹಾಸದಲ್ಲಿ ಮಹತ್ವದ ಮೈಲಿಗಲ್ಲಾಗಿ ಪರಿಗಣಿಸಲಾಗಿದೆ.

**ಮುಖ್ಯಮಂತ್ರಿ ಜೊತೆ ವಿಶೇಷ ಭೇಟಿ:** ನಾರ್ವೆ ಚೆಸ್ ಚಾಂಪಿಯನ್ ಆಗಿ ಭಾರತಕ್ಕೆ ಮರಳಿದ ಬಳಿಕ ಪ್ರಜ್ಞಾನಂದ ಅವರು ತಮ್ಮ ಕುಟುಂಬ ಸದಸ್ಯರೊಂದಿಗೆ ಮುಖ್ಯಮಂತ್ರಿ ಸಿ. ಜೋಸೆಫ್ ವಿಜಯ್ ಅವರನ್ನು ಭೇಟಿಯಾದರು. ಸಚಿವಾಲಯದಲ್ಲಿ ನಡೆದ ಈ ವಿಶೇಷ ಕಾರ್ಯಕ್ರಮದಲ್ಲಿ ಮುಖ್ಯಮಂತ್ರಿ ಅವರು ಪ್ರಜ್ಞಾನಂದ ಅವರನ್ನು ಆತ್ಮೀಯವಾಗಿ ಸ್ವಾಗತಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಚದುರಂಗ ಬೋರ್ಡ್ ಅಳವಡಿಸಲಾಗಿದ್ದು, ಮುಖ್ಯಮಂತ್ರಿ ವಿಜಯ್ ಅವರು ಪ್ರಜ್ಞಾನಂದ ಅವರೊಂದಿಗೆ ಕೆಲ ನಿಮಿಷಗಳ ಕಾಲ ಸ್ನೇಹಪೂರ್ವಕವಾಗಿ ಚೆಸ್ ಆಡಿದರು. ಮುಖ್ಯಮಂತ್ರಿಯವರು ಒಂದು ದಾಳವನ್ನು ಚಲಾಯಿಸಿದಾಗ ಅಲ್ಲಿದ್ದ ಅಧಿಕಾರಿಗಳು, ಕ್ರೀಡಾ ಇಲಾಖೆಯ ಸಿಬ್ಬಂದಿ ಹಾಗೂ ಕುಟುಂಬ ಸದಸ್ಯರು ಆಸಕ್ತಿಯಿಂದ ಆ ಕ್ಷಣವನ್ನು ವೀಕ್ಷಿಸಿದರು. ಈ ದೃಶ್ಯ ಕಾರ್ಯಕ್ರಮದ ಪ್ರಮುಖ ಆಕರ್ಷಣೆಯಾಗಿತ್ತು.

**50 ಲಕ್ಷ ರೂಪಾಯಿಗಳ ಬಹುಮಾನ:** ಪ್ರಜ್ಞಾನಂದ ಅವರ ವಿಶ್ವಮಟ್ಟದ ಸಾಧನೆಯನ್ನು ಗುರುತಿಸಿ ತಮಿಳುನಾಡು ಕ್ರೀಡಾ ಅಭಿವೃದ್ಧಿ ಪ್ರಾಧಿಕಾರ (ಖಆಂಖ) ವತಿಯಿಂದ 50 ಲಕ್ಷ ರೂಪಾಯಿಗಳ ನಗದು ಬಹುಮಾನವನ್ನು ಮುಖ್ಯಮಂತ್ರಿ ಅವರು ಹಸ್ತಾಂತರಿಸಿದರು. ಈ ವೇಳೆ ಪ್ರಜ್ಞಾನಂದ ತಮ್ಮ ನಾರ್ವೆ ಚೆಸ್ ಟ್ರೋಫಿಯನ್ನು ಪ್ರದರ್ಶಿಸಿದರು. ಟ್ರೋಫಿಯನ್ನು ವೀಕ್ಷಿಸಿದ ಮುಖ್ಯಮಂತ್ರಿ ವಿಜಯ್ ಅವರು ಯುವ ಗ್ರ್ಯಾಂಡ್‌ಮಾಸ್ಟರ್‌ಗೆ ಅಭಿನಂದನೆ ಸಲ್ಲಿಸಿ ಮುಂದಿನ ದಿನಗಳಲ್ಲಿ ಇನ್ನೂ ಹೆಚ್ಚಿನ ಯಶಸ್ಸು ಗಳಿಸುವಂತೆ ಶುಭ ಹಾರೈಸಿದರು.

ಪ್ರಜ್ಞಾನಂದ ಅವರ ಸಾಧನೆ ಕೇವಲ ವೈಯಕ್ತಿಕ ಗೆಲುವಲ್ಲ, ಅದು ತಮಿಳುನಾಡು ಮತ್ತು ಇಡೀ ಭಾರತದ ಕ್ರೀಡಾ ಕ್ಷೇತ್ರಕ್ಕೆ ಹೆಮ್ಮೆ ತರುವಂತಹ ಸಾಧನೆಯಾಗಿದೆ ಎಂದು ಮುಖ್ಯಮಂತ್ರಿ ಹೇಳಿದರು.

**ಸರ್ಕಾರದ ನಿರಂತರ ಪ್ರೋತ್ಸಾಹ:** ಕಾರ್ಯಕ್ರಮದಲ್ಲಿ ಮಾತನಾಡಿದ ಮುಖ್ಯಮಂತ್ರಿ ವಿಜಯ್, ರಾಜ್ಯ ಸರ್ಕಾರ ಕ್ರೀಡಾಪಟುಗಳಿಗೆ ಅಗತ್ಯವಿರುವ ಎಲ್ಲಾ ರೀತಿಯ ಬೆಂಬಲವನ್ನು ನೀಡಲು ಬದ್ಧವಾಗಿದೆ ಎಂದು ತಿಳಿಸಿದರು. ಪ್ರತಿಭಾವಂತ ಕ್ರೀಡಾಪಟುಗಳಿಗೆ ಆರ್ಥಿಕ ನೆರವು, ಅತ್ಯಾಧುನಿಕ ತರಬೇತಿ ಸೌಲಭ್ಯಗಳು, ಅಂತಾರಾಷ್ಟ್ರೀಯ ಮಟ್ಟದ ಮೂಲಸೌಕರ್ಯ ಹಾಗೂ ವಿಶೇಷ ಪ್ರೋತ್ಸಾಹ ಯೋಜನೆಗಳನ್ನು ಒದಗಿಸಲಾಗುತ್ತಿದೆ ಎಂದು ಅವರು ಹೇಳಿದರು.

ಪ್ರಜ್ಞಾನಂದ ಅವರು ತಮಿಳುನಾಡು ಕ್ರೀಡಾ ಅಭಿವೃದ್ಧಿ ಪ್ರಾಧಿಕಾರದ 'ಎಲೈಟ್ ಸ್ಕೀಮ್' ಯೋಜನೆಯ ಫಲಾನುಭವಿಯಾಗಿದ್ದಾರೆ. ಈ ಯೋಜನೆಯಡಿಯಲ್ಲಿ ಅವರಿಗೆ ವರ್ಷಕ್ಕೆ ಸುಮಾರು 30 ಲಕ್ಷ ರೂಪಾಯಿಗಳ ಆರ್ಥಿಕ ಸಹಾಯಧನ ನೀಡಲಾಗುತ್ತಿದೆ. ಇಂತಹ ಯೋಜನೆಗಳ ಮೂಲಕ ರಾಜ್ಯದ ಪ್ರತಿಭಾವಂತ ಕ್ರೀಡಾಪಟುಗಳು ಜಾಗತಿಕ ಮಟ್ಟದಲ್ಲಿ ಸಾಧನೆ ಮಾಡಲು ನೆರವಾಗುತ್ತಿದೆ ಎಂದು ಮುಖ್ಯಮಂತ್ರಿ ಅಭಿಪ್ರಾಯಪಟ್ಟರು.

**ಯುವಕರಿಗೆ ಮಾದರಿಯಾದ ಪ್ರಜ್ಞಾನಂದ:** ಪ್ರಜ್ಞಾನಂದ ಅವರ ಸಾಧನೆ ಬಗ್ಗೆ ಮಾತನಾಡಿದ ಮುಖ್ಯಮಂತ್ರಿ, "ಚೆನ್ನೈನ ಯುವಕರು ಹಾಗೂ ರಾಜ್ಯದ ವಿದ್ಯಾರ್ಥಿಗಳು ಪ್ರಜ್ಞಾನಂದ ಅವರನ್ನು ಮಾದರಿಯಾಗಿಸಿಕೊಳ್ಳಬೇಕು. ಪರಿಶ್ರಮ, ಶಿಸ್ತು ಮತ್ತು ನಿರಂತರ ಅಭ್ಯಾಸ ಇದ್ದರೆ ವಿಶ್ವಮಟ್ಟದಲ್ಲಿ ಸಾಧನೆ ಮಾಡಬಹುದು ಎಂಬುದಕ್ಕೆ ಅವರು ಜೀವಂತ ಉದಾಹರಣೆ," ಎಂದು ಹೇಳಿದರು.

ಅಲ್ಲದೆ, ರಾಜ್ಯದ ಪ್ರತಿಯೊಬ್ಬ ಪ್ರತಿಭಾವಂತ ಆಟಗಾರನಿಗೂ ಸರ್ಕಾರ ಸಂಪೂರ್ಣ ಬೆಂಬಲ ನೀಡಲಿದೆ ಎಂಬ ಭರವಸೆಯನ್ನು ವ್ಯಕ್ತಪಡಿಸಿದರು.

**ಕುಟುಂಬದ ಸಂತಸ:** ಈ ವಿಶೇಷ ಕಾರ್ಯಕ್ರಮದಲ್ಲಿ ಪ್ರಜ್ಞಾನಂದ ಅವರ ತಂದೆ, ತಾಯಿ ಮತ್ತು ಸಹೋದರಿಯೂ ಭಾಗವಹಿಸಿದ್ದರು. ತಮ್ಮ ಮಗನ ಸಾಧನೆಗೆ ಸಂತಸ ವ್ಯಕ್ತಪಡಿಸಿದ ಕುಟುಂಬ ಸದಸ್ಯರು, ರಾಜ್ಯ ಸರ್ಕಾರ ನೀಡಿದ ಗೌರವಕ್ಕೆ ಕೃತಜ್ಞತೆ ಸಲ್ಲಿಸಿದರು. ಪ್ರಜ್ಞಾನಂದ ಅವರ ಸಾಧನೆಗೆ ಕುಟುಂಬದ ಬೆಂಬಲ ಮತ್ತು ತ್ಯಾಗವೂ ಪ್ರಮುಖ ಕಾರಣವಾಗಿದೆ ಎಂದು ಕಾರ್ಯಕ್ರಮದಲ್ಲಿ ಹಲವು ಗಣ್ಯರು ಅಭಿಪ್ರಾಯಪಟ್ಟರು.

**ಭಾರತದ ಚದುರಂಗಕ್ಕೆ ಹೊಸ ಅಧ್ಯಾಯ:** ಆರ್. ಪ್ರಜ್ಞಾನಂದ ಅವರ ನಾರ್ವೆ ಚೆಸ್ ವಿಜಯವು ಭಾರತೀಯ ಚದುರಂಗ ಕ್ಷೇತ್ರಕ್ಕೆ ಹೊಸ ಉತ್ಸಾಹ ತುಂಬಿದೆ. ವಿಶ್ವನಾಥನ್ ಆನಂದ್ ಅವರ ನಂತರ ವಿಶ್ವ ವೇದಿಕೆಯಲ್ಲಿ ಭಾರತದ ಪರವಾಗಿ ನಿರಂತರವಾಗಿ ಗಮನ ಸೆಳೆಯುತ್ತಿರುವ ಯುವ ಪ್ರತಿಭೆಗಳ ಪೈಕಿ ಪ್ರಜ್ಞಾನಂದ ಪ್ರಮುಖರಾಗಿದ್ದಾರೆ. ಅವರ ಈ ಸಾಧನೆ ಭವಿಷ್ಯದಲ್ಲಿ ಇನ್ನಷ್ಟು ಯುವ ಆಟಗಾರರು ಚದುರಂಗ ಕ್ಷೇತ್ರದತ್ತ ಆಕರ್ಷಿತರಾಗಲು ಪ್ರೇರಣೆಯಾಗಲಿದೆ ಎಂದು ಕ್ರೀಡಾ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

ನಾರ್ವೆ ಚೆಸ್ ಚಾಂಪಿಯನ್ ಆಗಿ ಹೊರಹೊಮ್ಮಿರುವ ಪ್ರಜ್ಞಾನಂದ ಅವರಿಗೆ ತಮಿಳುನಾಡು ಸರ್ಕಾರ ನೀಡಿದ ಈ ಗೌರವವು ಅವರ ಸಾಧನೆಗೆ ದೊರೆತ ಮತ್ತೊಂದು ಮಹತ್ವದ ಮನ್ನಣೆಯಾಗಿ ಪರಿಣಮಿಸಿದ್ದು, ಭಾರತೀಯ ಚದುರಂಗದ ಸುವರ್ಣಯುಗಕ್ಕೆ ಮತ್ತೊಂದು ಅಧ್ಯಾಯವನ್ನು ಸೇರಿಸಿದೆ.

# ಸಾಯಿ ಪಲ್ಲವಿ ಅವಕಾಶ ಕಿತ್ತುಕೊಂಡ ರಶ್ಮಿಕಾ




**ಚೆನ್ನೈ:** ಭಾರತೀಯ ಸಂಗೀತ ಲೋಕದ ದಿಗ್ಗಜ ಗಾಯಕಿ, ಭಾರತ ರತ್ನ ಪುರಸ್ಕೃತೆ ಎಂ.ಎಸ್. ಸುಬ್ಬಲಕ್ಷ್ಮಿ ಅವರ ಜೀವನಾಧಾರಿತ ಸಿನಿಮಾ ಸದ್ಯ ಸಿನಿಪ್ರಿಯರಲ್ಲಿ ಭಾರೀ ಕುತೂಹಲ ಮೂಡಿಸಿದೆ. ಕಳೆದ ಕೆಲವು ತಿಂಗಳುಗಳಿಂದ ಈ ಮಹತ್ವಾಕಾಂಕ್ಷೆಯ ಚಿತ್ರದಲ್ಲಿ ಎಂ.ಎಸ್. ಸುಬ್ಬಲಕ್ಷ್ಮಿ ಪಾತ್ರವನ್ನು ನಟಿ ಸಾಯಿ ಪಲ್ಲವಿ ನಿರ್ವಹಿಸಲಿದ್ದಾರೆ ಎಂಬ ಸುದ್ದಿ ವ್ಯಾಪಕವಾಗಿ ಹರಿದಾಡುತ್ತಿತ್ತು. ಈ ಪಾತ್ರಕ್ಕಾಗಿ ಸಾಯಿ ಪಲ್ಲವಿ ವಿಶೇಷ ತಯಾರಿ ನಡೆಸುತ್ತಿದ್ದು, ಸುಬ್ಬಲಕ್ಷ್ಮಿ ಅವರ ಗಾಯನ ಶೈಲಿ, ವ್ಯಕ್ತಿತ್ವ ಹಾಗೂ ಜೀವನದ ವಿವಿಧ ಅಂಶಗಳನ್ನು ಅಧ್ಯಯನ ಮಾಡು ತ್ತಿದ್ದಾರೆ ಎಂಬ ವರದಿಗಳೂ ಕೇಳಿಬಂದಿದ್ದವು.

ಮಾತ್ರವಲ್ಲದೆ, ಸುಬ್ಬಲಕ್ಷ್ಮಿ ಅವರು ಹಾಡಿದ್ದ ಪ್ರಸಿದ್ಧ ಕೀರ್ತನೆಗಳು ಮತ್ತು ಭಕ್ತಿಗೀತೆಗಳನ್ನು ಸಾಯಿ ಪಲ್ಲವಿ ಅಭ್ಯಾಸ ಮಾಡುತ್ತಿದ್ದಾರೆ, ಪಾತ್ರಕ್ಕೆ ಜೀವ ತುಂಬಲು ಸಂಗೀತ ತರಬೇತಿಯನ್ನೂ ಪಡೆಯುತ್ತಿದ್ದಾರೆ ಎಂಬ ಸುದ್ದಿಗಳು ಸಿನಿ ವಲಯದಲ್ಲಿ ಸಾಕಷ್ಟು ಚರ್ಚೆಗೆ ಕಾರಣವಾಗಿದ್ದವು. ಹೀಗಾಗಿ, ಈ ಬಯೋಪಿಕ್‌ನಲ್ಲಿ ಸಾಯಿ ಪಲ್ಲವಿ ಯನ್ನೇ ಕಾಣಬಹುದು ಎಂದು ಅಭಿಮಾನಿಗಳು ನಿರೀಕ್ಷಿಸಿದ್ದರು.

ಆದರೆ ಇದೀಗ ಚಿತ್ರಕ್ಕೆ ಸಂಬಂಧಿಸಿದಂತೆ ಹೊಸ ಬೆಳವಣಿಗೆಯೊಂದು ಹೊರಬಿದ್ದಿದ್ದು, ಸಾಯಿ ಪಲ್ಲವಿ ಈ ಯೋಜನೆಯ ಭಾಗವಾಗಿರುವುದಿಲ್ಲ ಎಂಬ ಸುದ್ದಿ ಸಿನಿ ವಲಯದಲ್ಲಿ ಹರಿದಾಡುತ್ತಿದೆ. ಇತ್ತೀಚಿನ ವರದಿಗಳ ಪ್ರಕಾರ, ಎಂ.ಎಸ್. ಸುಬ್ಬಲಕ್ಷ್ಮಿ ಪಾತ್ರದಿಂದ ಸಾಯಿ ಪಲ್ಲವಿ ಹೊರಬಂದಿದ್ದು, ಅವರ ಬದಲಿಗೆ ನಟಿ ರಶ್ಮಿಕಾ ಮಂದಣ್ಣ ಅವರನ್ನು ಆಯ್ಕೆ ಮಾಡಲಾಗಿದೆ ಎನ್ನಲಾಗುತ್ತಿದೆ.

ಈ ಸುದ್ದಿ ಸಾಮಾಜಿಕ ಜಾಲತಾಣಗಳು ಹಾಗೂ ಚಿತ್ರರಂಗದಲ್ಲಿ ಸಾಕಷ್ಟು ಚರ್ಚೆಗೆ ಗ್ರಾಸ ವಾಗಿದೆ. ಸಾಯಿ ಪಲ್ಲವಿಯಂತಹ ಪ್ರತಿಭಾವಂತ ನಟಿಯನ್ನು ಏಕೆ ಕೈಬಿಡಲಾಯಿತು ಎಂಬ ಪ್ರಶ್ನೆ ಅಭಿ ಮಾನಿಗಳಲ್ಲಿ ಮೂಡಿದೆ. ಆದರೆ ಈ ಬದಲಾವಣೆಯ ಹಿಂದಿನ ನಿಖರ ಕಾರಣವೇನು ಎಂಬುದು ಇನ್ನೂ ಬಹಿರಂಗವಾಗಿಲ್ಲ. ದಿನಾಂಕಗಳು ಹೊಂದಿಕೆ ಯಾಗದಿರುವುದು, ಸೃಜನಾತ್ಮಕ ಭಿನ್ನಾಭಿ ಪ್ರಾಯಗಳು ಅಥವಾ ಇತರ ವೃತ್ತಿಪರ ಕಾರಣಗಳು ಇರಬಹುದು ಎಂಬ ಊಹಾಪೋಹಗಳು ಕೇಳಿ ಬರುತ್ತಿವೆ.

ಇನ್ನೊಂದೆಡೆ, ರಾಷ್ಟ್ರೀಯ ಮಟ್ಟದಲ್ಲಿ ಜನಪ್ರಿಯತೆ ಗಳಿಸಿರುವ ರಶ್ಮಿಕಾ ಮಂದಣ್ಣ ಈ ಪಾತ್ರಕ್ಕೆ ಆಯ್ಕೆಯಾಗಿದ್ದಾರೆ ಎಂಬ ಸುದ್ದಿ ಅವರ ಅಭಿಮಾನಿ ಗಳಲ್ಲಿ ಸಂತಸ ಮೂಡಿಸಿದೆ. ಆದರೆ, ಎಂ.ಎಸ್. ಸುಬ್ಬಲಕ್ಷ್ಮಿಯಂತಹ ಮಹಾನ್ ಸಂಗೀತ ಗಾರ್ತಿಯ ಪಾತ್ರಕ್ಕೆ ಯಾರು ಸೂಕ್ತ ಎಂಬ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ ಪರ–ವಿರೋಧ ಚರ್ಚೆಗಳೂ ಆರಂಭವಾಗಿವೆ.

ಗಮನಾರ್ಹ ಸಂಗತಿಯೆಂದರೆ, ಈವರೆಗೆ ಚಿತ್ರತಂಡ ಸಾಯಿ ಪಲ್ಲವಿ ಹೊರಬಂದಿರುವ ಬಗ್ಗೆ ಅಥವಾ ರಶ್ಮಿಕಾ ಮಂದಣ್ಣ ಆಯ್ಕೆಯಾಗಿರುವ ಬಗ್ಗೆ ಯಾವುದೇ ಅಧಿಕೃತ ಪ್ರಕಟಣೆ ನೀಡಿಲ್ಲ. ಹೀಗಾಗಿ ಈ ಎಲ್ಲಾ ಮಾಹಿತಿಗಳು ಸದ್ಯಕ್ಕೆ ಸಿನಿ ವಲಯದಲ್ಲಿ ಹ–ರಿದಾಡುತ್ತಿರುವ ವರದಿಗಳಾಗಿದ್ದು, ಅಧಿಕೃತ ಘೋಷಣೆಗಾಗಿ ಅಭಿಮಾನಿಗಳು ಕಾಯುತ್ತಿದ್ದಾರೆ.

ಆದರೂ, ಸಾಯಿ ಪಲ್ಲವಿ ಬದಲಿಗೆ ರಶ್ಮಿಕಾ ಮಂದಣ್ಣ ಆಯ್ಕೆಯಾಗಿದ್ದಾರೆ ಎಂಬ ಸುದ್ದಿ ಚಿತ್ರ ರಂಗದಲ್ಲಿ ಭಾರೀ ಸಂಚಲನ ಮೂಡಿಸಿದ್ದು, ಈ ಬಯೋಪಿಕ್ ಬಗ್ಗೆ ಕುತೂಹಲವನ್ನು ಮತ್ತಷ್ಟು ಹೆಚ್ಚಿಸಿದೆ. ಮುಂದಿನ ದಿನಗಳಲ್ಲಿ ಚಿತ್ರತಂಡದಿಂದ ಅಧಿಕೃತ ಮಾಹಿತಿ ಹೊರಬಿದ್ದ ಬಳಿಕವೇ ಈ ಚರ್ಚೆ ಗಳಿಗೆ ಸ್ಪಷ್ಟ ಉತ್ತರ ಸಿಗಲಿದೆ.

ಇದರ ನಡುವೆ, ಎಂ.ಎಸ್. ಸುಬ್ಬಲಕ್ಷ್ಮಿ ಅವರ ಜೀವನ ಚರಿತ್ರೆ ಆಧಾರಿತ ಸಿನಿಮಾ ಆಗಿರುವುದರಿಂದ ಪಾತ್ರಧಾರಿಗಳ ಆಯ್ಕೆಯ ಮೇಲೆ ಅಭಿಮಾನಿಗಳು ಮತ್ತು ಸಂಗೀತ ಪ್ರೇಮಿಗಳ ವಿಶೇಷ ಗಮನ ನೆಟ್ಟಿದೆ. ಭಾರತೀಯ ಶಾಸ್ತ್ರೀಯ ಸಂಗೀತವನ್ನು ಜಾಗತಿಕ ಮಟ್ಟಕ್ಕೆ ಕೊಂಡೊಯ್ದ ಮಹಾನ್ ಗಾಯಕಿಯಾಗಿ ಗುರುತಿಸಿಕೊಂಡಿರುವ ಸುಬ್ಬಲಕ್ಷ್ಮಿ ಅವರ ವ್ಯಕ್ತಿತ್ವ, ಗಾಯನ ಶೈಲಿ ಹಾಗೂ ಜೀವನ ಪಯಣವನ್ನು ತೆರೆ ಮೇಲೆ ಪರಿಣಾಮಕಾರಿಯಾಗಿ ಮೂಡಿಸುವುದು ದೊಡ್ಡ ಸವಾಲಾಗಿದೆ. ಹೀಗಾಗಿ ಈ ಪಾತ್ರವನ್ನು ಯಾರು ನಿರ್ವಹಿಸಲಿದ್ದಾರೆ ಎಂಬ ವಿಷಯವೇ ಚಿತ್ರ ಬಿಡುಗಡೆಯ ಮುನ್ನವೇ ದೊಡ್ಡ ಚರ್ಚೆಯ ವಿಷಯವಾಗಿದ್ದು, ಅಧಿಕೃತ ಘೋಷಣೆಯ ನಿರೀಕ್ಷೆಯಲ್ಲಿ ಸಿನಿಪ್ರಿಯರು ಕಾದು ಕುಳಿತಿದ್ದಾರೆ.

# ಭಾರತೀಯ ಮಹಿಳಾ ಫುಟ್ಬಾಲ್ ತಂಡಕ್ಕೆ ಪ್ರಧಾನಿ ಮೋದಿ ಅಭಿನಂದನೆ




**ನವದೆಹಲಿ:** ದಕ್ಷಿಣ ಏಷ್ಯಾದ ಮಹಿಳಾ ಫುಟ್ಬಾಲ್ ಕ್ಷೇತ್ರದಲ್ಲಿ ಮತ್ತೊಮ್ಮೆ ತನ್ನ ಪ್ರಾಬಲ್ಯವನ್ನು ಸಾಬೀತುಪಡಿಸಿರುವ ಭಾರತೀಯ ಮಹಿಳಾ ಫುಟ್ಬಾಲ್ ತಂಡ, 2026ರ ಖಂಈಈ ಮಹಿಳಾ ಚಾಂಪಿಯನ್‌ಶಿಪ್ ಪ್ರಶಸ್ತಿಯನ್ನು ಭರ್ಜರಿಯಾಗಿ ಗೆದ್ದು ದೇಶದ ಕ್ರೀಡಾಭಿಮಾನಿಗಳ ಹೆಮ್ಮೆ ಹೆಚ್ಚಿಸಿದೆ. ಹಾಲಿ ಚಾಂಪಿಯನ್ ಬಾಂಗ್ಲಾದೇಶ ತಂಡವನ್ನು ಫೈನಲ್ ಪಂದ್ಯದಲ್ಲಿ 3–1 ಗೋಲುಗಳ ಅಂತರದಿಂದ ಮಣಿಸಿದ ಭಾರತ, ಏಳು ವರ್ಷಗಳ ಬಳಿಕ ಮತ್ತೆ ಈ ಪ್ರತಿಷ್ಠಿತ ಕಿರೀಟವನ್ನು ತನ್ನದಾಗಿಸಿಕೊಂಡಿದೆ. ಈ ಐತಿಹಾಸಿಕ ಸಾಧನೆಗೆ ಪ್ರಧಾನಿ ನರೇಂದ್ರ ಮೋದಿ ಸೇರಿದಂತೆ ದೇಶದ ಹಲವು ಗಣ್ಯರು ಅಭಿನಂದನೆ ಸಲ್ಲಿಸಿದ್ದು, ತಂಡದ ಸಾಧನೆಗೆ ವ್ಯಾಪಕ ಮೆಚ್ಚುಗೆ ವ್ಯಕ್ತವಾಗಿದೆ.



**ಗೋವಾದಲ್ಲಿ ರೋಚಕ ಫೈನಲ್:** ಗೋವಾದ ಪಂಡಿತ್ ಜವಾಹರಲಾಲ್ ನೆಹರು ಕ್ರೀಡಾಂಗಣದಲ್ಲಿ ಶನಿವಾರ ನಡೆದ ಫೈನಲ್ ಪಂದ್ಯವು ಆರಂಭದಿಂದಲೇ ರೋಚಕತೆಯಿಂದ ಕೂಡಿತ್ತು. ಚಾಂಪಿಯನ್ ಪಟ್ಟ ಉಳಿಸಿಕೊಳ್ಳುವ ಉತ್ಸಾಹದಲ್ಲಿದ್ದ ಬಾಂಗ್ಲಾದೇಶ ಮತ್ತು ಪ್ರಶಸ್ತಿಯನ್ನು ಮರಳಿ ಗೆಲ್ಲುವ ಗುರಿ ಹೊಂದಿದ್ದ ಭಾರತ ಎರಡೂ ತಂಡಗಳು ಆಕ್ರಮಣಕಾರಿ ಆಟ ಪ್ರದರ್ಶಿಸಿದವು.

ಪಂದ್ಯದ ಮೊದಲಾರ್ಧದಲ್ಲಿ ಭಾರತೀಯ ಆಟಗಾರ್ತಿಯರು ಚೆಂಡಿನ ಮೇಲೆ ಹೆಚ್ಚಿನ ನಿಯಂತ್ರಣ ಸಾಧಿಸಿ ಹಲವು ಗೋಲು ಅವಕಾಶಗಳನ್ನು ಸೃಷ್ಟಿಸಿದರು. ಇದರ ಫಲವಾಗಿ 42ನೇ ನಿಮಿಷದಲ್ಲಿ ಪ್ಯಾರಿ ಕ್ಸಾಕ್ಸಾ ಭಾರತಕ್ಕೆ ಮೊದಲ ಗೋಲು ಗಳಿಸಿ ಮುನ್ನಡೆ ತಂದುಕೊಟ್ಟರು. ಈ ಗೋಲು ಭಾರತೀಯ ಅಭಿಮಾನಿಗಳಲ್ಲಿ ಸಂಭ್ರಮ ಮೂಡಿಸಿತು.

ಆದರೆ ಮೊದಲಾರ್ಧದ ಅಂತ್ಯದ ವೇಳೆಗೆ ಬಾಂಗ್ಲಾದೇಶ ಹೋರಾಟ ಬಿಟ್ಟುಕೊಡಲಿಲ್ಲ. ಇಂಜುರಿ ಸಮಯದ ಮೊದಲ ನಿಮಿಷದಲ್ಲಿ (45+1) ರಿತು ಪೋರ್ನಾ ಚಕ್ಮಾ ಸಮಬಲದ ಗೋಲು ಗಳಿಸಿ ಪಂದ್ಯದ ರೋಚಕತೆಯನ್ನು ಹೆಚ್ಚಿಸಿದರು. ಮೊದಲಾರ್ಧವು 1–1 ಗೋಲುಗಳಿಂದ ಸಮಬಲದಲ್ಲಿ ಅಂತ್ಯಗೊಂಡಿತು.

**ಎರಡನೇ ಅರ್ಧದಲ್ಲಿ ಭಾರತದ ಮೇಲುಗೈ:** ಎರಡನೇ ಅರ್ಧ ಆರಂಭವಾಗುತ್ತಿದ್ದಂತೆಯೇ ಭಾರತ ತನ್ನ ಆಕ್ರಮಣಕಾರಿ ಆಟವನ್ನು ಮತ್ತಷ್ಟು ತೀವ್ರಗೊಳಿಸಿತು. ಕೇವಲ ಒಂದು ನಿಮಿಷದೊಳಗೆ, 46ನೇ ನಿಮಿಷದಲ್ಲಿ ಸ್ಯಾನ್ಫಿಡಾ ನೊಂಗ್ರಮ್ ಅದ್ಭುತ ಗೋಲು ಬಾರಿಸಿ ಭಾರತಕ್ಕೆ ಮತ್ತೆ ಮುನ್ನಡೆ ತಂದುಕೊಟ್ಟರು. ಈ ಗೋಲು ಪಂದ್ಯದ ದಿಕ್ಕನ್ನೇ ಬದಲಿಸಿತು.

ಮುನ್ನಡೆ ಪಡೆದ ಬಳಿಕವೂ ಭಾರತೀಯ ಆಟಗಾರ್ತಿಯರು ರಕ್ಷಣಾತ್ಮಕ ಆಟಕ್ಕೆ ಮೊರೆ ಹೋಗದೆ ನಿರಂತರವಾಗಿ ಎದುರಾಳಿಗಳ ಮೇಲೆ ಒತ್ತಡ ಹೇರಿದರು. ಇದರ ಪರಿಣಾಮವಾಗಿ 82ನೇ ನಿಮಿಷದಲ್ಲಿ ಲಿಂಡಾ ಕೋಮ್ ಸೆರ್ಟೊ ಮೂರನೇ ಗೋಲು ಗಳಿಸಿ ಭಾರತದ ಗೆಲುವನ್ನು ಬಹುತೇಕ ಖಚಿತಪಡಿಸಿದರು. ಕೊನೆಯ ಸೀಟಿವರೆಗೆ ಶಿಸ್ತುಬದ್ಧ ಆಟ ಪ್ರದರ್ಶಿಸಿದ ಭಾರತ ಅಂತಿಮವಾಗಿ 3–1 ಅಂತರದಲ್ಲಿ ಜಯ ಸಾಧಿಸಿತು.

**ಏಳು ವರ್ಷಗಳ ಬಳಿಕ ಕಿರೀಟ ವಾಪಸ್:** ಭಾರತೀಯ ಮಹಿಳಾ ಫುಟ್ಬಾಲ್ ತಂಡಕ್ಕೆ ಈ ಗೆಲುವು ವಿಶೇಷ ಮಹತ್ವದ್ದಾಗಿದೆ. ಕೊನೆಯ ಬಾರಿ ಭಾರತ 2019ರಲ್ಲಿ ಖಂಈಈ ಮಹಿಳಾ ಚಾಂಪಿಯನ್‌ಶಿಪ್ ಪ್ರಶಸ್ತಿಯನ್ನು ಗೆದ್ದಿತ್ತು. ನಂತರದ ವರ್ಷಗಳಲ್ಲಿ ಸ್ಪರ್ಧಾತ್ಮಕ ಸವಾಲುಗಳನ್ನು ಎದುರಿಸಿದ್ದ ತಂಡ ಇದೀಗ ಮತ್ತೆ ಚಾಂಪಿಯನ್ ಆಗಿ ಹೊರಹೊಮ್ಮಿದ್ದು, ದಕ್ಷಿಣ ಏಷ್ಯಾದ ಮಹಿಳಾ ಫುಟ್ಬಾಲ್‌ನಲ್ಲಿ ತನ್ನ ಪ್ರಾಬಲ್ಯವನ್ನು ಪುನಃ ಸ್ಥಾಪಿಸಿದೆ.

ಈ ಗೆಲುವು ಕೇವಲ ಒಂದು ಟ್ರೋಫಿಗೆ ಸೀಮಿತವಾಗದೇ, ಭಾರತೀಯ ಮಹಿಳಾ ಫುಟ್ಬಾಲ್‌ನ ಬೆಳವಣಿಗೆ ಮತ್ತು ಪ್ರತಿಭೆಯ ಪ್ರತೀಕವಾಗಿದೆ ಎಂದು ಕ್ರೀಡಾ ತಜ್ಞರು ಅಭಿಪ್ರಾಯಪಟ್ಟಿದ್ದಾರೆ.

**ಪ್ರಧಾನಿ ಮೋದಿ ಅಭಿನಂದನೆ:** ಭಾರತೀಯ ತಂಡದ ಈ ಸಾಧನೆಗೆ ಪ್ರಧಾನಿ ನರೇಂದ್ರ ಮೋದಿ ಅವರು ಸಾಮಾಜಿಕ ಜಾಲತಾಣ (ಹಿಂದಿನ ಟ್ವಿಟರ್) ಮೂಲಕ ಅಭಿನಂದನೆ ಸಲ್ಲಿಸಿದರು.

ಮಹಿಳಾ ಚಾಂಪಿಯನ್‌ಶಿಪ್ 2026 ಅನ್ನು ಗೆದ್ದ ಭಾರತೀಯ ಮಹಿಳಾ ಫುಟ್ಬಾಲ್ ತಂಡಕ್ಕೆ ಹೃತ್ಪೂರ್ವಕ ಅಭಿನಂದನೆಗಳು. ಪಂದ್ಯಾವಳಿಯುದ್ದಕ್ಕೂ ತಂಡ ಅತ್ಯುತ್ತಮ ಪ್ರದರ್ಶನ ನೀಡಿದೆ. ಈ ಗೆಲುವು ದೇಶದ ಯುವಕರಿಗೆ ಸ್ಫೂರ್ತಿಯಾಗಲಿದ್ದು, ಇನ್ನಷ್ಟು ಯುವಜನರನ್ನು ಫುಟ್ಬಾಲ್ ಕ್ರೀಡೆಯತ್ತ ಆಕರ್ಷಿಸುತ್ತದೆ. ತಂಡದ ಮುಂದಿನ ಎಲ್ಲಾ ಪ್ರಯತ್ನಗಳಿಗೆ ಶುಭಾಶಯಗಳು" ಎಂದು ಪ್ರಧಾನಿ ತಮ್ಮ ಸಂದೇಶದಲ್ಲಿ ತಿಳಿಸಿದ್ದಾರೆ.

ಪ್ರಧಾನಿಯ ಈ ಸಂದೇಶಕ್ಕೆ ಸಾವಿರಾರು ಕ್ರೀಡಾಭಿಮಾನಿಗಳು ಪ್ರತಿಕ್ರಿಯೆ ನೀಡಿದ್ದು, ತಂಡದ ಸಾಧನೆಗೆ ಮೆಚ್ಚುಗೆ ವ್ಯಕ್ತಪಡಿಸಿದ್ದಾರೆ.

**ಕ್ರೀಡಾಭಿಮಾನಿಗಳಿಂದ ಮೆಚ್ಚುಗೆ:** ಅಖಿಲ ಭಾರತ ಫುಟ್ಬಾಲ್ ಒಕ್ಕೂಟ ಕೂಡ ಭಾರತೀಯ ಮಹಿಳಾ ತಂಡದ ಸಾಧನೆಯನ್ನು ಶ್ಲಾಘಿಸಿದೆ. ಸಾಮಾಜಿಕ ಜಾಲತಾಣಗಳಲ್ಲಿ ತಂಡದ ಆಟಗಾರ್ತಿಯರ ಚಿತ್ರಗಳು, ಪಂದ್ಯದಲ್ಲಿನ ಪ್ರಮುಖ ಕ್ಷಣಗಳು ಹಾಗೂ ವಿಜಯೋತ್ಸವದ ದೃಶ್ಯಗಳು ವ್ಯಾಪಕವಾಗಿ ಹಂಚಿಕೆಯಾಗುತ್ತಿವೆ.

ದೇಶದ ವಿವಿಧ ಭಾಗಗಳಿಂದ ಕ್ರೀಡಾಭಿಮಾನಿಗಳು ತಂಡಕ್ಕೆ ಅಭಿನಂದನೆ ಸಲ್ಲಿಸುತ್ತಿದ್ದಾರೆ. ವಿಶೇಷವಾಗಿ ಕೇರಳ, ಮಣಿಪುರ, ಹ–ರಿಯಾಣ, ಒಡಿಶಾ, ಪಶ್ಚಿಮ ಬಂಗಾಳ ಸೇರಿದಂತೆ ಫುಟ್ಬಾಲ್‌ಗೆ ಹೆಚ್ಚಿನ ಬೆಂಬಲವಿರುವ ರಾಜ್ಯಗಳ ಅಭಿಮಾನಿಗಳು ಭಾರತೀಯ ಆಟಗಾರ್ತಿಯರ ಸಾಧನೆಯನ್ನು ಸಂಭ್ರಮಿಸಿದ್ದಾರೆ.

**ಮಹಿಳಾ ಫುಟ್ಬಾಲ್‌ಗೆ ಹೊಸ ಉತ್ತೇಜನ:** ಕಳೆದ ಕೆಲವು ವರ್ಷಗಳಲ್ಲಿ ಭಾರತದಲ್ಲಿ ಮಹಿಳಾ ಫುಟ್ಬಾಲ್‌ಗೆ ಹೆಚ್ಚಿನ ಉತ್ತೇಜನ ದೊರೆಯುತ್ತಿದೆ. ರಾಷ್ಟ್ರೀಯ ಮತ್ತು ಅಂತರರಾಷ್ಟ್ರೀಯ ಮಟ್ಟದಲ್ಲಿ ಮಹಿಳಾ ಆಟಗಾರ್ತಿಯರು ಉತ್ತಮ ಪ್ರದರ್ಶನ ನೀಡುತ್ತಿರುವುದು ಕ್ರೀಡೆಯ ಬೆಳವಣಿಗೆಗೆ ನೆರವಾಗುತ್ತಿದೆ. ಖಂಈಈ ಚಾಂಪಿಯನ್‌ಶಿಪ್‌ನಲ್ಲಿ ದೊರೆತ ಈ ಯಶಸ್ಸು ಯುವ ಆಟಗಾರ್ತಿಯರಿಗೆ ಮತ್ತಷ್ಟು ಪ್ರೇರಣೆಯಾಗಲಿದೆ ಎಂದು ತಜ್ಞರು ಅಭಿಪ್ರಾಯಪಡುತ್ತಾರೆ.

ಗ್ರಾಮೀಣ ಹಾಗೂ ನಗರ ಪ್ರದೇಶಗಳ ಅನೇಕ ಯುವತಿಯರು ಈಗ ಫುಟ್ಬಾಲ್‌ನ್ನು ವೃತ್ತಿಪರ ಕ್ರೀಡೆಯಾಗಿ ಆಯ್ಕೆ ಮಾಡಿಕೊಳ್ಳಲು ಮುಂದಾಗುತ್ತಿದ್ದಾರೆ. ಇಂತಹ ಯಶಸ್ಸುಗಳು ಅವರ ಕನಸುಗಳಿಗೆ ಹೊಸ ರೆಕ್ಕೆ ನೀಡಲಿವೆ.

**ದೇಶದ ಹೆಮ್ಮೆ ಹೆಚ್ಚಿಸಿದ ಸಾಧನೆ:** 2026ರ ಮಹಿಳಾ ಚಾಂಪಿಯನ್‌ಶಿಪ್‌ನಲ್ಲಿ ಭಾರತೀಯ ಮಹಿಳಾ ಫುಟ್ಬಾಲ್ ತಂಡದ ಗೆಲುವು ದೇಶದ ಕ್ರೀಡಾ ಇತಿಹಾಸದಲ್ಲಿ ಮತ್ತೊಂದು ಸುವರ್ಣ ಅಧ್ಯಾಯವಾಗಿ ದಾಖಲಾಗಿದೆ. ಬಾಂಗ್ಲಾದೇಶ ವಿರುದ್ಧದ ಭರ್ಜರಿ ಜಯ, ತಂಡದ ಸಮನ್ವಯತೆ, ಹೋರಾಟದ ಮನೋಭಾವ ಮತ್ತು ಅದ್ಭುತ ಪ್ರದರ್ಶನವು ಭಾರತದ ಮಹಿಳಾ ಫುಟ್ಬಾಲ್ ಭವಿಷ್ಯದ ಬಗ್ಗೆ ಹೊಸ ಆಶಾವಾದ ಮೂಡಿಸಿದೆ. ಈ ಸಾಧನೆಯ ಮೂಲಕ ಭಾರತೀಯ ಮಹಿಳಾ ಫುಟ್ಬಾಲ್ ತಂಡವು ದೇಶದ ಕ್ರೀಡಾಭಿಮಾನಿಗಳಿಗೆ ಹೆಮ್ಮೆಯ ಕ್ಷಣವನ್ನು ಉಡುಗೊರೆಯಾಗಿ ನೀಡಿದೆ.

# 44 ವಂಚನೆ ಪ್ರಕರಣ ಪತ್ತೆ: 2 ಕೋಟಿ ಮೌಲ್ಯದ ವಸ್ತು ವಶ



**ತಾಂಡವಪುರ:** ಮೈಸೂರು ನಗರ ದಲ್ಲಿ ಭರ್ಜರಿ ಕಾರ್ಯಾಚರಣೆ ನಡೆಸಿ ರುವ ಮೈಸೂರು ನಗರ ಪೊಲೀಸರು ಮೂರು ತಿಂಗಳಲ್ಲಿ ಮೈಸೂರು ನಗರದಲ್ಲಿ ನಡೆದಿರುವ 44 ವಂಚನೆ ಮತ್ತು ಕಳವು ಪ್ರಕರಣಗಳನ್ನು ಪತ್ತೆ ಹಚ್ಚಿರುವ ಪೊಲೀಸರು, 2.12 ಕೋಟಿ ರೂ. ಮೌಲ್ಯದ ನಗದು,ಚಿನ್ನಾಭರಣ ಮತ್ತು ವಸ್ತುಗಳನ್ನು ವಶಪಡಿಸಿಕೊಳ್ಳುವಲ್ಲಿ ಯಶಸ್ವಿ ಯಾಗಿದ್ದಾರೆ.

ಈ ಸಂಬಂಧ ಸುದ್ದಿಗೋಷ್ಠಿ ನಡೆಸಿದ ನಗರ ಪೊಲೀಸ್ ಆಯುಕ್ತೆ ಸೀಮಾ ಲಾಟ್ಕರ್ ಮಾತನಾಡಿ, 44 ಪ್ರಕರಣಗಳಲ್ಲಿ ಭಾಗಿಯಾಗಿದ್ದ 55 ಮಂದಿಯನ್ನು ಬಂಧಿಸಲಾಗಿದೆ. ಕಳೆದ ಮೂರು ತಿಂಗಳಲ್ಲಿ ನಡೆದಿದ್ದ ದರೋಡೆ–1, ಸುಲಿಗೆ–2, ಕನ್ನ ಕಳವು–10, ಮನೆ ಕಳ್ಳತನ–9, ಮನೆ ಕೆಲಸದವರಿಂದ ಕಳ್ಳತನ–4, ವಾಹನ ಕಳ್ಳತನ–10, ಸಾಮಾನ್ಯ ಕಳ್ಳತನ–5, ವಂಚನೆ–3 ಸೇರಿ 44 ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ ಎಂದು ಮಾಹಿತಿ ನೀಡಿದರು.

41 ಕಳವು ಪ್ರಕರಣದಲ್ಲಿ 2.09 ಕೋಟಿ ರೂ. ಮೌಲ್ಯದ 1 ಕೆಜಿ 578 ಗ್ರಾಂ ಚಿನ್ನಾಭರಣ, 3 ಕೆಜಿ 578 ಗ್ರಾಂ. ಬೆಳ್ಳಿ ಪದಾರ್ಥ, 10 ವಾಹನಗಳು ಮತ್ತು 2.76 ಲಕ್ಷ ರೂ. ನಗದು ವಶಪಡಿಸಿಕೊಳ್ಳಲಾಗಿದೆ. ಇದೇ ಕಳ್ಳತನ ಸೇರಿದಂತೆ ನಾನಾ ಪ್ರಕರಣಗಳಲ್ಲಿ ನಗದು ಸೇರಿದಂತೆ ಚಿನ್ನಾಭರಣ ಕಳೆದುಕೊಂಡ ಮಾಲೀಕರಿಗೆ ನಗರ ಪೊಲೀಸ್ ಆಯುಕ್ತರು,ಕಳವಾಗಿದ್ದ ವಸ್ತುಗಳನ್ನು ಹಿಂದಿರುಗಿಸಿದರು.

**234 ಮೊಬೈಲ್ ಪತ್ತೆ:** ಕಳೆದ ಮೂರು ತಿಂಗಳಲ್ಲಿ ಸಾರ್ವಜನಿಕರು ಕಳೆದುಕೊಂಡಿದ್ದ ಮೊಬೈಲ್‌ಗಳನ್ನು ಸಿಇಐ–ಆರ್ ಪೋರ್ಟಲ್‌ನಲ್ಲಿ ಪತ್ತೆ ಹಚ್ಚಲಾಗಿದ್ದು, 26.08 ಲಕ್ಷ ರೂ. ಮೌಲ್ಯದ 234 ಮೊಬೈಲ್‌ಗಳನ್ನು ಪತ್ತೆ ಹಚ್ಚಿ ಮಾಲೀಕರಿಗೆ ಹಿಂದಿರುಗಿಸಲಾಗಿದೆ," ಎಂದರು. ಕಾರ್ಯಕ್ರಮದಲ್ಲಿ ಡಿಸಿಪಿಗಳಾದ ಡಾ. ಹರ್ಷ ಪ್ರಿಯಂ ವದಾ, ಕೆ.ಎಸ್.ಸುಂದರ್ ರಾಜ್ ಇದ್ದರು.

**ಎಲ್ಲೆಲ್ಲೆ ಎಷ್ಟೆಷ್ಟು:** ಮಂಡಿ ಠಾಣೆ: ಇಬ್ಬರ ಬಂಧನ, 90 ಲಕ್ಷ ರೂ. ಮೌಲ್ಯದ 660 ಗ್ರಾಂ ಚಿನ್ನಾಭರಣ ವಶ, ವಿಜಯ ನಗರ ಠಾಣೆ: ಇಬ್ಬರ ಬಂಧನ,23.5 ಲಕ್ಷ ರೂ, ಮೌಲ್ಯದ 170 ಗ್ರಾಂ ಚಿನ್ನಾಭರಣ, ಬಟ್ಟೆ ವಶ. ಸಿಸಿಬಿ: ಆರು ಮಂದಿ ಬಂಧನ, 5 ಪ್ರಕರಣ ಪತ್ತೆ, 23.74 ಲಕ್ಷ ರೂ. ನಗದು, ಚಿನ್ನಾಭರಣ ವಶ. ಸರಸ್ವತಿಪುರಂ: ಇಬ್ಬರ ಬಂಧನ, 4 ಕಳ್ಳತನ ಪತ್ತೆ, 18.4 ಲಕ್ಷ ರೂ. ಚಿನ್ನಾಭರಣ ವಶ. ನಜರ್‌ಬಾದ್: ಇಬ್ಬರ ಬಂಧನ, 2 ಪ್ರಕರಣ ಪತ್ತೆ, 9.25 ಲಕ್ಷ ರೂ. ಮೌಲ್ಯದ ನಗದು,ಚಿನ್ನಾಭರಣ ವಶ,

ಮೇಟಗಳ್ಳಿ: 13 ಮಂದಿ ಬಂಧನ, 10 ಪ್ರಕರಣ ಪತ್ತೆ, 8.22 ಲಕ್ಷ ರೂ. ಮೌಲ್ಯದ ನಗದು,ಚಿನ್ನಾಭರಣ, ಪದಾರ್ಥ ವಶಕ್ಕೆ ಪಡೆದಿದ್ದಾರೆ.

ಉದಯಗಿರಿ: 5 ಮಂದಿ ಬಂಧನ, 3 ಪ್ರಕರಣ ಪತ್ತೆ,5.45 ಲಕ್ಷ ರೂ. ಮೌಲ್ಯದ ಚಿನ್ನಾಭರಣ, ವಾಹನ ವಶ., ಕೃಷ್ಣರಾಜ: ಒರ್ವನ ಬಂಧನ, 1 ಪ್ರಕರಣ ಪತ್ತೆ, 4.65 ಲಕ್ಷ ರೂ. ಚಿನ್ನಾಭರಣ ವಶ. ಕುವೆಂಪು ನಗರ: 6 ಮಂದಿ ಬಂಧನ, 3 ಪ್ರಕರಣ ಪತ್ತೆ,4.10 ಲಕ್ಷ ರೂ. ಮೌಲ್ಯದ ಚಿನ್ನಾಭರಣ ವಸ್ತು ವಶ. ಲಕ್ಷ್ಮಿಪುರಂ: ಒಬ್ಬನ ಬಂಧನ, 1 ಪ್ರಕರಣ ಪತ್ತೆ,3.55 ಲಕ್ಷ ರೂ. ಮೌಲ್ಯದ ನಗದು,ಚಿನ್ನಾಭರಣ ವಶ. ವಿದ್ಯಾರಣ್ಯಪುರಂ: ಒರ್ವನ ಬಂಧನ, 1 ಪ್ರಕರಣ ಪತ್ತೆ, 3 ಲಕ್ಷ ರೂ. ಮೌಲ್ಯದ ಬೆಳ್ಳಿ ಪದಾರ್ಥ ವಶ. ಹೆಬ್ಬಾಳು ಠಾಣೆ:8 ಮಂದಿ ಬಂಧನ, 4 ಪ್ರಕರಣ ಪತ್ತೆ,1.43 ಲಕ್ಷ ರೂ. ಮೌಲ್ಯದ ಚಿನ್ನಾಭರಣ ವಶ. ವಿವಿ ಪುರಂ: ಒರ್ವನ ಬಂಧನ, 1 ಪ್ರಕರಣ ಪತ್ತೆ, 90 ಸಾವಿರ ರೂ. ಮೌಲ್ಯದ ಚಿನ್ನಾಭರಣ ವಶ. ದೇವರಾಜ: 3 ಬಂಧನ, 3 ಪ್ರಕರಣ ಪತ್ತೆ,1.48 ಲಕ್ಷ ರೂ. ಮೌಲ್ಯದ ವಾಹನ ವಶ. ಎನ್.ಆರ್.ಠಾಣೆ: ಇಬ್ಬರ ಬಂಧನ, 1 ಪ್ರಕರಣ ಪತ್ತೆ, 25 ಸಾವಿರ ರೂ. ಮೌಲ್ಯದ ವಾಹನ ವಶಕ್ಕೆ ಪಡೆದಿರುವುದಾಗಿ ಮಾಹಿತಿ ನೀಡಿದರು

